ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 171

22–12–2025 ಸೋಮವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 171

# ‘ಪಲ್ಸ್ ಪೋಲಿಯೊ ಲಸಿಕಾ’ ಅಭಿಯಾನಕ್ಕೆ ಸಿಎಂ ಚಾಲನೆ



**ಬೆಂಗಳೂರು:** ಇಂದಿನಿಂದ ರಾಜ್ಯಾದ್ಯಂತ ‘ರಾಷ್ಟ್ರೀಯ ಪಲ್ಸ್ ಪೋಲಿಯೋ’ ಲಸಿಕಾ ಕಾರ್ಯಕ್ರಮ ನಡೆಯುತ್ತಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಯಾನಕ್ಕೆ ಚಾಲನೆ ನೀಡಿದರು.

ಗೃಹ ಕಚೇರಿ ಕೃಷ್ಣಾದಲ್ಲಿ ಮಕ್ಕಳಿಗೆ ಪೋಲಿಯೋ ಹನಿ ಹಾಕುವ ಮೂಲಕ ರಾಷ್ಟ್ರೀಯ ಲಸಿಕಾ ದಿನವನ್ನು ಉದ್ಘಾಟಿಸಿದರು. ಗೃಹ ಸಚಿವ ಡಾ. ಜಿ. ಪರಮೇಶ್ವರ್, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮತ್ತಿತರರು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ, ಪ್ರತಿಯೊಬ್ಬರೂ ತಮ್ಮ 5 ವರ್ಷದೊಳಗಿನ ಮಕ್ಕಳಿಗೆ ತಪ್ಪದೇ ಪೋಲಿಯೊ ಲಸಿಕೆ ಹಾಕಿಸುವ ಮೂಲಕ “ಪೋಲಿಯೊ ಮುಕ್ತ ಭಾರತ”ದ ನಮ್ಮ ಅಭಿಯಾನಕ್ಕೆ ಬೆಂಬಲವಾಗಿ ನಿಲ್ಲಬೇಕು ಎಂದು ಮನವಿ ಮಾಡಿದರು.

ಇಂದು ನೀವು ಮಗುವಿಗೆ ಹಾಕಿಸುವ ಎರಡು ಹನಿ ಲಸಿಕೆ, ಅದರ ಭವಿಷ್ಯವನ್ನು ಶಾಶ್ವತ ಅಂಗವೈಕಲ್ಯದಿಂದ ರಕ್ಷಿಸಲಿದೆ ಎಂದು ತಿಳಿಸಿದರು. ನಿಮ್ಮ ಮನೆಯಲ್ಲಿ 5 ವರ್ಷದೊಳಗಿನ ಪುಟ್ಟ ಮಕ್ಕಳಿದ್ದಲ್ಲಿ ಇಂದಿನಿಂದ ಡಿಸೆಂಬರ್ 24ರ ಒಳಗಾಗಿ ತಪ್ಪದೇ ಸಮೀಪದ ಲಸಿಕಾ ಕೇಂದ್ರಕ್ಕೆ ತೆರಳಿ ಪೋಲಿಯೋ ಲಸಿಕೆ ಹಾಕಿಸಿ, ಪೋಲಿಯೋ ಮುಕ್ತ ಭಾರತ ಅಭಿಯಾನದ ಜೊತೆಯಾಗಿ ಎಂದು ಹೇಳಿದರು.

ಜಿಲ್ಲಾ ಕೇಂದ್ರಗಳಲ್ಲಿಯೂ ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮಕ್ಕೆ ಚಾಲನೆ ದೊರೆತಿದ್ದು, ಐದು ವರ್ಷದೊಳಗಿನ ಮಕ್ಕಳಿಗೆ ಲಸಿಕೆ ಹಾಕಿಸಲಾಗುತ್ತಿದೆ.

# ಇನ್ಮುಂದೆ ಪಿಯೂಸಿ ವಿದ್ಯಾರ್ಥಿಗಳಿಗೂ ಮಧ್ಯಾಹ್ನದ ಬಿಸಿಯೂಟ

**ಬೆಂಗಳೂರು, ಡಿ. 21:** ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಹಾಜರಾತಿಯನ್ನು ಹೆಚ್ಚಿಸುವ ದೃಷ್ಟಿಯಿಂದ ಜಾರಿಗೊಳಿಸಿರುವ ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ಇದೀಗ ಪೂರ್ವ ಪ್ರಾಥಮಿಕ ಮತ್ತು ಪಿಯುಸಿ ವಿದ್ಯಾರ್ಥಿಗಳಿಗೂ ವಿಸ್ತರಿಸಲಾಗುವುದು ಎಂದು ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಎಲ್ ಕೆಜಿ ಹಾಗೂ ಯುಕೆಜಿ ಓದುವ ಹಾಗೂ ಪಿಯುಸಿ ಓದುವ ಎಲ್ಲಾ ಮಕ್ಕಳಿಗೂ ನೆರವಾಗಲಿದೆ. ಇದರಿಂದ ಮಧ್ಯಾಹ್ನದ ಬಿಸಿಯೂಟ ಯೋಜನೆಗೆ ಹೆಚ್ಚುವರಿಯಾಗಿ 200 ಕೋಟಿ ರೂಪಾಯಿ ವೆಚ್ಚವಾಗಲಿದೆ’ ಎಂದರು.

ಹೊಸದಾಗಿ ಆರಂಭವಾಗುವ ಶಾಲೆಗಳು ಸೇರಿದಂತೆ ರಾಜ್ಯದ ಎಲ್ಲ ಕರ್ನಾಟಕ ಪಬ್ಲಿಕ್ ಶಾಲೆಗಳಿಗೆ ಸಂಗೀತ ಹಾಗೂ ದೈಹಿಕ ಶಿಕ್ಷಣ ಶಿಕ್ಷಕರನ್ನು ನೇಮಕ ಮಾಡಲಾಗುವುದು. ಸರ್ಕಾರಿ ಶಾಲೆಗಳಲ್ಲಿ ಸ್ಕೂಲ್ ಬ್ಯಾಂಡ್ ಕಡ್ಡಾಯವಾಗಿ ಆರಂಭಿಸಲಾಗುವುದು ಎಂದು ತಿಳಿಸಿದರು.

# ರಾಜ್ಯ ಸರ್ಕಾರದಲ್ಲಿನ ನಾಯಕತ್ವ ಗೊಂದಲ ಹೈಕಮಾಂಡ್ ಸೃಷ್ಟಿಸಿಲ್ಲ

## ಮಲ್ಲಿಕಾರ್ಜುನ ಖರ್ಗೆ ಗರಂ

**ಕಲಬುರಗಿ:** ರಾಜ್ಯದಲ್ಲಿ ಸಿಎಂ ಕುರ್ಚಿ ಕದನ ತೀವ್ರಸ್ವರೂಪ ಪಡೆದುಕೊಳ್ಳುತ್ತಿದ್ದು, ನಾಯಕತ್ವ ಬದಲಾವಣೆ ಬಗ್ಗೆ ಹೈಕಮಾಂಡ್ ಯಾವುದೇ ಗೊಂದಲ ಸೃಷ್ಟಿ ಮಾಡಿಲ್ಲ. ಇದು ಸ್ಥಳೀಯ ಮಟ್ಟದಲ್ಲೇ ಇದ್ದು, ಸ್ಥಳೀಯ ನಾಯಕರೇ ಇದನ್ನ ಬಗೆಹರಿಸಿಕೊಳ್ಳಬೇಕು ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಭಾನುವಾರ ಸ್ಪಷ್ಟಪಡಿಸಿದ್ದಾರೆ.



ಇಂದು ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಖರ್ಗೆ, “ಹೈಕಮಾಂಡ್ ಯಾವುದೇ ಗೊಂದಲವನ್ನು ಸೃಷ್ಟಿಸಿಲ್ಲ. ಅದು ಸ್ಥಳೀಯ ಮಟ್ಟದಲ್ಲೇ ಇದೆ” ಎಂದರು. ನಾಯಕತ್ವ ಬದಲಾವಣೆ ಗೊಂದಲದ ಬಗ್ಗೆ “ಹೈಕಮಾಂಡ್ ಮೇಲೆ ಆರೋಪ ಹೊರಿಸುವುದು ಎಷ್ಟು ಸರಿ?”. ಹೈಕಮಾಂಡ್ ಅನ್ನು ದೂಷಿಸುವ ಬದಲು ಸ್ಥಳೀಯ ನಾಯಕರು ಆಂತರಿಕ ಗೊಂದಲವನ್ನು ಸರಿಪಡಿಸಿಕೊಳ್ಳಬೇಕು ಎಂದು ಖರ್ಗೆ ತಾಕೀತು ಮಾಡಿದ್ದಾರೆ. ಕಾಂಗ್ರೆಸ್ ಯಾರೋ ಒಬ್ಬ ನಾಯಕನಿಂದ ಬೆಳೆದಿಲ್ಲ. ಹೀಗಾಗಿ ಯಾರೊಬ್ಬರೂ ನನ್ನಿಂದ ಅಧಿಕಾರಕ್ಕೆ ಬಂತು, ನಾನೇ ಪಕ್ಷ ಕಟ್ಟಿದ್ದೇನೆಂದು ಹೇಳಬಾರದು. ಕಾಂಗ್ರೆಸ್ ಪಕ್ಷ ಕಾರ್ಯಕರ್ತರಿಂದ ಕಟ್ಟಿದ ಪಕ್ಷ. ಪಕ್ಷ ಅಂದ ಮೇಲೆ ಎಲ್ಲರ ಪಾತ್ರವೂ ಇರುತ್ತೆ. ಕೆಲ ಕಾರ್ಯಕರ್ತರು ಕೂಡ ಒಬ್ಬರಿಂದಲೇ ಪಕ್ಷ ಇದೆ ಎನ್ನಬಾರದು ಎಂದು ನೇರವಾಗಿ ಯಾರ ಹೆಸರನ್ನೂ ಹೇಳದೆ ಮಾರ್ಮಿಕವಾಗಿ ನುಡಿದರು.

ಪಕ್ಷದ ಕಾರ್ಯಕರ್ತರು ತಮ್ಮ ವೈಯಕ್ತಿಕ ಕೊಡುಗೆಗಳ ಬಗ್ಗೆ ಹೆಮ್ಮೆ ಪಡುವುದನ್ನು ಮೊದಲು ನಿಲ್ಲಿಸಬೇಕು ಮತ್ತು ಕಾರ್ಯಕರ್ತರ ಸಾಮೂಹಿಕ ಪ್ರಯತ್ನವನ್ನು ಗುರುತಿಸಬೇಕು ಎಂದು ರಾಜ್ಯಸಭೆಯಲ್ಲಿ ವಿರೋಧ ಪಕ್ಷದ ನಾಯಕ ಹೇಳಿದರು.

ಇನ್ನು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಪಕ್ಷದ ಹೈಕಮಾಂಡ್ ಭೇಟಿ ಮಾಡಲು ದೆಹಲಿಗೆ ತೆರಳುತ್ತಿರುವ ಬಗ್ಗೆ ಕೇಳಿದಾಗ, “ಈ ವಿಷಯದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ” ಎಂದು ಮಲ್ಲಿಕಾರ್ಜುನ ಖರ್ಗೆ ಹೇಳಿದರು.

# ಕಾಫಿಗೆ ಹೊಸ ಮಾರುಕಟ್ಟೆ ವ್ಯವಸ್ಥೆ ಹುಡುಕಬೇಕಿದೆ: ಪ್ರಲ್ಹಾದ ಜೋಷಿ

**ಚಿಕ್ಕಮಗಳೂರು :** ಭಾರತದ ಕಾಫಿಗೆ ಜಾಗತಿಕ ಹಾಗೂ ದೇಶೀಯ ಮಟ್ಟದಲ್ಲಿ ಹೊಸ ಮಾರುಕಟ್ಟೆಯನ್ನು ಹುಡುಕಬೇಕಿದೆ. ಸಂಶೋಧನೆಗಳು ಕೇವಲ ಬೆಳೆ, ತಳಿಗಳಿಗೆ ಸೀಮಿತವಾಗದೆ ಉತ್ತಮ ಮಾರುಕಟ್ಟೆ ಅನ್ವೇಷಣೆ ನಿಟ್ಟಿನಲ್ಲೂ ನಡೆಯಬೇಕಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳು, ಅಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ನೂತನ ಹಾಗೂ ನವೀಕರಿಸಬಹುದಾದ ಇಂಧನ ಖಾತೆ ಸಚಿವ ಪ್ರಲ್ಹಾದ ಜೋಷಿ ಹೇಳಿದರು.

ಕಾಫಿ ಮಂಡಳಿ ಮತ್ತು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದ ವತಿಯಿಂದ ಇಂದು ನಡೆದ ಬಾಳೆಹೊನ್ನೂರಿನ ಕೇಂದ್ರೀಯ ಕಾಫಿ ಸಂಶೋಧನಾ ಸಂಸ್ಥೆ(ಸಿ.ಸಿ.ಆರ್.ಐ.)ಯ ಶತಮಾನೋತ್ಸವ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಜಗತ್ತಿನಾದ್ಯಂತ ಭಾರತದ ಕಾಫಿಗೆ ಬೇಡಿಕೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಉತ್ತಮ ಗುಣಮಟ್ಟದ ಪ್ಯಾಕೇಜ್ ಜೊತೆಗೆ ಜಾಗತಿಕ ಮಾರುಕಟ್ಟೆಯನ್ನು ಅಧ್ಯಯನ ಮಾಡಿ ನಮ್ಮ ಕಾಫಿ ಹೆಚ್ಚು ದೇಶಗಳಿಗೆ ತಲುಪುವುದು ಹೇಗೆ ಎನ್ನುವ ಬಗ್ಗೆ ಚಿಂತನೆ ಮಾಡಬೇಕಿದೆ ಎಂದರು.

ಕಳೆದ ಹಲವಾರು ವರ್ಷಗಳಲ್ಲಿ ಅನೇಕ ರೀತಿಯ ಬೆಳವಣಿಗೆ ಕಾಫಿ ಕ್ಷೇತ್ರದಲ್ಲಿ ನಡೆದಿದ್ದರೂ ಭಾರತ ಜಾಗತಿಕ ಮಟ್ಟದಲ್ಲಿ ಶಕ್ತಿಶಾಲಿಯಾಗಿ ಬೆಳೆಯುತ್ತಿಲ್ಲ. ಇತ್ತೀಚಿನ ದಿನಗಳಲ್ಲಿ ಕಾಫಿ ಮೇಲಿನ ಜಿಎಸ್‌ಟಿಯನ್ನು ಸಹ ಶೇ.18 ರಿಂದ ಶೇ.5 ಕ್ಕೆ ಕೇಂದ್ರ ಸರ್ಕಾರ ಇಳಿಸಿದೆ. ಜಿಎಸ್‌ಟಿ ಬರುವ ಮುಂಚೆ ಒಟ್ಟಾರೆ ಶೇ.35 ರಷ್ಟು ತೆರಿಗೆ ಬೀಳುತ್ತಿತ್ತು. ಈಗ ಯಾವುದೇ ಆಹಾರ ಉತ್ಪನ್ನಗಳಿಗೆ ಕೇವಲ ಶೇ.5 ಜಿಎಸ್‌ಟಿ ವಿಧಿಸಲಾಗುತ್ತಿದೆ ಎಂದರು.

ಇದರ ಜೊತೆಗೆ ಯುಕೆ ಸೇರಿದಂತೆ ಹಲವು ದೇಶಗಳ ಜೊತೆಗೆ ಮುಕ್ತ ವಾಣಿಜ್ಯ ಒಪ್ಪಂದ ಆಗಿದೆ. ಭಾರತ ಜಾಗತಿಕ ಮಟ್ಟದಲ್ಲಿ ಶಕ್ತಿಯಾಗಿ ಬೆಳೆಯುತ್ತಿದೆ. ಜಗತ್ತಿನ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಆರ್ಥಿಕ ವ್ಯವಸ್ಥೆ ನಮ್ಮದಾಗಿದೆ. ಜಗತ್ತಿನ ನಾಲ್ಕನೇ ಅತೀ ದೊಡ್ಡ ಆರ್ಥಿಕ ಶಕ್ತಿಯಾಗಿಯೂ ಭಾರತ ಹೊರಹೊಮ್ಮಿದೆ. ಕಳೆದ 10 ವರ್ಷದಲ್ಲಿ ನಮ್ಮ ದೇಶದ ಒಟ್ಟು ವಾಣಿಜ್ಯ ವಹಿವಾಟು ದುಪ್ಪಟ್ಟಾಗಿದೆ. ಇದೇ ವೇಳೆ ಮೂಲ ಸೌಕರ್ಯಗಳಿಗಾಗಿ ಅತೀ ಹೆಚ್ಚು ಅನುದಾನ ನೀಡುತ್ತಿರುವ ದೇಶ ಯಾವುದಾದರೂ ಇದ್ದರೆ ಅದು ಭಾರತ ಎಂದರು. ಸೌರ ವಿದ್ಯುತ್‌ಗೆ ಹೆಚ್ಚು ಪ್ರೋತ್ಸಾಹ ನೀಡಿದ ಪರಿಣಾಮ 12 ರಿಂದ 13 ರೂ. ಇದ್ದ ವಿದ್ಯುತ್ ಬೆಲೆ ಇಂದು 2 ರಿಂದ 2.20 ರೂ.ಗೆ ಲಭ್ಯವಾಗುತ್ತಿದೆ. ಒನ್ ಗ್ರಿಡ್ ಒನ್ ನೇಷನ್ ಮಾಡಿದ ಪರಿಣಾಮ ರಾಜ್ಯಗಳ ನಡುವೆ ವಿದ್ಯುತ್ ಹಂಚಿಕೆ ಒಪ್ಪಂದ ನಡೆಯಲು ಸಾಧ್ಯವಾಗುತ್ತಿದೆ ಎಂದರು.



ಅನೇಕ ದೇಶಗಳ ಜೊತೆಗೆ ಮುಕ್ತ ವಾಣಿಜ್ಯ ಒಪ್ಪಂದವನ್ನು ಮಾಡಿಕೊಳ್ಳಲಾಗುತ್ತಿದೆ. ಹಲವು ದೇಶಗಳು ಚಹಾದಿಂದ ಕಾಫಿ ಕಡೆಗೆ ಒಲವು ತೋರಲಾರಂಭಿಸಿವೆ. ಈ ಕಾರಣ–ಕ್ಕೆ ನಾವು ಉತ್ತಮ ಗುಣಮಟ್ಟದ ಕಾಫಿ, ಜೊತೆಗೆ ಉತ್ತಮ ಪ್ಯಾಕಿಂಗ್, ಪೆಸ್ಟಿಸೈಡ್ ಕಡಿಮೆ ಮಾಡಿ ಜಾಗತಿಕ ಮಟ್ಟದಲ್ಲಿ ನಮ್ಮ ಉತ್ಪನ್ನದ ಸ್ವೀಕಾರತೆಯನ್ನು ವಿಸ್ತರಿಸಬೇಕಿದೆ ಎಂದರು.

ನಮ್ಮ ಕೌಶಲ್ಯ, ಪ್ಯಾಕಿಂಗ್ ಮತ್ತು ಗುಣಮಟ್ಟ ಸುಧಾರಿಸಿಕೊಳ್ಳಬೇಕು. 14 ಕಾರ್ಯತಂತ್ರದ ವಲಯಗಳಲ್ಲಿ ಭಾರತ ಸರ್ಕಾರ ಸುಮಾರು 2 ಲಕ್ಷ ಕೋಟಿ ರೂ.ಗಳ ಹೂಡಿಕೆ ಮಾಡಿದೆ. ಆರಂಭದಲ್ಲಿ ಸುಮಾರು 24 ಸಾವಿರ ಕೋಟಿ ರೂ.ಗಳ ಸಹಾಯಧನವನ್ನು ಬಿಡುಗಡೆ ಮಾಡಲಾಗಿದೆ. ಇದರಿಂದ ಉತ್ಪಾದನೆ ಹೆಚ್ಚಾಗಿ ಉದ್ಯೋಗ ಸೃಷ್ಟಿ ಆಗುತ್ತಿದೆ. ಜಾಗತಿಕ ಮಟ್ಟದಲ್ಲಿ ಗುಣಮಟ್ಟವನ್ನೂ ಉಳಿಸಿಕೊಂಡಲ್ಲಿ ಬೇಡಿ–ಕೆಯೂ ಹೆಚ್ಚಾಗಲಿದೆ ಎಂದು ಹೇಳಿದರು.

ತೀರಾ ಇತ್ತೀಚಿನ ದಿನಗಳವರೆಗೆ ನಾವು ಮೊಬೈಲ್‌ಗಳನ್ನು ಬೇರೆ ದೇಶಗಳಿಂದ ತರಿಸಿಕೊಳ್ಳಬೇಕಿತ್ತು. ಆದರೆ ಜಾಗತಿಕ ಮಾರುಕಟ್ಟೆಯಲ್ಲಿ ಶೇ.30 ರಷ್ಟು ಭಾರತದ ಮೊಬೈಲ್‌ಗಳು ಲಭ್ಯವಿದೆ. ಆರಂಭದಲ್ಲಿ ಕೇವಲ ಎರಡು ಕಂಪನಿಗಳು ಮಾತ್ರ ಮೊಬೈಲ್ ತಯಾರಿಸುತ್ತಿದ್ದರೆ ಇಂದು 300 ಕ್ಕೂ ಹೆಚ್ಚು ಉತ್ಪಾದನಾ ಘಟಕಗಳು ಕಾರ್ಯನಿರ್ವಹಿಸುತ್ತಿವೆ. ಹತ್ತು ವರ್ಷಕ್ಕೆ ಮೊದಲು ಇಡೀ ದೇಶದಲ್ಲಿ 90 ಸಾವಿರ ಕಿ.ಮೀ. ರಾಷ್ಟ್ರೀಯ ಹೆದ್ದಾರಿ ಇತ್ತು. ಇಂದು 1.55 ಲಕ್ಷ ಕಿ.ಮೀ. ಇದೆ. ಕರ್ನಾಟಕದಲ್ಲೇ 3000 ಕಿ.ಮೀ. ರಾಷ್ಟ್ರೀಯ ಹೆದ್ದಾರಿಯನ್ನು ನಮ್ಮ ಸರ್ಕಾರ ಬಂದ ಮೇಲೆ ನಿರ್ಮಿಸಲಾಗಿದೆ ಎಂದರು.

ವಿಧಾನ ಪರಿಷತ್ ಉಪಸಭಾಪತಿ ಎಂ.ಕೆ.ಪ್ರಾಣೇಶ್ ಮಾತನಾಡಿ, ಮುಂದಿನ ಹತ್ತು ವರ್ಷದಲ್ಲಿ ಕಾಫಿ ಕ್ಷೇತ್ರದಲ್ಲಿ ಹಮ್ಮಿಕೊಂಡಿರುವ ಗುರಿ ತಲುಪಲು ನಿರಂತರ ಶ್ರಮ ಹಾಕಬೇಕಿದೆ ಎಂದು ತಿಳಿಸಿದರು. ಹವಾಮಾನ ವೈಪರೀತ್ಯಗಳು, ಕಾರ್ಮಿಕರ ಸಮಸ್ಯೆ, ವನ್ಯ ಪ್ರಾಣಿಗಳೊಂದಿಗಿನ ಸಂಘರ್ಷ ಎಲ್ಲದರ ಮಧ್ಯೆ ಬದುಕುತ್ತಿದ್ದೇವೆ. ನಮ್ಮ ಗುರಿ ತಲುಪಬೇಕೆಂದರೆ ಮೊದಲು ಈ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕಿದೆ. ಈ ಬಗ್ಗೆ ಕೇಂದ್ರ ಸರ್ಕಾರ ಮತ್ತು ಕಾಫಿ ಮಂಡಳಿ ಗಮನಹರಿಸಿ ಸಮಸ್ಯೆ ಪರಿಹಾರಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು. ಅಧ್ಯಯನಗಳನ್ನು ಇನ್ನಷ್ಟು ಹೆಚ್ಚಿಸಬೇಕು. ವಿಜ್ಞಾನಿಗಳಿಗೆ ಅಗತ್ಯ ಉತ್ತೇಜನ ನೀಡಬೇಕು ಎಂದರು.

ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಟಿ.ಡಿ.ರಾಜೇಗೌಡ, ಸಂಸದರಾದ ಕೋಟ ಶ್ರೀನಿವಾಸ ಪೂಜಾರಿ (ಉಡುಪಿ–ಚಿಕ್ಕಮಗಳೂರು ಕ್ಷೇತ್ರ), ಶಾಸಕ ಹೆಚ್.ಡಿ.ತಮ್ಮಯ್ಯ, ವಿಧಾನ ಪರಿಷತ್ ಸದಸ್ಯರಾದ ಸಿ.ಟಿ.ರವಿ, ಮಾಜಿ ಸಚಿವರಾದ ಡಿ.ಎನ್.ಜೀವರಾಜ್, ಕೇಂದ್ರ ವಾಣಿಜ್ಯ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿ (ಪ್ಲಾಂಟೇಶನ್) ನಿತಿನ್‌ಕುಮಾರ್ ಯಾದವ್, ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್, ಜಿಪಂ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನಾ ಮತ್ತಿತರರು ಕಾರ್ಯಕ್ರಮದಲ್ಲಿಸದ್ದರು.

# ಕನ್ನಡ ಕ್ಯಾಲಿಗ್ರಫಿಗೆ ಅಂತರರಾಷ್ಟ್ರೀಯ ಮಟ್ಟದಲ್ಲಿ ಐತಿಹಾಸಿಕ ಗೌರವ

**ದಾವಣಗೆರೆ:** ದಕ್ಷಿಣ ಕೊರಿಯಾದ ಚಿಯಾಂಗ್ಜು ನಗರದಲ್ಲಿ ವರ್ಲ್ಡ್ ಕ್ಯಾಲಿಗ್ರಫಿ ಅಸೋಸಿಯೇಷನ್ ಆಯೋಜಿಸಿದ 22ನೇ ಚಿಯಾಂಗ್ಜು ಜಿಕ್‌ಜಿ & ಹುನ್‌ಮಿನ್‌ಜಿಯೊಂಗುಮ್ ವಿಶ್ವ ಕ್ಯಾಲಿಗ್ರಫಿ ಪ್ರದರ್ಶನದಲ್ಲಿ ಕನ್ನಡ ಕ್ಯಾಲಿಗ್ರಫಿ ಕ್ಷೇತ್ರಕ್ಕೆ ಅಂತರರಾಷ್ಟ್ರೀಯ ಮಟ್ಟದಲ್ಲಿ ಅಪರೂಪದ ಮತ್ತು ಐತಿಹಾಸಿಕ ಗೌರವ ಲಭಿಸಿದೆ.



ಕನ್ನಡ ಕ್ಯಾಲಿಗ್ರಾಫರ್ ಸುರೇಶ್ ಎಸ್. ವಾಘ್ಮೋರೆ ಅವರಿಗೆ ಟಾಪ್ ಎಕ್ಸಲೆನ್ಸ್ ಅವಾರ್ಡ್ ಪ್ರದಾನ ಮಾಡಲಾಗಿದೆ. ಈ ಪ್ರಶಸ್ತಿ ಮೊದಲ ಬಾರಿಗೆ ಕನ್ನಡ ಕ್ಯಾಲಿಗ್ರಫಿಗೆ ಲಭಿಸಿರುವ ಅಂತರರಾಷ್ಟ್ರೀಯ ಗೌರವ ಎಂಬುದು ವಿಶೇಷ.

ವಿಶ್ವದ ಅನೇಕ ದೇಶಗಳಿಂದ ಕಲಾವಿದರು ಭಾಗವಹಿಸಿದ್ದ ಈ ಪ್ರತಿಷ್ಠಿತ ಪ್ರದರ್ಶನದಲ್ಲಿ, ಸುರೇಶ್ ಎಸ್. ವಾಘ್ಮೋರೆ ಅವರ ಕನ್ನಡ ಕ್ಯಾಲಿಗ್ರಫಿ ಕೃತಿ ಜ್ಯೂರಿಗಳ ವಿಶೇಷ ಮೆಚ್ಚುಗೆಗೆ ಪಾತ್ರವಾಯಿತು. ಕನ್ನಡ ಲಿಪಿಯ ಸೌಂದರ್ಯ, ಅಕ್ಷರಗಳ ವಿನ್ಯಾಸ, ಹರಿವು ಮತ್ತು ಅದರ ಸಾಂಸ್ಕೃತಿಕ ಆಳವನ್ನು ಸಮಕಾಲೀನ ದೃಷ್ಟಿಕೋನದೊಂದಿಗೆ ಪ್ರಸ್ತುತಪಡಿಸಿರುವುದು ಪ್ರಶಸ್ತಿಗೆ ಪ್ರಮುಖ ಕಾರಣವಾಗಿದೆ ಎಂದು ಜ್ಯೂರಿ ಸದಸ್ಯರು ತಿಳಿಸಿದ್ದಾರೆ.

ಕನ್ನಡ ಲಿಪಿಯು ಶಿಲಾಶಾಸನಗಳು, ತಾಮ್ರಶಾಸನಗಳು ಮತ್ತು ತಾಳೆಹಸ್ತಪ್ರತಿಗಳ ಮೂಲಕ ಶತಮಾನಗಳ ಕಾಲ ಬೆಳೆಯುತ್ತಾ ಬಂದ ಶ್ರೀಮಂತ ಪರಂಪರೆಯನ್ನು ಹೊಂದಿದೆ. ಈ ಇತಿಹಾಸವನ್ನು ಆಳವಾಗಿ ಅಧ್ಯಯನ ಮಾಡಿ, ಅದನ್ನು ಸಮಕಾಲೀನ ಕ್ಯಾಲಿಗ್ರಫಿ ರೂಪದಲ್ಲಿ ಮಂಡಿಸಿರುವುದು ಸುರೇಶ್ ಅವರ ಕೆಲಸದ ವಿಶೇಷತೆ. ಅವರು ಲಿಪಿಯನ್ನು ಕೇವಲ ಬರವಣಿಗೆಯ ಸಾಧನವಾಗಿ ಮಾತ್ರವಲ್ಲದೆ, ಒಂದು ಜೀವಂತ ಸಾಂಸ್ಕೃತಿಕ ಅಭಿವ್ಯಕ್ತಿಯಾಗಿದೆ.

ಈ ಸಾಧನೆ ಕನ್ನಡ ಭಾಷೆ ಮತ್ತು ಲಿಪಿಗೆ ಜಾಗತಿಕ ಮಟ್ಟದಲ್ಲಿ ಹೆಚ್ಚಿನ ಗಮನ ಸೆಳೆಯುವಂತಾಗಿದೆ. ಇದರಿಂದ ಕನ್ನಡ ಕ್ಯಾಲಿಗ್ರಫಿಯು ಸ್ಥಳೀಯ ಮಟ್ಟಕ್ಕೆ ಮಾತ್ರ ಸೀಮಿತವಲ್ಲದೆ, ಅಂತರರಾಷ್ಟ್ರೀಯ ಕಲಾ ವೇದಿಕೆಯಲ್ಲಿ ತನ್ನದೇ ಆದ ಸ್ಥಾನವನ್ನು ಹೊಂದಿದೆ ಎಂಬುದು ಸ್ಪಷ್ಟವಾಗಿದೆ. ಇದೇ ಮೊದಲ ಬಾರಿಗೆ ಕನ್ನಡ ಕ್ಯಾಲಿಗ್ರಫಿಗೆ ಈ ಮಟ್ಟದ ಅಂತರರಾಷ್ಟ್ರೀಯ ಪ್ರಶಸ್ತಿ ಲಭಿಸಿರುವುದು ಕನ್ನಡಿಗರಿಗೂ ಹೆಮ್ಮೆಯ ವಿಷಯವಾಗಿದೆ.

ಈ ಗೌರವ ನನ್ನ ವೈಯಕ್ತಿಕ ಸಾಧನೆಯಷ್ಟೇ ಅಲ್ಲ, ಕನ್ನಡ ಲಿಪಿ ಮತ್ತು ಅದರ ಪರಂಪರೆಗೆ ದೊರೆತ ಗೌರವ. ಕರ್ನಾಟಕದಿಂದ ಕೊರಿಯಾ ತನಕ ಕನ್ನಡ ಲಿಪಿಯ ಸೌಂದರ್ಯವನ್ನು ತಲುಪಿಸುವ ಅವಕಾಶ ದೊರೆತಿರುವುದು ನನಗೆ ಅಪಾರ ಸಂತೋಷ ನೀಡಿದೆ ಎಂದು ಪ್ರಶಸ್ತಿ ಪುರಸ್ಕೃತ ಸುರೇಶ್ ಎಸ್. ವಾಘ್ಮೋರೆ ತಿಳಿಸಿದ್ದಾರೆ.

ಈ ಪ್ರಶಸ್ತಿ ಮುಂದಿನ ಪೀಳಿಗೆಗೆ ಕನ್ನಡ ಕ್ಯಾಲಿಗ್ರಫಿಯ ಮಹತ್ವವನ್ನು ಪರಿಚಯಿಸುವಲ್ಲಿ ಪ್ರೇರಣೆಯಾಗಲಿದೆ ಎಂಬ ಅಭಿಪ್ರಾಯವನ್ನು ಕಲಾವಿದ ವಲಯ ವ್ಯಕ್ತಪಡಿಸಿದೆ. ಕನ್ನಡ ಲಿಪಿಯ ಶೋಧನೆ, ಸಂರಕ್ಷಣೆ ಮತ್ತು ಸಮಕಾಲೀನ ಕಲಾ ಅಭಿವ್ಯಕ್ತಿಗೆ ಈ ಗೌರವ ಹೊಸ ಉತ್ತೇಜನ ನೀಡಲಿದೆ ಎಂದು ನಿರೀಕ್ಷಿಸಲಾಗಿದೆ ಎಂದವರು ಪತ್ರಿಕಾ ಪ್ರಕಟಣೆಯಲ್ಲಿ ಆಶಯ ವ್ಯಕ್ತಪಡಿಸಿದ್ದಾರೆ.

# ಆರೋಗ್ಯವಂತ ಜೀವನಕ್ಕೆ ಯೋಗ, ಪ್ರಕೃತಿ ಚಿಕಿತ್ಸೆ ಅತ್ಯುತ್ತಮ ಮಾರ್ಗ

## ಪಾಂಡೋಮಟ್ಟಿ ವಿರಕ್ತ ಮಠದ ಡಾ. ಗುರುಬಸವ ಸ್ವಾಮಿಗಳು



**ಚನ್ನಗಿರಿ:** ಒತ್ತಡ ಹಾಗೂ ಜೀವನಶೈಲಿ ರೋಗಗಳಿಂದ ಹಲವು ರೋಗಗಳು ಇಂದು ಜನಸಾಮಾನ್ಯರನ್ನು ಬಾಧಿಸುತ್ತಿದ್ದು, ಆರೋಗ್ಯವಂತ ಜೀವನಕ್ಕೆ ಯೋಗ ಮತ್ತು ಪ್ರಕೃತಿ ಚಿಕಿತ್ಸೆ ಅತ್ಯುತ್ತಮ ಮಾರ್ಗ ಎಂದು ಪಾಂಡೋಮಟ್ಟಿ ವಿರಕ್ತ ಮಠದ ಡಾ. ಗುರುಬಸವ ಸ್ವಾಮಿಗಳು ಹೇಳಿದರು.

ಭಾನುವಾರ ಚನ್ನಗಿರಿಯ ಲೋಹಿಯಾ ಭವನದಲ್ಲಿ ಭಾನುವಾರ ಚನ್ನಗಿರಿ ಚನ್ನಮ್ಮಾಜಿ ಲಯನ್ಸ್ ಕ್ಲಬ್ ಮತ್ತು ಹರಪನಹಳ್ಳಿಯ ಜನನಿ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ವತಿಯಿಂದ ಹಮ್ಮಿಕೊಂಡಿದ್ದ ಉಚಿತ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಶಿಬಿರದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಪಂಚಭೂತಗಳಿಂದ ಮಾಡಲ್ಪಟ್ಟ ನಮ್ಮ ಶರೀರಕ್ಕೆ ಅಸ್ವಸ್ಥತೆ ಉಂಟಾದಾಗ ಅದ–ಕ್ಕೆ ಚಿಕಿತ್ಸೆಯೂ ಪಂಚಭೂತಗಳಲ್ಲೇ ಅಡಗಿದೆ. ಆರೋಗ್ಯವೇ ಜೀವನದ ದೊಡ್ಡ ಸಂಪತ್ತು. ಈ ಬಗ್ಗೆ ಜನಸಾಮಾನ್ಯರಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವ ಅಗತ್ಯತೆ ಇದೆ. ಯಾವುದೇ ಅಡ್ಡ ಪರಿಣಾಮಗಳು ಇಲ್ಲದ ಇಂಥ ಚಿಕಿತ್ಸೆಯ ಬಗ್ಗೆ ಜನರು ಒಲವು ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಮುಖ್ಯ ಅತಿಥಿಗಳಾಗಿದ್ದ ಜನನಿ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ಮುಖ್ಯ ವೈದ್ಯಾಧಿಕಾರಿ ಮತ್ತು ನಿರ್ದೇಶಕ ಡಾ.ರಾಜೇಶ್ ಪಾದೇಕಲ್ ಮಾತನಾಡಿ ನಮ್ಮ ಜೀವನಶೈಲಿಯನ್ನು ಆರೋಗ್ಯಕರವಾಗಿ ಪರಿವರ್ತಿಸಿಕೊಂಡು ರೋಗ ಬರದಂತೆ ತಡೆಯುವುದು ಅಗತ್ಯ. ಇತರ ವೈದ್ಯ ಪದ್ಧತಿಗಳು ರೋಗ ಬಂದ ಬಳಿಕ ಔಷಧಿ ನೀಡಿ ಅದನ್ನು ಗುಣಪಡಿಸಿದರೆ, ರೋಗ ಬಾರದಂತೆ ತಡೆಯುವಲ್ಲಿ ಪ್ರಕೃತಿಚಿಕಿತ್ಸೆ ಮುಖ್ಯವಾಗುತ್ತದೆ. ಏಕೈಕ ಔಷಧ ರಹಿತ ಚಿಕಿತ್ಸಾ ವಿಧಾನ ಎನಿಸಿದ ಇಲ್ಲಿ ನಾವು ಸೇವಿಸುವ ಆಹಾರವೇ ನಮಗೆ ಔಷಧಿ. ನಮ್ಮ ಹಿರಿಯರು ಕಂಡುಕೊಂಡಿದ್ದ ಹಲವಾರು ಆರೋಗ್ಯ ಸಂರಕ್ಷಣಾ ಕ್ರಮಗಳನ್ನು ನಾವು ಮತ್ತೆ ಅಳವಡಿಸಿಕೊಳ್ಳುವ ಅಗತ್ಯವಿದೆ ಎಂದರು.

ಸಂಸ್ಥೆಯ ಮಾಧ್ಯಮ ಮತ್ತು ಸಾರ್ವಜನಿಕ ಸಂಪರ್ಕ ಮುಖ್ಯಸ್ಥ ಉದಯಶಂಕರ ಭಟ್ ಮಾತನಾಡಿ ಸಮಾಜದ ಸ್ವಾಸ್ಥ್ಯ ಕಾಪಾಡುವ ನಿಟ್ಟಿನಲ್ಲಿ ಮತ್ತು ಜನರಿಗೆ ಒಳ್ಳೆಯ ಚಿಕಿತ್ಸಾ ವಿಧಾನದ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ ಮಧ್ಯ ಕರ್ನಾಟಕದ ಉದ್ದಗಲಕ್ಕೂ ಇಂಥ ಶಿಬಿರಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು. ಲಯನ್ಸ್ ಕ್ಲಬ್ ಚನ್ನಗಿರಿ ಚನ್ನಮ್ಮಾಜಿ ಅಧ್ಯಕ್ಷ ನಾಗರಾಜ್ ನಾಡಿಗ್ ಮಾತನಾಡಿ ಒತ್ತಡದ ಬದುಕಿನಲ್ಲಿ ಜೀವನಶೈಲಿ ರೋಗಗಳು ಹೆಚ್ಚುತ್ತಿದ್ದು, ಇದನ್ನು ತಡೆದು ಆರೋಗ್ಯವಂತ ಸಮಾಜದ ನಿರ್ಮಾಣದಲ್ಲಿ ಜನನಿ ಅಸ್ಪತ್ರೆ ದೊಡ್ಡ ಹೆಜ್ಜೆ ಇಟ್ಟಿರುವುದು ಶ್ಲಾಘನೀಯ ಎಂದರು. ಲಯನ್ಸ್ ಕಾರ್ಯದರ್ಶಿ ಕೃಷ್ಣಮೂರ್ತಿ, ಖಜಾಂಚಿ ಸುರೇಶ್, ಲಯನ್ಸ್ ಕ್ಲಬ್ ಸದಸ್ಯರಾದ ಮಹೇಶ್ ಕುಮಾರ್ ಜವಳಿ, ರವಿಕುಮಾರ್, ಎಂ.ಬಿ.ಶಿವಕುಮಾರ್, ಅಶೋಕ್ ಎನ್.ಟಿ. ಮಂಜುನಾಥ್, ನರೇಂದ್ರ ಜಿ.ಎಂ, ಯೋಗ ಪ್ರಾಧ್ಯಾಪಕ ಜಯರಾಂ ಮತ್ತಿತರರು ಉಪಸ್ಥಿತರಿದ್ದರು. 100ಕ್ಕೂ ಹೆಚ್ಚು ಮಂದಿ ಫಲಾನುಭವಿಗಳು ಶಿಬಿರದ ಪ್ರಯೋಜನ ಪಡೆದರು.

ಅಗಲಿಕೆ ಸುದ್ದಿ ಭಾರಿ ದೊಡ್ಡ ನೋವು ಹಾಗೂ ದುಃಖವನ್ನು ಅಭಿಮಾನಿಗಳಿಗೆ ತರಿಸಿದೆ.

# ವಿಟಿಯು ಕಾರ್ಯಕಾರಿ ಸಮಿತಿ ಸದಸ್ಯರಾಗಿ ಡಾ. ಮಂಜ ನಾಯ್ಕ್ ಆಯ್ಕೆ

**ದಾವಣಗೆರೆ:** ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಕಾರ್ಯಕಾರಿ ಸಮಿತಿಯ ಸದಸ್ಯರಾಗಿ ನಗರದ ಬಿ.ಡಿ.ಟಿ ತಾಂತ್ರಿಕ ಮಹಾವಿದ್ಯಾಲಯದ ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯುನಿಕೇಶನ್ ವಿಭಾಗದ ಮುಖ್ಯಸ್ಥರು ಹಾಗೂ ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ಮುಖ್ಯಸ್ಥ ಡಾ. ಎನ್ ಮಂಜ ನಾಯ್ಕ್ ಆಯ್ಕೆಯಾಗಿದ್ದಾರೆ.



ಡಾ. ಎನ್ ಮಂಜ ನಾಯ್ಕ್ ಅವರನ್ನು ವಿಶ್ವೇಶ್ವರಯ್ಯ ತಾಂತ್ರಿಕ ಮಹಾವಿದ್ಯಾಲಯದ 10ನೇ ಕಾರ್ಯಕಾರಿ ಸಮಿತಿ ಮಂಡಳಿಯ ಸದಸ್ಯರನ್ನಾಗಿ ಆಯ್ಕೆ ಮಾಡಲಾಗಿದ್ದು, ವಿಶ್ವವಿದ್ಯಾಲಯ ಮಟ್ಟದ ಪ್ರಮುಖ ನೀತಿ ನಿರ್ಣಯ ಹಾಗೂ ಶೈಕ್ಷಣಿಕ ಸುಧಾರಣೆಗಳನ್ನು ರೂಪಿಸುವ ಕಾರ್ಯಕಾರಿ ಮಂಡಳಿಯಲ್ಲಿ ಸ್ಥಾನ ದೊರಕಿದ್ದು, ಬಿಡಿಟಿ ತಾಂತ್ರಿಕ ಮಹಾವಿದ್ಯಾಲಯದ ಸ್ನೇಹ ಬಳಗ ಹಾಗೂ ವಿದ್ಯಾರ್ಥಿಗಳು ಅಭಿನಂದಿಸಿದ್ದಾರೆ.

# ರೈಲು ಪ್ರಯಾಣದ ಟಿಕೆಟ್ ದರ ಪರಿಷ್ಕರಣೆ

**ನವದೆಹಲಿ :** ಭಾರತೀಯ ರೈಲ್ವೆ ಇಲಾಖೆಯು ಇದೇ ತಿಂಗಳ 26ರಿಂದ ಅನ್ವಯವಾಗುವಂತೆ ಹೊಸ ರೈಲು ಟಿಕೆಟ್ ದರವನ್ನು ಪರಿಷ್ಕರಣೆ ಮಾಡಿದೆ. ಪ್ರಯಾಣಿಕರಿಗೆ ಹೆಚ್ಚಿನ ಹೊರೆಯಾಗದಂತೆ ಹಾಗೂ ರೈಲ್ವೆ ಇಲಾಖೆಯಲ್ಲಿ ಅಂತಾರಾಷ್ಟ್ರೀಯ ಮಟ್ಟದ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಹೊಸ ದರವನ್ನು ಪರಿಷ್ಕರಣೆ ಮಾಡಲಾಗಿದೆ. ಇದರಿಂದ ಪ್ರಸಕ್ತ ವರ್ಷ ರೈಲ್ವೆ ಇಲಾಖೆಗೆ ಸುಮಾರು 6 ಕೋಟಿ ಲಾಭ ದೊರೆಯುವ ಸಾಧ್ಯತೆ ಇದೆ ಎಂದು ಅಂದಾಜಿಸಲಾಗಿದೆ. ನೂತನ ದರ ಪರಿಷ್ಕರಣೆಯಂತೆ ಸಾಮಾನ್ಯ ದರ್ಜೆಯಲ್ಲಿ 215 ಕಿ.ಮೀ.ಗಿಂತ ಹೆಚ್ಚಿನ ಪ್ರಯಾಣದಲ್ಲಿ ಪ್ರಯಾಣಿಕರು ಪ್ರತಿ ಕಿ.ಮೀ.ಗೆ 1 ಪೈಸೆ ಹೆಚ್ಚುವರಿಯಾಗಿ ಪಾವತಿಸಬೇಕು.

# ಮಾನಸಿಕ ಹಾಗೂ ಜೀವನದ ಸಮತೋಲನಕ್ಕೆ ಚೆಸ್ ಸಹಕಾರಿ : ದಿನೇಶ್ ಕೆ ಶೆಟ್ಟಿ

**ದಾವಣಗೆರೆ :** ನಗರದ ಶಾಮನೂರು ರಸ್ತೆಯಲ್ಲಿರುವ ಬಾಪೂಜಿ ಬ್ಯಾಂಕ್ ಸಮುದಾಯದಲ್ಲಿ ಪುನೀತ್ ರಾಜಕುಮಾರ್ ಕಪ್ ರಾಜ್ಯ ಮಟ್ಟದ ಚದುರಂಗ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು

ದಾವಣಗೆರೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾಕ್ಟರ್ ಡಾಕ್ಟರ್ ಶಾಮನೂರು ಶಿವಶಂಕರಪ್ಪನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಅರ್ಪಿಸಿ ಕಾರ್ಯಕ್ರಮದ ಉದ್ಘಾಟನೆಯನ್ನು ಮಾಡಿ ಮಾತನಾಡಿದ ದಾವಣಗೆರೆ ಹರಿಹರ ನಗರ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಹಾಗೂ ದಾವಣಗೆರೆ ಜಿಲ್ಲಾ



ಕ್ರೀಡಾಪಟುಗಳ ಸಂಘದ ಅಧ್ಯಕ್ಷರಾದ ದಿನೇಶ್ ಕೆ ಶೆಟ್ಟಿಯವರು ಈ ಪ್ರಾಂತ್ಯದಲ್ಲಿ ಬುದ್ಧಿವಂತಿಕೆಯ ಆಟವಾದ ಚದುರಂಗವು ಇನ್ನೂ ಹೆಚ್ಚಿನ ಮಟ್ಟದಲ್ಲಿ ನಡೆಯಬೇಕು ಯಾಕೆಂದರೆ ಚದುರಂಗದ ಆಟಗಾರರು ಪ್ರತಿಯೊಂದು ನಡೆಗೂ ತಾವೇ ಕಾರಣವಾಗಿದ್ದು ಜೀವನದಲ್ಲೂ ಸಹ ಪ್ರತಿಯೊಂದು ನಿರ್ಧಾರ ತೆಗೆದುಕೊಳ್ಳುವ ಅದರ ಆಗುಹೋಗಗಳ ಬಗ್ಗೆ ವಿಶೇಷವಾಗಿ ಗಮನವಿಟ್ಟು ತನ್ನ ಜೀವನವನ್ನು ಮುಂದುವರಿಸುತ್ತಾರೆ ಹಾಗೂ ಕ್ರೀಡೆ ವಿದ್ಯಾಭ್ಯಾಸ ನಾಣ್ಯದ ಎರಡು ಮುಖಗಳಿದ್ದಂತೆ ಚದುರಂಗ ಆಡುವುದರಿಂದ ಮಾನಸಿಕ ಹಾಗೂ ಸಮತೋಲನಕ್ಕೆ ಸಹಕಾರಿಯಾಗುತ್ತದೆ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಹಾನಗರ ಪಾಲಿಕೆಯ ಮಾಜಿ ಸದಸ್ಯರಾದ ಏ ನಾಗರಾಜ್ ಜಿ ಎಚ್ ಪಾಟೀಲ್ ಕಾಲೇಜ್ ಕಾರ್ಯದರ್ಶಿಗಳಾದ ಮುಸ್ತಫ ದಾವಣಗೆರೆ ಚೆಸ್ ಕ್ಲಬ್ ಕಾರ್ಯದರ್ಶಿಗಳಾದ ಯುವರಾಜ್ ಮಂಜುಳಾ ಸತೀಶ್ ಶೆಟ್ಟಿ ತರುಣ್ ಇನ್ನು ಮುಂತಾದವರಿದ್ದರು.

## ರಾಶಿ ಭವಿಷ್ಯ

### ಮೇಷ ರಾಶಿ

ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ಹಣಕಾಸು ಖಂಡಿತವಾಗಿಯೂ ವೃದ್ಧಿಯಾಗುತ್ತದೆ– ಆದರೆ ಅದೇ ಸಮಯದಲ್ಲಿ ಖರ್ಚೂ ತುಂಬಾ ಹೆಚ್ಚಾಗುತ್ತದೆ. ಸಂಗಾತಿಯು ಸಂತೋಷ ನೀಡಲು ಪ್ರಯತ್ನ ಮಾಡಿದಾಗಿನ ಪೂರ್ಣ ಸಂತೋಷದ ಒಂದು ದಿನ. ಇಂದು ಕಾರ್ಡ್ ನಲ್ಲಿ ಪ್ರಣಯಶಾಲಿ ಪ್ರಭಾವಗಳು ಹೆಚ್ಚಾಗಿವೆ.

### ವೃಷಭ ರಾಶಿ

ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು. ಯುವಕರು ಶಾಲಾ ಯೋಜನೆಗಳಲ್ಲಿ ಕೆಲವು ಸಲಹೆ ಪಡೆಯಬಹುದು. ನಿಮ್ಮ ಪ್ರೇಮದ ಸಂಗಾತಿ ನಿಮ್ಮನ್ನು ಹೊಗಳಬಹುದು. ಅವರನ್ನು ಏಕಾಂಗಿಯಾಗಿ ಈ ಪ್ರಪಂಚದಲ್ಲಿ ಬಿಡಬೇಡಿ.

### ಮಿಥುನ ರಾಶಿ

ಬಸುರಿಯು ನೆಲದ ಮೇಲೆ ನಡೆದುಕೊಂಡು ಹೋಗುವಾಗ ವಿಶೇಷ ಕಾಳಜಿ ವಹಿಸಬೇಕು ಮತ್ತು ಸಾಧ್ಯವಾದರೆ ನಿಮ್ಮ ಸ್ನೇಹಿತರು ಧೂಮಪಾನ ಮಾಡುವಾಗ ಅವರ ಜೊತೆ ನಿಲ್ಲಬೇಡಿ. ಏಕೆಂದರೆ ಅದು ಮಗುವನ್ನು ಬಾಧಿಸಬಹುದು. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ಇಂದು ನೀವು ಹಚ್ಚು ಪ್ರಯತ್ನ ಮಾಡಬೇಕಾಗಿ ಬಂದರೂ ಕೂಡ ಮಕ್ಕಳ ಸಂಗದಲ್ಲಿ ನಿಮ್ಮ ಬಿಡುವಿನ ಸಮಯ ಕಳೆಯಲು ಪ್ರಯತ್ನಿಸಬೇಕು.

### ಕರ್ಕ ರಾಶಿ

ಮಾತನಾಡುವ ಮುನ್ನ ಯೋಚಿಸಿ. ತಿಳಿಯದೆ ನಿಮ್ಮ ಅಭಿಪ್ರಾಯಗಳು ಬೇರೊಬ್ಬರ ಭಾವನೆಗಳಿಗೆ ಧಕ್ಕೆಯುಂಟು ಮಾಡಬಹುದು. ಇಂದು ನೀವು ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಬಹವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ. ಇದರಿಂದ ನೀವು ತುಂಬಾ ಸಂತೋಷಪಡುತ್ತೀರಿ. ಸಂಬಂಧಗಳೊಂದಿಗಿನ ಸಂಬಂಧಗಳು ಹಾಗೂ ಬಂಧಗಳ ನವೀಕರಣದ ಒಂದು ದಿನ. ಪ್ರಣಯ ರೋಮಾಂಚಕಾರಿಯಾಗಿರುತ್ತದೆ ಆದ್ದರಿಂದ ನೀವು ಪ್ರೀತಿಸುವವರನ್ನು ಸಂಪರ್ಕಿಸಿ ಮತ್ತು ದಿನದ ಅತ್ಯುತ್ತಮ ಲಾಭ ಪಡೆಯಿರಿ.

### ಸಿಂಹ ರಾಶಿ

ಸಂತೋಷದಿಂದ ತುಂಬಿದ ಒಳ್ಳೆಯ ದಿನ. ಇಂದು ನೀವು ಯಾತ್ರೆಯಲ್ಲಿ ಹೋಗುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ಗಮನ ಹರಿಸಿ ಅವುಗಳನ್ನು ಕಡಿಯುವ ಸಧ್ಯತೆ ಇದೆ. ವಿಶೇಷವಾಗಿ ನಿಮ್ಮ ಹಣದಚೀಲವನ್ನು ಎಚ್ಚರಿಕೆಯಿಂದಿಡಿ. ನಿಮ್ಮ ಸಂಗಾತಿಯ ಆರೋಗ್ಯದ ಚಿಂತೆ ಉಂಟುಮಾಡಬಹುದು ಮತ್ತು ಸ್ವಲ್ಪ ವೈದ್ಯಕೀಯ ಗಮನದ ಅಗತ್ಯವಿದೆ. ಒಬ್ಬ ಆಸಕ್ತಿದಾಯಕ ವ್ಯಕ್ತಿಯನ್ನು ಭೇಟಿ ಮಾಡುವ ಸಾಧ್ಯತೆಗಳಿವೆ.

### ಕನ್ಯಾ ರಾಶಿ

ಚಾಲನೆ ಮಾಡುವಾಗ ಎಚ್ಚರ ವಹಿಸಿ. ಇಂದು ಸಾಲಗಾರನು ನಿಮಗೆ ಹೇಳದೆ ನಿಮ್ಮ ಖಾತೆಗೆ ಹಣವನ್ನು ಸೇರಿಸಬಹುದು. ಇದರ ಬಗ್ಗೆ ತಿಳಿದು ನೀವು ಆಶ್ಚರ್ಯಚಕಿತರಾಗಬಹು ಮತ್ತು ಸಂತೋಷವು ಪಡೆಯಬಹುದು. ಸಹೋದರಿಯ ವೈವಾಹಿಕ ಸಂಬಂಧದ ಸುದ್ದಿ ನಿಮ್ಮನ್ನು ಸಂತುಷ್ಟಗೊಳಿಸಬಹುದು. ಅವಳಿಂದ ಪ್ರತ್ಯೇಕಗೊಳ್ಳುವ ಬಗ್ಗೆ ಯೋಚಿಸಿ ನಿಮಗೆ ಸ್ವಲ್ಪ ದುಃಖವಾಗುವ ಸಾಧ್ಯತೆಗಳಿವೆ.

### ತುಲಾ ರಾಶಿ

ನಿಮ್ಮ ಒತ್ತಡವನ್ನು ನೀವು ತೊಡೆದುಹಾಕಬಹುದು. ನಿಮ್ಮ ಯಾವುದೇ ಹಳೆಯ ಸ್ನೇಹಿತ ಇಂದು ವ್ಯಾಪಾರದಲ್ಲಿ ಲಾಭ ಗಳಿಸಲು ನಿಮಗೆ ಸಲಹೆ ನೀಡಬಹುದು, ನೀವು ಈ ಸಲಹೆಯನ್ನು ಅನುಸರಿಸಿದರೆ, ನೀವು ಖಂಡಿತವಾಗಿಯೂ ಹಣವನ್ನು ಗಳಿಸುವಿರಿ. ನಿಮ್ಮನ್ನು ಸಂತೋಷವಾಗಿಡುವುದನ್ನೇನಾದರೂ ಮಾಡಿ, ಆದರೆ ಇತರರ ವ್ಯವಹಾರಗಳಿಂದ ದೂರವಿರಿ. ಕೆಲವರಿಗೆ ಹೊಸ ಪ್ರಣಯ ಖಂಡಿತವೆನಿಸುತ್ತದೆ ನಿಮ್ಮ ಪ್ರೀತಿ ನಿಮ್ಮ ಜೀವನವನ್ನು ಅರಳಿಸುತ್ತದೆ.

### ವೃಶ್ಚಿಕ ರಾಶಿ

ಹೆದರಿಕೆ ನಿಮ್ಮ ಸಂತೋಷವನ್ನು ಹಾಳುಗೆಡವಬಹುದು. ನೀವು ಇದು ನಮ್ಮ ಆಲೋಚನೆಗಳು ಮತ್ತು ಕಲ್ಪನೆಯ ಪ್ರಭಾವವೆಂದು ಅರ್ಥಮಾಡಿಕೊಳ್ಳಬೇಕು. ಇದು ಸ್ವಾಭಾವಿಕತೆಯನ್ನು ಕೊಲ್ಲುತ್ತದೆ– ಜೀವನದ ಆನಂದವನ್ನು ಹೀರಿಕೊಳ್ಳುತ್ತದೆ ಹಾಗೂ ನಮ್ಮ ಸಾಮರ್ಥ್ಯವನ್ನು ಕುಂಠಿತಗೊಳಿಸುತ್ತದೆ–ಆದ್ದರಿಂದ ಇದು ನಿಮ್ಮನ್ನು ಹೇಡಿಯಾಗಿಸುವ ಮೊದಲು ಅದನ್ನುಮೊಗ್ಗಿನಲ್ಲೇ ಚಿವುಟಿಹಾಕುವುದು ಒಳ್ಳೆಯದು.

### ಧನು ರಾಶಿ

ಹಿರಿಯರು ಉತ್ತಮ ಲಾಭ ಪಡೆಯಲು ತಮ್ಮ ಹೆಚ್ಚುವರಿ ಶಕ್ತಿಯನ್ನು ಸಕಾರಾತ್ಮಕ ಬಳಕೆಗೆ ವಿನಿಯೋಗಿಸಬೇಕು. ಇಂದು ನಿಮಗೆ ಅನೇಕ ಹೊಸ ಆರ್ಥಿಕ ಯೋಜನೆಗಳು ದೊರಕುತ್ತವೆ – ಯಾವುದೇ ಬದ್ಧತೆಗೊಳಗಾಗುವ ಮುನ್ನ ಸಾಧಕ ಬಾಧಕಗಳನ್ನು ಎಚ್ಚರಿಕೆಯಿಂದ ಪರಿಶೀಲಿಸಿ. ನಿಮ್ಮ ಹತ್ತಿರದ ಜನರು ವೈಯಕ್ತಿಕ ಮಟ್ಟದಲ್ಲಿ ನಿಮಗೆ ಸಮಸ್ಯೆಗಳನ್ನು ಸೃಷ್ಟಿಸುತ್ತಾರೆ. ಇಂದು, ನಿಮ್ಮ ಪೀತಿ ಸಂಗಾತಿ ಶಾಶ್ವತತೆ ತನಕ ನೀವು ಪ್ರೀತಿ ಯಾರು ಒಂದು ಎಂದು ತಿಳಿಯುವುದಿಲ್ಲ.

### ಮಕರ ರಾಶಿ

ಮದ್ಯಪಾನ ಮಾಡಿದಲ್ಲಿ ಅದು ನಿಮ್ಮ ನಿದ್ರೆಗೆ ಭಂಗ ತಂದು ಆಳವಾದ ವಿಶ್ರಾಂತಿ ತೆಗೆದುಕೊಳ್ಳುವುದನ್ನು ತಡೆಗಟ್ಟಬಹುದಾದ್ದರಿಂದ ಹಾಗೆ ಮಾಡಬೇಡಿ. ವ್ಯಾಪರದಲ್ಲಿ ಪ್ರಯೋಜನ ಇಂದು ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು. ಮಕ್ಕಳು ನೀವು ಅವರೆಡೆಗೆ ಗಮನ ಹರಿಸಬೇಕೆಂಬ ಬೇಡಿಕೆಯಿಟ್ಟರೂ ಅವರು ನಿಮಗೆ ಸಂತೋಷ ತರುತ್ತಾರೆ. ನಿಮ್ಮ ಗೆಳತಿಯ ಜೊತೆ ಅಸಭ್ಯವಾಗಿ ನಡೆದುಕೊಳ್ಳಬೇಡಿ.

### ಕುಂಭ ರಾಶಿ

ನಿಮ್ಮ ಸಂತೋಷದ ಪ್ರಕೃತಿ ಇತರರಿಗೆ ಸಂತೋಷ ತರುತ್ತದೆ. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ಒಂದು ವೈವಾಹಿಕ ಸಂಬಂಧವನ್ನು ಹೊಂದಲು ಒಳ್ಳೆಯ ಸಮಯ. ನೀವು ಸಂತೋಷ ನೀಡುವ ಮೂಲಕ ಮತ್ತು ಹಿಂದಿನ ತಪ್ಪುಗಳನ್ನು ಮನ್ನಿಸುವ ಮೂಲಕ ನಿಮ್ಮ ಜೀವನವನ್ನು ಸಮರ್ಥಗೊಳಿಸಲಿದ್ದೀರಿ.

.

### ಮೀನ ರಾಶಿ

ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಜೀವನದ ಕೆಟ್ಟ ಕಾಲದಲ್ಲಿ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ ಆದ್ದರಿಂದ ಇಂದಿನಿಂದಲೇ ನಿಮ್ಮ ಹಣವನ್ನು ಸಂಗ್ರಹಿಸುವ ಬಗ್ಗೆ ಯೋಚಿಸಿ ಇಲ್ಲದಿದ್ದರೆ ನೀವು ತೊಂದರೆಗೊಳಗಾಗಬಹುದು. ದಿನದ ಕೊನೆಯಲ್ಲಿ ಒಬ್ಬ ಹಳೆಯ ಸ್ನೇಹಿತರ ಭೇಟಿ ನಿಮ್ಮ ಸಂಜೆಯನ್ನು ಬೆಳಗಿಸುತ್ತದೆ. ನೀವು ಆ ಸುವರ್ಣ ದಿನಗಳನ್ನು ನೆನಪಿಸಿಕೊಳ್ಳುವ ಜೊತೆ ನಿಮ್ಮ ಬಾಲ್ಯದ ಸವಿನೆನಪುಗಳನ್ನೂ ಆನಂದಿಸುತ್ತೀರಿ.

---

**ಗುರುಕುಲ ವಸತಿಯುತ ಶಾಲೆಯ ಕ್ರೀಡೋತ್ಸವದಲ್ಲಿ ದೂಡ ಅಧ್ಯಕ್ಷ ದಿನೇಶ್ ಕೆ ಶೆಟ್ಟಿ ಅಭಿಮತ**

# ಕ್ರೀಡಾಕೂಟದಲ್ಲಿ ಉತ್ಸಾಹದಿಂದ ಪಾಲ್ಗೊಂಡು ಸಂಭ್ರಮಿಸಿದ ಪೋಷಕರು ಮತ್ತು ಶಿಕ್ಷಕರು

**ದಾವಣಗೆರೆ :** ಶಿಕ್ಷಣದ ಜೊತೆಗೆ ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದು ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಪೂರಕವಾಗಿದೆ. ಇದು ಮಕ್ಕಳಲ್ಲಿ ನಾಯಕತ್ವದ ಗುಣಗಳನ್ನು ಬೆಳೆಸುತ್ತದೆ ಎಂದು ದೂಡಾ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ ಅಭಿಪ್ರಾಯ ಪಟ್ಟರು.

ಡಿಸೇಂಬರ್ 20,2025 ರಂದು ನಗರದ ಗುರುಕುಲ ವಸತಿಯುತ ಶಾಲೆಯ ವತಿಯಿಂದ ನಿಜಲಿಂಗಪ್ಪ ಬಡಾವಣೆಯಲ್ಲಿರುವ ಅಮೃತಾನಂದಮಯಿ ಶಾಲೆ ಪಕ್ಕದಲ್ಲಿನ ಮೈದಾನದಲ್ಲಿ ಶಿಕ್ಷಕರು ಮತ್ತು ಪೋಷಕರಿಗಾಗಿ ಹಮ್ಮಿಕೊಳ್ಳಲಾಗಿದ್ದ ಕ್ರೀಡೋತ್ಸವವನ್ನು ಉದ್ಘಾಟಿಸಿ ಮಾತನಾಡಿದರು.

ಪೋಷಕರು ಬೆಳಿಗ್ಗೆಯಿಂದ ಸಂಜೆಯವರೆಗೆ ಮಕ್ಕಳೊಂದಿಗೆ ಈ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಪ್ರೋತ್ಸಾಹ ನೀಡುತ್ತಿರುವುದು ಶ್ಲಾಘನೀಯ. ಪೋಷಕರ ಸಹಕಾರವಿದ್ದಾಗ ಮಕ್ಕಳು ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಲು ಸಾಧ್ಯ ಎಂದು ಪೋಷಕರ ಪಾತ್ರವನ್ನು ತಿಳಿಸಿದರು.

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಮಕ್ಕಳು ಕೇವಲ ಓದಿಗೆ ಸೀಮಿತವಾಗದೆ, ಎಲ್ಲಾ ಕ್ಷೇತ್ರಗಳಲ್ಲೂ ಸಕ್ರಿಯವಾಗಿರಬೇಕು. ಕ್ರೀಡೆಯು ಮಕ್ಕಳ ಬುದ್ಧಿಶಕ್ತಿಯನ್ನು ಚುರುಕುಗೊಳಿಸುತ್ತದೆ ಎಂದು ಹೇಳಿದರು.

ಕಾನ್ವೆಂಟ್ ಶಾಲೆಗಳಲ್ಲಿ ಇರುವಂತಹ ಸಿಸ್ಟಮ್ಯಾಟಿಕ್ (ಕ್ರಮಬದ್ಧವಾದ) ವ್ಯವಸ್ಥೆಯು ಈ ಗುರುಕುಲ ಶಾಲೆಯಲ್ಲೂ ಇರುವುದು ಸಂತೋಷದ



ವಿಷಯ. ಶಾಲೆಯ ಆಡಳಿತ ಮಂಡಳಿ ಮತ್ತು ಶಿಕ್ಷಕರ ಕಾರ್ಯವೈಖರಿಯನ್ನು ಮೆಚ್ಚಿದರು.

ಬೆಂಗಳೂರು, ಮೈಸೂರು ಅಥವಾ ಕೊಡಗಿನಂತಹ ದೂರದ ಪ್ರದೇಶಗಳಿಗೆ ಹೋಗುವ ಅಗತ್ಯವಿಲ್ಲದೆ, ಸ್ಥಳೀಯವಾಗಿ ಇಂತಹ ಗುಣಮಟ್ಟದ ಶಿಕ್ಷಣ ಮತ್ತು ಸೌಲಭ್ಯಗಳು ಸಿಗುತ್ತಿರುವುದು ಈ ಭಾಗದ ಜನರಿಗೆ ಅನುಕೂಲಕರವಾಗಿದೆ ಎಂದರು.

ಗುರುಕಲ ಶಾಲೆಯ ಅಧ್ಯಕ್ಷರಾದ ಆರ್. ಅಬ್ದುಲ್ ಅಧ್ಯಕ್ಷತೆ ವಹಿಸಿ ಮಾತನಾಡಿ, ಮಕ್ಕಳ ಭವಿಷ್ಯ ರೂಪಿಸುವಲ್ಲಿ ಪೋಷಕರು ಹಾಗೂ ಶಿಕ್ಷಕರು ಎರಡು ಬಲವಾದ ಕಂಬಗಳಂತೆ ಕಾರ್ಯನಿರ್ವಹಿಸುತ್ತಾರೆ. ಮಕ್ಕಳ ಶೈಕ್ಷಣಿಕ ಸಾಧನೆಗೆ ಮಾತ್ರವಲ್ಲದೆ, ಅವರ ಮಾನಸಿಕ ಸ್ಥೈರ್ಯ, ದೈಹಿಕ ಆರೋಗ್ಯ ಮತ್ತು ಸಾಂಸ್ಕೃತಿಕ ಮೌಲ್ಯಗಳ ಬೆಳವಣಿಗೆಯಲ್ಲಿ ಈ ಇಬ್ಬರ ಸಹಕಾರ ಅತ್ಯಂತ ಅವಶ್ಯಕವಾಗಿದೆ. ಈ ದೃಷ್ಟಿಯಿಂದ ಗುರುಕುಲ ಶಾಲೆಯಲ್ಲಿ ಪ್ರತಿವರ್ಷ ಪೋಷಕರು ಮತ್ತು ಶಿಕ್ಷಕರಿಗಾಗಿ ವಿಶೇಷವಾಗಿ ವಾರ್ಷಿಕ ಕ್ರೀಡಾಕೂಟವನ್ನು ಆಯೋಜಿಸಲಾಗುತ್ತಿದೆ ಎಂದರು.

ಈ ವಾರ್ಷಿಕ ಕ್ರೀಡಾಕೂಟದಲ್ಲಿ 2000ಕ್ಕೂ ಹೆಚ್ಚು ಪೋಷಕರು ಹಾಗೂ ಈ ಶಾಲೆಯ ಶಿಕ್ಷಕರು ಅಪಾರ ಉತ್ಸಾಹ, ಕ್ರೀಡಾಸ್ಫೂರ್ತಿ ಮತ್ತು ತಂಡಭಾವನೆಯೊಂದಿಗೆ ಭಾಗವಹಿಸಿ ಕ್ರೀಡೆಯ ಸಂಭ್ರಮವನ್ನು ಅನುಭವಿಸಿದರು.

ಪೋಷಕರೊಂದಿಗೆ ಈ ಕ್ರೀಡಾಕೂಟದಲ್ಲಿ ಭಾಗಿಯಾಗುವುದರಿಂದ ಮಕ್ಕಳಲ್ಲಿ ಅಪಾರ ಸಂತೋಷ, ಆತ್ಮವಿಶ್ವಾಸ ಹಾಗೂ ಮಾನಸಿಕ ಉಲ್ಲಾಸ ಮೂಡುತ್ತದೆ. ಇದರಿಂದ ಪೋಷಕರು–ಶಿಕ್ಷಕರು– ವಿದ್ಯಾರ್ಥಿಗಳ ನಡುವಿನ ಆತ್ಮೀಯ ಬಾಂಧವ್ಯ ಇನ್ನಷ್ಟು ಗಟ್ಟಿಯಾಯಿತು.

ದಿವಂಗತ ಶ್ರೀ ಶಾಮನೂರು ಶಿವಶಂಕರಪ್ಪ ಅವರ ಪುಣ್ಯಸ್ಮರಣೆಯ ಅಂಗವಾಗಿ ಕ್ರೀಡೋತ್ಸವದ ಆರಂಭಕ್ಕೂ ಮುನ್ನ ಗುರುಕುಲ ಶಾಲೆಯ ಆಡಳಿತ ಮಂಡಳಿ, ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಅವರಿಗೆ ಶ್ರದ್ಧಾಂಜಲಿ ಅರ್ಪಿಸಿ, ಅವರ ಸಮಾಜ ಸೇವೆ ಮತ್ತು ಶೈಕ್ಷಣಿಕ ಕ್ಷೇತ್ರಕ್ಕೆ ಸಲ್ಲಿಸಿದ ಅಮೂಲ್ಯ ಕೊಡುಗೆಗಳನ್ನು ಸ್ಮರಿಸಿ ಭಾವಪೂರ್ಣ ನಮನಗಳನ್ನು ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾಜಿ ಪಾಲಿಕೆ ಸದಸ್ಯ ಏ ನಾಗರಾಜ್, ನ್ಯಾಷನಲ್ ಬಾಡಿ ಬುಲ್ಡರ್ ಅಜಯ್ ರಮೇಶ್ ಸೇರಿದಂತೆ ಶಾಲಾ ಆಡಳಿತ ಮಂಡಳಿ ಹಾಗೂ ಸಿಬ್ಬಂದಿ ವರ್ಗ ಮತ್ತು ಶಾಲಾ ಪೋಷಕರು ಹಾಗೂ ವಿದ್ಯಾರ್ಥಿಗಳು ಇತರರು ಇದ್ದರು.

---

**35 ಮೆಕ್ಕೆಜೋಳ ಖರೀದಿ ಕೇಂದ್ರ**

# ಡಿಸ್ಟಿಲರಿಗಳಿಂದ 15,747, ಕುಕ್ಕುಟ ಉದ್ಯಮದಿಂದ 10,465 ಮೆಟ್ರಿಕ್ ಟನ್ ಬೇಡಿಕೆ

**ಬೆಳಗಾವಿ:** ಬೆಂಬಲ ಬೆಲೆಯಲ್ಲಿ ಮೆಕ್ಕೆಜೋಳ ಖರೀದಿಗೆ ಒಟ್ಟು 35 ಖರೀದಿ ಕೇಂದ್ರಗಳನ್ನು ತೆರೆಯಲಾಗಿದ್ದು, ಡಿಸೆಂಬರ್ 1ರಿಂದ ಖರೀದಿ ಪ್ರಕ್ರಿಯೆ ಆರಂಭಿಸಲಾಗಿದೆ ಎಂದು ಕೃಷಿ ಉತ್ಪನ್ನ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ತಿಳಿಸಿದ್ದಾರೆ.

ವಿಧಾನಸಭೆಯಲ್ಲಿ ಬುಧವಾರ ಎನ್. ಎಚ್. ಕೋನರೆಡ್ಡಿ ಮತ್ತು ಶಿವಗಂಗ ಅವರು ನಿಯಮ 73ರ ಅಡಿಯಲ್ಲಿ ಮಂಡಿಸಿದ ಗಮನ ಸೆಳೆಯುವ ಸೂಚನೆಗೆ ಉತ್ತರಿಸಿದ ಸಚಿವರು, ಡಿಸ್ಟಿಲರಿಗಳಿಂದ 15,747 ಮೆಟ್ರಿಕ್ ಟನ್ ಮೆಕ್ಕೆಜೋಳಕ್ಕೆ ಬೇಡಿಕೆ ಬಂದಿದ್ದು, 17 ಖರೀದಿ ಕೇಂದ್ರ ಆರಂಭಿಸಿ ಇದುವರೆಗೆ 114 ರೈತರಿಂದ 303.75 ಮೆಟ್ರಿಕ್ ಟನ್ ಖರೀದಿ ಮಾಡಲಾಗಿದ

'.ಪಶು ಮತ್ತು ಕುಕ್ಕುಟ ಆಹಾರ ಉತ್ಪಾದಕರ ಅಸೋಸಿಯೇಷನ್‌ನಿಂದ 10,465 ಮೆಟ್ರಿಕ್ ಟನ್ ಮೆಕ್ಕಜೋಳಕ್ಕೆ ಬೇಡಿಕೆ ಬಂದಿದ್ದು, 18 ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ. 1697 ರೈತರು ನೋಂದಣಿ ಮಾಡಿಸಿಕೊಂಡಿದ್ದಾರೆ ಎಂದು ತಿಳಿಸಿದರು.

ಕೆಎಂಎಫ್‌ನಿಂದ 50 ಸಾವಿರ ಮೆಟ್ರಿಕ್ ಟನ್‌ಗೆ ಬೇಡಿಕೆ ಬಂದಿದ್ದು, 22,109 ರೈತರು ನೋಂದಣಿ ಮಾಡಿಸಿಕೊಂಡಿದ್ದಾರೆ. 3,185 ರೈತರಿಂದ 5,866 ಮೆಟ್ರಿಕ್ ಟನ್ ಖರೀದಿ ಮಾಡಲಾಗಿದೆ.ಕೇಂದ್ರ ಸರ್ಕಾರ ಮೆಕ್ಕೆಜೋಳಕ್ಕೆ ಪ್ರತಿ ಕ್ವಿಂಟಾಲ್‌ಗೆ 2,400 ರೂ. ಬೆಂಬಲ ಬೆಲೆ ಘೋಷಣೆ ಮಾಡಿದ್ದು, ಈ ಯೋಜನೆಯಲ್ಲಿ ಖರೀದಿ ಮಾಡಿದರೆ ರಾಜ್ಯದ ಪಡಿತರ ವಿತರಣೆಗಾಗಿ ಮಾತ್ರ ಬಳಸಬೇಕು ಎಂದು ಸೂಚನೆ ನೀಡಿತ್ತು. ಆದರೆ ರಾಜ್ಯದಲ್ಲಿ ಮೆಕ್ಕೆಜೋಳವನ್ನು ಆಹಾರ ಪದ್ಧತಿಯಲ್ಲಿ ಬಳಸದ ಕಾರಣ ಬೆಂಬಲ ಬೆಲೆ ಯೋಜನೆಯಲ್ಲಿ ಖರೀದಿ ಮಾಡಲು ಅವಕಾಶವಿರಲಿಲ್ಲ. ಕೇಂದ್ರ ಸರ್ಕಾರ ರಾಜ್ಯದ ಪ್ರಸ್ತಾವನೆಗೆ ಅನುಮತಿ ನೀಡದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವೇ ಮೆಕ್ಕೆಜೋಳ ಬೆಳೆಗಾರರ ಹಿತರಕ್ಷಣೆಗೆ ಡಿಸ್ಟಿಲರಿ ಮಾಲೀಕರು, ಪಶು ಮತ್ತು ಕುಕ್ಕುಟ ಆಹಾರ ಉತ್ಪಾದನೆ ಅಸೋಷಿಯೇಷನ್ ಪದಾಧಿಕಾರಿಗಳ ಸಭೆ ಕರೆದು ಬೆಂಬಲ ಬೆಲೆಯಲ್ಲಿ ಮೆಕ್ಕೆಜೋಳ ಖರೀದಿಸಲು ಅವರ ಮನವೊಲಿಸಲಾಯಿತು ಎಂದು ವಿವರಿಸಿದರು.

ಡಿಸ್ಟಿಲರಿ ಮಾಲೀಕರು ಬೆಂಬಲ ಬೆಲೆಯಲ್ಲಿ ಖರೀದಿಸಿದರೆ ನಷ್ಟವಾಗಲಿದೆ ಎಂದು ಹೇಳಿದ್ದರಿಂದ ಮಾನ್ಯ ಮುಖ್ಯಮಂತ್ರಿಗಳು ಸಾಗಾಟ ಮತ್ತು ಪ್ರಾಸಂಗಿಕ ವೆಚ್ಚ ಭರಿಸುವ ಭರವಸೆ ನೀಡಿದರು. ಕರ್ನಾಟಕ ರಾಜ್ಯ ಸಹಕಾರ ಮಹಾ ಮಂಡಳದಿಂದ ಖರೀದಿ ಮಾಡಿ ಡಿಸ್ಟಿಲರಿಗಳು ಹಾಗೂ ಪಶು ಮತ್ತು ಕುಕ್ಕುಟ ಆಹಾರ ಉತ್ಪಾದಕರ ಅಸೋಸಿಯೇಷನ್‌ಗೆ ಪೂರೈಕೆ ಎಂದು ವಿವರಿಸಿದರು. ಸರ್ಕಾರದ ಸಕಾಲಿಕ ಮಧ್ಯಪ್ರವೇಶದಿಂದ ಡಿಸೆಂಬರ್ ತಿಂಗಳಿನಲ್ಲಿ ಮಾರುಕಟ್ಟೆಯಲ್ಲಿ ಕ್ವಿಂಟಾಲ್‌ಗೆ 1,800ರಿಂದ 2,100 ರೂ.ವರೆಗೆ ಮಾರಾಟವಾಗಿದೆ. ಬೆಂಬಲ ಬೆಲೆ ಖರೀದಿ ಕೇಂದ್ರಗಳನ್ನು ಆರಂಭಿಸುವ ಪೂರ್ವದಲ್ಲಿ ಮಾರುಕಟ್ಟೆಯಲ್ಲಿ ಮೆಕ್ಕೆಜೋಳದ ಧಾರಣಿ ಕ್ವಿಂಟಾಲ್‌ಗೆ 1,600ರಿಂದ 1,800 ರೂ.ವರೆಗೆ ಇತ್ತು ಎಂದು ಹೇಳಿದರು.

---

# ಅಡವಿ ಸೋಮಾಪೂರ :ಪಲ್ಸ್ ಪೋಲಿಯೋ ಜಾಥಾಕ್ಕೆ ಚಾಲನೆ

**ಗದಗ** : 5 ವರ್ಷದ ಒಳಗಿನ ಎಲ್ಲಾ ಮಕ್ಕಳಿಗೆ ಎರಡು ಹನಿ ಪೋಲಿಯೋ ಲಸಿಕೆಯನ್ನು ತಪ್ಪದೆ ಕೋಡಿಸಿರಿ. ಮತ್ತು ಅಂಗವಿಕಲತೆ ತಡೆಗಟ್ಟೋಣ. ಎಂದು ದಿನಾಂಕ 21.12.2025 ರಿಂದ 24.12.2025 ರ ವರೆಗೆ ನಡೆಯುವ ಪೋಲಿಯೋ ಕಾರ್ಯಕ್ರಮದಲ್ಲಿ ಯಾವುದೇ ಮಗು ಪೋಲಿಯೋ ಲಸಿಕೆಯಿಂದ ವಂಚಿತ ಆಗದಂತೆ ಮಕ್ಕಳಿಗೆ ಸಲಿಕೆ ಕೋಡಿಸಿ ಪೋಲಿಯೋ ಮುಕ್ತ ಭಾರತವನ್ನು ಮಾಡೋಣ ಎಂದು ಶಾಲಾ ಮಕ್ಕಳೊಂದಿಗೆ ಗ್ರಾಮದ ಜಾಥಾವನ್ನು ನಡೆಸಲಾಯಿತು

ದಿನಾಂಕ 21.12.2025 ರಂದು ಗದಗ ತಾಲೂಕಾ ಅಡವಿಸೋಮಾಪೂರ ಗ್ರಾಮದ ಮತ್ತು ತಾಂಡೆಗಳ ಬೂತ್‌ಗಳಲ್ಲಿ ಪಲ್ಸ್ ಪೋಲಿಯೋ ಮಗುವಿಗೆ ಲಸಿಕೆ ಹಾಕಿಸಿಕೊಳ್ಳಬೇಕೆಂದು ಜ್ಯಾಥಾ ಮುಖಾಂತರ ಜಾಗೃತಿಯನ್ನು ಮೂಡಿಸಲಾಯಿತು

ಯಾವುದೇ ಕಾರ್ಯಕ್ರಮವು ಯಶಸ್ವಿ ಆಗಬೇಕಾದರೆ ಸಾರ್ವಜನಿಕರ ಸಹಕಾರ ಬಹು ಮುಖ್ಯವಾಗಿದೆ ಸರ್ಕಾರಗಳು ಸಮುದಾಯದ ಆರೋಗ್ಯಕ್ಕೆ ಹೆಚ್ಚು



ವೈದ್ಯಕಿಯ ಸೌಕರ್ಯಗಳನ್ನು ನೀಡುತ್ತಿದೆ

ಅದರ ಸೌಲಭ್ಯಗಳನ್ನು ಪಡೆದು ಆರೋಗ್ಯ ಸಂಪತ್ತನ್ನು ಪಡೆದುಕೊಳ್ಳಬೇಕೆಂದು ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶಿದ್ದಪ್ಪ ಎನ್ ಲಿಂಗದಾಳ ಜಾಥಾ ಮುಖಾಂತರ ಸಾರ್ವಜನಿಕರಲ್ಲಿ ಮನವಿ ಮಾಡಿದರು

ಈ ಸಂದರ್ಭದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರಾದ ಡಿ.ಕೆ ಕಲ್ಲೋಳ್ಳಿ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳಾದ ಸವಿತಾ ಪವಾರ ಪೋಲಿಯೋ ಮೇಲ್ವಿಚಾರಕರಾದ ಎಸ್.ಬಿ.ಗಡಾದ ಮಂಜುನಾಥ ದೊಡ್ಡಮನಿ .ಶ್ರೀಮತಿ ಎಮ್ ಸಿ ದೊಡ್ಡಮನಿ ವ್ಹಿ ವಾಯ್ ತಿರಕಣ್ಣವರ ಶ್ರೀಮತಿ ಬಿ ಬಿ ಹರ್ತಿ

ಮಿನಾಕ್ಷೀ ವಡ್ಡರ ಮಾಲಾ ಮೇವುಂಡಿ ರೇಣುಕಾ ಪುರದ ಉಮಾದೇವಿ ಖಾನಾಪೂರ ಲಲಿತಾ ನಾಯಕ ಎಫ್ ಎನ್ ಅತ್ತಿಕಟ್ಟಿ ಮಂಜುಳಾ ಆರಿ. ಲಲಿತಾ ಅಂಗಡಿ ಶಿಕ್ಷಕಿಯರು ಆಶಾ ಕಾರ್ಯಕರ್ತೆಯರು ಆರೋಗ್ಯ ಇಲಾಖೆ ಸಿಬ್ಬಂದಿಗಳು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿ ಮಾಡಲಾಯಿತು

---

# ವಿದ್ಯುತ್ ಅವಘಡಗಳ ಸುರಕ್ಷತೆ ಜಾಗೃತಿ ಕಾರ್ಯಕ್ರಮ



**ನ್ಯಾಮತಿ** ಃ ವಿದ್ಯುತ್ ಸುರಕ್ಷತೆ ಬಗ್ಗೆ ಅರಿವು ಇಲ್ಲದೆ ಕೆಲವರು ಅಗತ್ಯ ಸುರಕ್ಷತೆ ಕ್ರಮ ಕೈಗೊಳ್ಳದೆ ಕೆಲವರು ಸ್ವಯಂ ವಿದ್ಯುತ್ ರಿಪೇರಿ ಮುಂದಾಗುವುದರಿಂದ ವಿದ್ಯುತ್ ಅವಘಡಗಳು ಸಂಭವಿಸುತ್ತವೆ ಎಂದು ನ್ಯಾಮತಿ ಬೆಸ್ಕಾಂ ಉಪವಿಭಾಗ ಕಚೇರಿಯ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಬಿ.ಕೆ.ಶ್ರೀನಿವಾಸ್ ಹೇಳಿದರು.

ಅವರು ನ್ಯಾಮತಿ ಪಟ್ಟಣದ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಶನಿವಾರ ನಡೆದ ನ್ಯಾಮತಿ ಬೆಸ್ಕಾಂ ಉಪ ವಿಭಾಗ ವತಿಯಿಂದ ನಡೆದ ಪ್ರಾಥಮಿಕ ಹಾಗೂ ಪ್ರೌಢಶಾಲೆ ವಿದ್ಯಾರ್ಥಿಗಳಿಗೆ ವಿದ್ಯುತ್ ಸುರಕ್ಷತೆ ಮತ್ತು ವಿದ್ಯುತ್ ಅವಘಡಗಳ ಸುರಕ್ಷತೆ ಜಾಗೃತಿಯ ತಾಲೂಕು ಮಟ್ಟದ ಪ್ರಬಂಧ ಮತ್ತು ಭಾಷಣ ಸ್ಪರ್ದೆಯ ವಿಜೇತ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ಬಹುಮಾನ ವಿತರಿಸಿ ಮಾತನಾಡಿದರು

ವಿದ್ಯಾರ್ಥಿಗಳು ತಮ್ಮ ಪೋಷಕರಿಗೆ ನಾವು ನೀಡಿರುವ ಮಾಹಿತಿಯನ್ನು ಗಮನದಲ್ಲಿ ಇಟ್ಟುಕೊಳ್ಳುವ ಜೊತೆಗೆ ತಮ್ಮ ಪೋಷಕರಿಗೂ ವಿದ್ಯುತ್ ಜಾಗೃತಿ ಕುರಿತು ಎಚ್ಚರ ವಹಿಸುವಂತೆ ವಿದ್ಯುತ್ ಬಗ್ಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಬೆಸ್ಕಾಂ ಪೂರ್ವಬಾವಿ ಜಾಗೃತಿ ಕಾರ್ಯಕ್ರಮದಲ್ಲಿ ಬೆಸ್ಕಾಂ ಶಾಖಾಧಿಕಾರಿ ಕೆ.ಬಿ.ಹತ್ತೇಶ್‌ನಾಯ್ಕ, ಚೀಲೂರು ರಾಘವೇಂದ್ರ, ನ್ಯಾಮತಿ ಕುಮಾರ ಸ್ವಾಮಿ, ಯೋಗೀಶ್ , ವೆಂಕಟೇಶ್, ಶಿವಕುಮಾರ್, ಕೆಪಿಎಸ್ ಹಿರಿಯ ಶಿಕ್ಷಕರಾದ ಕೃಷ್ಣನಾಯ್ಕ ಶಿಕ್ಷಕ್ಷಕರಾದ ಸರ್ವಮಂಗಳ,ಎಸ್, ತಿಪ್ಪೇಸ್ವಾಮಿ ಇತರರು ಇದ್ದರು.

ನ್ಯಾಮತಿ ಪಟ್ಟಣದ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಶನಿವಾರ ನಡೆದ ನ್ಯಾಮತಿ ಬೆಸ್ಕಾಂ ಉಪ ವಿಭಾಗ ವತಿಯಿಂದ ನಡೆದ ಪ್ರಾಥಮಿಕ ಹಾಗೂ ಪ್ರೌಢಶಾಲೆ ವಿದ್ಯಾರ್ಥಿಗಳಿಗೆ ವಿದ್ಯುತ್ ಸುರಕ್ಷತೆ ಮತ್ತು ವಿದ್ಯುತ್ ಅವಘಡಗಳ ಸುರಕ್ಷತೆ ಜಾಗೃತಿಯ ತಾಲೂಕು ಮಟ್ಟದ ಪ್ರಬಂಧ ಮತ್ತು ಭಾಷಣ ಸ್ಪರ್ದೆಯ ವಿಜೇತ ವಿದ್ಯಾರ್ಥಿಗಳು ಪ್ರಶಸ್ತಿ ಪತ್ರ ಬಹುಮಾನ ಪಡೆದ ವಿದ್ಯಾರ್ಥಿಗಳೊಂದಿಗೆ ಗಣ್ಯರು.

---

# ಅರ್ಜಿಗಳ ವಿಲೇವಾರಿಗೆ ಸೂಕ್ತ ಕ್ರಮವಹಿಸಲು ಸೂಚನೆ

**ಹಾಸನ** : ಮಾನ್ಯಜಿಲ್ಲಾಉಸ್ತುವಾರಿ ಸಚಿವರು ನಡೆಸಿದ ಜನ ಸ್ಪಂದನಕಾರ್ಯಕ್ರಮದಲ್ಲಿ ಸ್ವೀಕಾರವಾಗಿರುವ 1069 ಅರ್ಜಿಗಳನ್ನು ವಿಲೇವಾರಿ ಮಾಡಿರುವಕುರಿತುವರದಿ ನೀಡುವುದರಜೊತೆಗೆಇಂದು ಸ್ವೀಕಾರ ಮಾಡಿರುವ 135 ಅರ್ಜಿಗಳ ವಿಲೇವಾರಿಗೆ ಸೂಕ್ತ ಕ್ರಮವಹಿಸುವಂತೆಜಿಲ್ಲಾಧಿಕಾರಿ ಲತಾಕುಮಾರಿಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿಕಚೇರಿ ಸಭಾಂಗಣದಲ್ಲಿಇಂದು ನಡೆದಜನ ಸ್ಪಂದನ ಸಭೆಯಲ್ಲಿ ಅಹವಾಲು ಸ್ವೀಕಾರ ಮಾಡಿ ಮಾತನಾಡಿದಅವರು ಸಾರ್ವಜನಿಕರ ಸ್ವಂತಜಮೀನುಒತ್ತುವರಿಆಗಿದ್ದಲ್ಲಿ ನ್ಯಾಯಾಲಯದ ನಿರ್ದೇಶನವಿದ್ದರೆ ಮಾತ್ರ ಬಿಡಿಸಲು ಅವಕಾಶ ಇರುತ್ತದೆಎಂದು ತಿಳಿಸಿದರು.

ಕಳೆದ 20 ವರ್ಷದಿಂದಪಡಿತರಕಾರ್ಡ್ ಹೊಂದಿದ್ದು,ಆದಾಯ ಹೆಚ್ಚಳವಾಗಿದೆ ಎಂದುಕಂಪ್ಯೂಟರ್‌ನಲ್ಲಿತೋರಿಸುತ್ತಿರುವುದರಿಂದ 5 ವರ್ಷದಿಂದಪಡಿತರಕಾರ್ಡ್‌ರದ್ದಾಗಿರುವುದನ್ನು ಸರಿಪಡಿಸಲುಜಂಟಿ ನಿರ್ದೇಶಕರಿಗೆ ಸೂಚಿಸಿದರು.

ಅರಕಲಗೂಡುತಾಲ್ಲೂಕಿನ ಮಾದಿಹಳ್ಳಿಯಲ್ಲಿ ಏತನೀರಾವರಿಗೆ ಭೂಸ್ವಾಧೀನವಾಗಿದ್ದು, ಪರಿಹಾರಕೋರಿ ಬಂದ ಮನವಿಗೆ ಖುದ್ದು ತಹಸೀಲ್ದಾರ್ ಭೇಟಿ ನೀಡಿಪರಿಶೀಲಿಸಿ ವರದಿ ನೀಡುವಂತೆ ಸೂಚಿಸಿದರು.

ಪೌತಿಖಾತೆ, ಹದ್ದುಬಸ್ತು, ವಿದ್ಯುತ್ ಸಂಪರ್ಕಕಲ್ಪಿಸುವುದು, ಸಾಗುವಳಿ ಚೀಟಿ, ಕಂದಾಯಗ್ರಾಮ, ಖಾತೆ ಮಾಡುವ ಬಗ್ಗೆ, ಪೋಡಿ ದುರಸ್ತಿ, ಪಹಣಿತಿದ್ದುಪಡಿ, ಹೊಲಕ್ಕೆ ದಾರಿ ಬಿಡಿಸಿಕೊಡುವ ಬಗ್ಗೆ, ಶ್ರವಣಬೆಳಗೊಳದಲ್ಲಿ ವಿಮಾನ ನಿಲ್ದಾಣ ನಿರ್ಮಿಸುವ ಬಗ್ಗೆ, ಇನಾಮು ರದ್ದು ಪಡಿಸುವಕುರಿತು,ಕೋಣನ 'ೂರುಗ್ರಾಮ ಪಂಚಾಯಿತಿಯಲ್ಲಿ ಪೌರಕಾರ್ಮಿಕರಿಗೆ ಹಕ್ಕು ಪತ್ರ ನೀಡಲು ಮನವಿ,ಆಕಾರ ಬಂದುತಿದ್ದುಪಡಿ ಮಾಡಿರುವವರ ಮೇಲೆಎಫ್.ಐ.ಆರ್‌ದಾಖಲಿಸುವಂತೆ ಸೂಚಿಸಿದರಲ್ಲದೆ, ವಿದ್ಯುತ್ ಲೈನ್ ಹಾದು ಹೋಗಿರುವ ಸ್ಥಳಕ್ಕೆ ಪರಿಹಾರ ನೀಡಲುಒಂದು ಸಭೆ ನಡೆಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಕಟ್ಟಾಯಗ್ರಾಮದಲ್ಲಿ ಸ್ಮಶಾನಜಾಗಒತ್ತುವರಿ ತೆರವುಗೊಳಿಸಲು, ವಸತಿಯೋಜನೆಯಡಿ ಮಂಜೂರಾದ ಮನೆಗೆ ಅಂತಿಮ ಬಿಲ್ ಹಣ ಪಾವತಿ ಮಾಡುವಂತೆಸೂಚಿಸಿದರಲ್ಲದೆ,ಸರ್ಕಾರಿಜಾಗದ 'ಲ್ಲಿಅನಧಿಕೃತವಾಗಿ ಶೇಡ್ ಹಾಕಿರುವುದನ್ನು ನಿರ್ದಾಕ್ಷಿಣ್ಯವಾಗಿ ತೆರೆವುಗೊಳಿಸಲು ನಿರ್ದೇಶನನೀಡಿದರು.

ಬ'ೂವ'ೄನ'ಹ'ಳ್ಳಿಏತ'ನೀರಾವ'ರಿಂ'ಯೋಜನ'ಗ ' ಭೂಸ್ವಾಧೀನವಾಗಿರುವಜಾಗಕ್ಕೆ ಹಾಗೂ ಬೆಳೆ ಪರಿಹಾರ,ಖಾತೆ ಬದಲಾವಣೆ,ಹೊಳೆನರಸೀಪುರ ತಾಲ್ಲೂಕಿನಕಾಮಸಮುದ್ರದಲ್ಲಿ ಗೋಮಾಳದಲ್ಲಿ ಎರಡುಗುಂಟೆಜಾಗಕಲ್ಪಿಸುವಂತೆಅಹವಾಲು ಅರ್ಜಿಗಳು ಸ್ವೀಕಾರವಾಯಿತು.

ಸಾರ್ವಜನಿಕರಿಗೆ ಕಾನೂನು ಸೇವೆಗಳ ಸಹಾಯಕ್ಕೆಜಿಲ್ಲಾಧಿಕಾರಿಗಳ ಕಚೇರಿಯಲ್ಲಿಒಂದು ಕೋಶ ತೆರೆಯಲಾಗಿದೆಯಾರ ಸಹಾಯವಿಲ್ಲದವರುಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಬಾಲ್ಯ ವಿವಾಹ, ಬಾಲ ಕಾರ್ಮಿಕತೆ, ಬಾಲ ಗರ್ಭಿಣಿ, ಫೋಕ್ಸೋ ಹಾಗೂ ಮಾದಕ ವಸ್ತುಗಳ ಸೇವನೆಯನ್ನುತಡೆಗಟ್ಟುವ ನಿಟ್ಟಿನಲ್ಲಿಎಲ್ಲಾ ಇಲಾಖಾ ಅಧಿಕಾರಿಗಳು ಸಮನ್ವಯತೆಯಿಂದ ಕೆಲಸ ಮಾಡುವಂತೆ ಸೂಚಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕಅಧಿಕಾರಿಬಿ. ಆರ್.ಪೂರ್ಣಿಮಾ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿತಮ್ಮಯ್ಯ,ಉಪ ವಿಭಾಗಾಧಿಕಾರಿಜಗದೀಶ್‌ಗಂಗಣ್ಣನವರ್ ಮತ್ತಿತರ ಅಧಿಕಾರಿಗಳು ಹಾಜರಿದ್ದರು.

# 23 ರಂದು ಕಾರ್ಯಾಗಾರ

**ರಾಮನಗರ:** ಬೆಂಗಳೂರಿನ ಕೆಸಿಟಿಯು, ಟಿಇಸಿಎಚ್‌ಎಸ್‌ಒಕೆ, ವಿಟಿಪಿಸಿ ಹಾಗೂ ಬೆಂಗಳೂರು ದಕ್ಷಿಣ ಜಿಲ್ಲಾ ಕೈಗಾರಿಕಾ ಕೇಂದ್ರದ ವತಿಯಿಂದ ಕೇಂದ್ರ ಸರ್ಕಾರದ ಆರ್‌ಎಎಂಪಿ ಯೋಜನೆಯಡಿ ಎಕ್ಸ್‌ಪೋರ್ಟ್ ಪ್ರೊಮೋಷನ್ ಹಾಗೂ ಫೆಸಿಲಿಟೇಷನ್ ವಿಷಯದ ಕುರಿತು ಸೂಕ್ಷ್ಮ ಸಣ್ಣ ಮತ್ತು ಮಧ್ಯಮ (ಎಂಎಸ್‌ಎಂಇ) ಕೈಗಾರಿಕೆಗಳಿಗೆ ರಾಜ್ಯ ಸರ್ಕಾರದಿಂದ 2025–30ನೇ ಕೈಗಾರಿಕಾ ನೀತಿಯಡಿ ದೊರೆಯುವ ಬಂಡವಾಳ ಹೂಡಿಕೆ ಸಹಾಯಧನ, ಸ್ಟಾಂಪ್ ಡ್ಯೂಟಿ ವಿನಾಯಿತಿ, ವಿದ್ಯುತ್ ತೆರಿಗೆ ವಿನಾಯಿತಿ ಮುಂತಾದ ಉತ್ತೇಜನ ಮತ್ತು ಎಂಎಸ್‌ಎಂಇ ಗಳಿಗೆ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಾರುಕಟ್ಟೆ ಸಂಪರ್ಕ,

ರಫ್ತು ಸಾಮರ್ಥ್ಯ ವೃದ್ಧಿಗೆ ತರಬೇತಿ ಮತ್ತು ಮಾರ್ಗದರ್ಶನ, ರಫ್ತು ಅಭಿವೃದ್ಧಿಯಿಂದ ವಿದೇಶಿ ವಿನಿಮಯ (ಫಾರೀನ್ ಎಕ್ಸ್ಚೇಂಜ್) ಗಳಿಗೆ ಹೆಚ್ಚಿಸುವುದು ಮತ್ತು ಸರ್ಕಾರದ ರಫ್ತು ಪ್ರೋತ್ಸಾಹ ನೀತಿಗಳು ಮತ್ತು ಸಹಾಯಧನದ ಹಾಗೂ ಮಾರ್ಗದರ್ಶನ ಕುರಿತು ಡಿ. 23ರಂದು ಬೆಳಿಗ್ಗೆ ಬಿಡದಿ ಕೈಗಾರಿಕಾ ಸಂಘದ ಬಿಡದಿ ಕೈಗಾರಿಕಾ ಪ್ರದೇಶ ಸಭಾಂಗಣದಲ್ಲಿ ಒಂದು ದಿನದ ಕಾರ್ಯಗಾರವನ್ನು ಆಯೋಜಿಸಲಾಗಿದೆ.

ಜಿಲ್ಲೆಯ ಎಲ್ಲಾ ಉದ್ದಿಮೆದಾರರು ಕಾರ್ಯಗಾರದಲ್ಲಿ ಭಾಗವಹಿಸಿ ಸದುಪಯೋಗ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗೆ ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಕಂದಾಯ ಭವನ, ಕೊಠಡಿ ಸಂಖ್ಯೆ: 302, 303 ಮತ್ತು 304, 2ನೇ ಮಹಡಿ, ಬಿ.ಎಂ ರಸ್ತೆ, ಬೆಂಗಳೂರು ದಕ್ಷಿಣ ಜಿಲ್ಲೆ (ರಾಮನಗರ) 562159. ಮೊ.ನಂ: 080–22220122/0212/8884569687 ಅನ್ನು ಸಂಪರ್ಕಿಸುವಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




ನ್ಯಾಮತಿ ತಾಲೂಕಿನ ಸುರಹೊನ್ನೆ ಗ್ರಾಮದ ಪಿಎಂಸಿ ಶಾಲೆಯಲ್ಲಿ ಶನಿವಾರ ಆಯೋಜಿಸಿದ್ದ ತಾಲೂಕು ಮಟ್ಟದ ಪ್ರಾಥಮಿಕ ಶಾಲಾ ಪ್ರತಿಭಾ ಕಾರಂಜಿ ಕಾರ್ಯಕ್ರಮದಲ್ಲಿ ಗಮನ ಸೆಳೆದ ಸಾಲುಮರದ ತಿಮ್ಮಕ್ಕ ಪರಿಸರ ಪ್ರೇಮ

# ಯೋಗಾ ಅಭ್ಯಾಸದಿಂದ ಆರೋಗ್ಯ ಉತ್ತಮ

**ದಾವಣಗೆರೆ :** ನಿತ್ಯ ಯೋಗಾ ಅಭ್ಯಾಸ ಮಾಡಿ, ಆರೋಗ್ಯ ಉತ್ತಮವಾಗಿರುತ್ತೆದೆ, ಜೊತೆಗೆ ನಿಮ್ಮ ದೈನಂದಿನ ಚಟುವಟಿಕೆಗಳು ಚನ್ನಾಗಿ ಇರುತ್ತದೆ ಎಂದು ಕಾರ್ಯಕ್ರಮ ಉದ್ಘಾಟನೆ ನೆರವೇರಿಸಿದ ತರಳುಬಾಳು ಸೆಂಟ್ರಲ್ ಸ್ಕೂಲ್ ನಿರ್ದೇಶಕರಾದ ಸೋಮಶೇಖರಪ್ಪ ಕೆ. ಹೇಳಿದರು. ಹಸ್ತಿನಾಪುರ ಯೋಗ ಫೌಂಡೇಶನ್ ವತಿಯಿಂದ ತರಳಬಾಳು ಸೆಂಟರ್ ಸ್ಕೂಲ್ ಅನುಭವ ಮಂಟಪದಲ್ಲಿ ಏರ್ಪಡಿಸಿದ್ದ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ಕೊಂಡಜ್ಜಿ ಬಸಪ್ಪ ಸ್ಥಳೀಯ ಸಂಸ್ಥೆಯ ಸ್ಕೌಟ್ಸ್ ಮತ್ತು ಗೈಡ್ ವಿದ್ಯಾರ್ಥಿಗಳಿಗೆ 90 ನಿಮಿಷಗಳ ಮಾದರಿ ಯೋಗ ವಾಹಿನಿ ಕಾರ್ಯಕ್ರಮದಲ್ಲಿ ಉದ್ಘಾಟಕರಾಗಿ ಭಾಗವಹಿಸಿ ಮಾತನಾಡಿದರು. ಯೋಗ ಇಂದಿನದಲ್ಲ ಪುರಾತನ ಕಾಲದಿಂದಲ್ಲಿ ಯೋಗ, ತಪಸ್ಸು ಮಾಡುತ್ತಿದ್ದರು ಹಾಗೇ ಗುರುಕುಲ ಶಿಕ್ಷಣದಲ್ಲಿ ಯೋಗವನ್ನು ಮಕ್ಕಳಿಗೆ ಅಭ್ಯಾಸ ಮಾಡಿಸುತ್ತಿದ್ದರು. ನೀವು ಶಿಕ್ಷಣದ ಜೊತೆಗೆ ಯೋಗವನ್ನು ಅಭ್ಯಾಸ




ಮಾಡಿ ಎಂದು ಆಶಿಸಿದರು.

ಯೋಗ ಅಭ್ಯಾಸ ಮಾಡುವುದರಿಂದ ಆರೋಗ್ಯ ವೃದ್ಧಿಸುತ್ತದೆ, ತುಂಬಾ ಲವಲವಿಕೆಯಿಂದ ಇರುತ್ತಿರಾ ಓದಿನ ಕಡೆ ಹೆಚ್ಚಿನ ಆಸಕ್ತಿ ವಹಿಸಬಹುದು ಆರೋಗ್ಯ ಉತ್ತಮವಾಗಿದ್ದರೆ ಎಲ್ಲವೂ ಸಾಧ್ಯ ಎಂದು ಅಧ್ಯಕ್ಷತೆಯನ್ನು ವಹಿಸಿದ್ದ ಹಿಮಾಲಯನ್ ಅಡ್ವೆಂಚರ್ ಅಂಡ್ ನೇಚರ್ ಅಕಾಡೆಮಿಯ ಕಾರ್ಯದರ್ಶಿ ಎನ್ ಕೆ. ಕೊಟ್ರೇಶ್ ಮಾತನಾಡಿದರು. ಯೋಗ ತರಬೇತುದಾರ ಅಜ್ಜಪ್ಪ ಜೆ ಪ್ರಯೋಗಿಕವಾಗಿ ಯೋಗ ಆಸನಗಳನ್ನು ಹೇಳಿ ಕೊಡುವುದರ ಜೊತೆಗೆ ಯಾವ ಆಸನಗಳಿಂದ ಆರೋಗ್ಯ ಹೇಗೆ ಸುಧಾರಣೆ ಆಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ತರಳುಬಾಳು ಶಾಲೆಯ ಎಲ್ಲಾ ಶಿಕ್ಷಕರು ಮತ್ತು ಭಾರತ್ ಸ್ಕೌಟ್ ಮತ್ತು ಗೈಡ್ ಕೊಂಡಜ್ಜಿ ಬಸಪ್ಪ ಸ್ಥಳೀಯ ಸಮಿತಿಯ ಗೈಡ್ ಕ್ಯಾಪ್ಟನ್ ಅನಿತಾ, ಮತ್ತು ಸುಜಾತ ಹಿಮಾಲಯನ್ ಅಡ್ವೆಂಚರ್ ನ ಸದಸ್ಯರಾದ ಚಂದ್ರ ಮೌಳಿ, ಪ್ರಕಾಶ್ ಇನ್ನು ಮುಂತಾದವರು ಉಪಸ್ಥಿತರಿದ್ದರು.

# ಆರೋಗ್ಯ ಕಾಪಾಡಿಕೊಳ್ಳವುದು ಮುಖ್ಯವಾಗಿದೆ -ಜಿಲ್ಲಾಧಿಕಾರಿ ಡಾ.ವಿಜಯ ಮಹಾಂತೇಶ ದಾನಮ್ಮನವರ

**ಹಾವೇರಿ:** ಆರೋಗ್ಯ ಎಂಬುದು ಸಂಪತ್ತು ಇದ್ದ ಹಾಗೆ, ಆರೋಗ್ಯ ಕಾಪಾಡಿಕೊಳ್ಳುವುದು ಮುಖ್ಯವಾಗಿದೆ. ಆರೋಗ್ಯದ ಹಿತದೃಷ್ಟಿಯಿಂದ ಕೆಲಸದ ಜೊತೆಗೆ ಕ್ರೀಡಾಮನೋಭಾವವನ್ನು ಬೆಳೆಸಿಕೊಳ್ಳಿ ಎಂದು ಜಿಲ್ಲಾಧಿಕಾರಿ ಡಾ. ವಿಜಯಮಹಾಂತೇಶ ಬಿ. ದಾನಮ್ಮನವರ ಹೇಳಿದರು.

ನಗರದ ಹೊಸಮನಿ ಸಿದ್ದಪ್ಪ ಜಿಲ್ಲಾ ಕ್ರೀಡಾಂಗಣದಲ್ಲಿ ಶನಿವಾರ ಜಿಲ್ಲಾ ಪಂಚಾಯತ್ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನೌಕರರ ಸಂಘದ ಸಹಯೋಗದಲ್ಲಿ

ಜರುಗಿದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕೆಲಸದ ಒತ್ತಡದ ಮಧ್ಯೆ ಮಾನಸಿಕ ಆರೋಗ್ಯಕ್ಕೆ ಕ್ರೀಡೆಗಳು ಸಹಕಾರಿಯಾಗಿವೆ. ಕ್ರೀಡೇ ಕೇವಲ ಒಂದು ದಿನಕ್ಕೆ ಮಾತ್ರ ಸೀಮಿತವಾಗದೆ ಪ್ರತಿನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಆಟದಲ್ಲಿ ಸೋಲು ಗೆಲುವು ಸಾಮಾನ್ಯ, ಎಲ್ಲರೂ ಕ್ರೀಡಾವ್ಂನ್ೂೀಭಾವ್ದಿಂದ್ ಭಾಗವಹಿಸುವುದು ಮುಖ್ಯವಾಗಿದೆ.



ಜಿಲ್ಲೆಯಲ್ಲಿ ಒಂದು ವರ್ಷದಲ್ಲಿಯೇ ನಾಲ್ಕು ಬಾರಿ ಸರ್ಕಾರಿ ನೌಕರರ ಕ್ರೀಡಾಕೂಟವನ್ನು ಆಯೋಜಿಸಲಾಗಿದ್ದು, ಪ್ರತಿ ಕ್ರೀಡಾ ತಂಡದಲ್ಲೂ ಮಹಿಳೆಯರಿಗೆ ಶೇ.33 ರಷ್ಟು ಮೀಸಲಾತಿ ನೀಡಲಾಗಿದೆ . ಇದು ವಿಶೇಷ ಕ್ರೀಡಾಕೂಟವಾಗಿದೆ. ಎಂದರು.

ಭಾರತ ದೇಶ ಹಳ್ಳಿಗಳ ದೇಶ, ಭಾರತ ಅಭಿವೃದ್ಧಿಯಾಗಲು, ರಾಮರಾಜ್ಯವಾಗಲು ಹಳ್ಳಿಗಳ ಅಭಿವೃದ್ಧಿಯಾಗಬೇಕು ಎಂದು ಗಾಂಧೀಜಿ ಅವರು ಹೇಳುತ್ತಿದ್ದರು. ಆ ನಿಟ್ಟಿನಲ್ಲಿ ಆಡಳಿತ ವ್ಯವಸ್ಥೆ ವಿಕೇಂದ್ರೀಕರಣಮಾಡಿ, ಪ್ರತಿ ಹಳ್ಳಿಗೂ ಆಡಳಿತ ವ್ಯವಸ್ಥೆ ತೆಗೆದುಕೊಂಡು ಹೋಗಲಾಗಿದೆ. ಗ್ರಾಮೀಣ ಭಾಗದಲ್ಲಿ ಗುರುತರ ಜವಾಬ್ದಾರಿಯಿಂದ ಕುಡಿಯುವ ನೀರು, ರಸ್ತೆ, ನೈರ್ಮಲ್ಯೀಕರಣ, ಸಮುದಾಯ ಆಸ್ತಿಗಳ ರಕ್ಷಣೆ ಹೀಗೆ ಹಲವಾರು ಕಾರ್ಯಕ್ರಮಗಳನ್ನು ಜನರಿಗೆ ಅನುಕೂಲವಾಗುವಂತೆ ಅನುಷ್ಠಾನಮಾಡಲಾಗುತ್ತಿದೆ. ವಿಶೇಷವಾಗಿ ಮನೇರಗಾ, ಜಲಜೀವನ್ ಮಿಷನ್, ಗ್ರಾಮೀಣ ಭಾಗದ ಮಹಿಳೆಯರನ್ನು ಸಂಜೀವಿನಿ ಯೋಜನೆಯಡಿ ಹಲವಾರು ಆರ್ಥಿಕ ಚಟುವಟಿಕೆಗಳಿಗೆ ಉತ್ತೇಜನ ನೀಡಿ, ದೇಶದ ಆರ್ಥಿಕ ಅಭಿವೃದ್ಧಿಗೆ ಶ್ರಮಿಸಲಾಗುತ್ತಿದೆ ಎಂದರು.

ಸದಾ ಒತ್ತಡದ ಬದುಕಿನಿಂದ ಹೊರ ಬರಲು ಮನರಂಜನಾ ಕಾರ್ಯಕ್ರಮ, ಕ್ರೀಡಾ ಕೂಟ ಹಾಗೂ ಇತರೆ ಕಾರ್ಯಕ್ರಮಗಳು ಅತೀ ಅವಶ್ಯಕವಾಗಿದೆ ಎಂದು ಹೇಳಿದರು.

ಕ್ರೀಡಾಕೂಟ ಧ್ವಜಾರೋಹಣ ನೇರವೇರಿಸಿದ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಶ್ರೀಮತಿ ಯಶೋಧಾ ವಂಟಗೋಡಿ ಅವರು ಮಾತನಾಡಿ, ಜಿಲ್ಲೆಯ ಎಲ್ಲಾ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು ಕ್ರೀಡೆಯಲ್ಲಿ ಭಾಗವಹಿಸಿ,

ಪೊಲೀಸ್ ಇಲಾಖೆಯ ಸಿಬ್ಬಂದಿಗಳ ಜೊತೆ ಸರಿಸಮವಾಗಿ ಆಟ ಆಡಿ ಮುಂದೆ ಸಾಗುತ್ತಿರುವುದು ಸಂತಸದ ಸಂಗತಿಯಾಗಿದೆ. ಎಲ್ಲ ನೌಕರರು ಈ ಕ್ರೀಡಾಕೂಟದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಜಿ.ಪ್ಂ.ವ್ುುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಮತಿ ರುಚಿ ಬಿಂದಲ್ ಕ್ರೀಡಾಕೂಟ ಜ್ಯೋತಿ ಬೆಳಗಿಸಿ ಮಾತನಾಡಿ, ಆಟದಲ್ಲಿ ಸೋಲು ಗೆಲುವು ಮುಖ್ಯವಲ್ಲ, ಕ್ರೀಡೆಯಲ್ಲಿ ಭಾಗವಹಿಸುವುದು ಮುಖ್ಯ. ಎಲ್ಲಾ ಸಿಬ್ಬಂದಿಗಳು ಕ್ರೀಡಾಕೂಟದಲ್ಲಿ ಸಕ್ರೀಯವಾಗಿ ಭಾಗವಹಿಸಬೇಕು ಎಂದರು.

ಅಪರ ಜಿಲ್ಲಾಧಿಕಾರಿ ಡಾ.ನಾಗರಾಜ ಎಲ್, ಜಿ.ಪಂ.ಉಪ ಕಾರ್ಯದರ್ಶಿ ಡಾ.ಪುನಿತ್, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಲ್.ವೈ.ಶಿರಕೋಳ, ಜಿ.ಪಂ.ಮುಖ್ಯ ಲೆಕ್ಕಾಧಿಕಾರಿ ವಸಂತ ಕುಮಾರ, ರಾಜ್ಯ ನೌಕರರ ಸಂಘದ ಜಿಲ್ಲಾಧ್ಯಕ್ಷ ಮಲ್ಲೇಶ ಕರಿಗಾರ , ಖಜಾಂಚಿ ದಾವಲಸಾಬ ಕಮಗಾಲ,

ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಶ್ರೀಮತಿ ಲತಾ, ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ.ಪರಮೇಶ ಹುಬ್ಬಳ್ಳಿ, ವೆಂಕಟೇಶ ಸಣ್ಣಬಿದರಿ, ಮಲ್ಲಿಕಾರ್ಜುನ ಕೆ.ಎಂ., ರವಿ. ಎನ್, ಮಂಜುನಾಥ ಸಾಳುಂಕಿ, ಬಿ.ಎಸ್.ಶಿಡೇನೂರ, ಪರಶುರಾಮ ಪೂಜಾರ ಇತರರು ಉಪಸ್ಥಿತರಿದ್ದರು.

ಜಿಲ್ಲಾ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖಾ ನೌಕರರ ಸಂಘದ ಕ್ರೀಡಾ ಸಮಿತಿ ಅಧ್ಯಕ್ಷ ಮೌಲಾಸಾಬ ಯಲವಿಗಿ ಸ್ವಾಗತಿಸಿದರು.

## ಸಂತ್ರಸ್ತ ಮಕ್ಕಳಿಗೆ ಬೆಂಬಲ ವ್ಯಕ್ತಿಗಳಾಗಿ ಕಾರ್ಯ ನಿರ್ವಹಿಸಲು ಅರ್ಜಿ ಆಹ್ವಾನ

**ಶಿವಮೊಗ್ಗ:** ಜಿಲ್ಲಾ ಮಕ್ಕಳ ರಕ್ಷಣಾ ಘಟಕವು ಪೋಕ್ಸೋ ಕಾಯ್ದೆಯಡಿ ಸಂತ್ರಸ್ತ ಮಕ್ಕಳಿಗೆ ಬೆಂಬಲ ವ್ಯಕ್ತಿಗಳಾಗಿ ಸೇವೆ ಸಲ್ಲಿಸಲು ಆಸಕ್ತಿ ಹೊಂದಿರುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದೆ.

ಅಭ್ಯರ್ಥಿಗಳು ಮಕ್ಕಳೊಂದಿಗೆ ಕೆಲಸ ಮಾಡುವಲ್ಲಿ ಕನಿಷ್ಠ 3 ವರ್ಷಗಳ ಅನುಭವದೊಂದಿಗೆ ಸಮಾಜ ಕಾರ್ಯ ವಿಷಯದಲ್ಲಿ ಪದವಿಯನ್ನು ಹೊಂದಿರಬೇಕು. ಮಕ್ಕಳ ಆರೈಕೆ ಕ್ಷೇತ್ರದಲ್ಲಿ ಮಕ್ಕಳೊಂದಿಗೆ ಕೆಲಸ ಮಾಡುವ ಅಧಿಕಾರಿಗಳು ಮತ್ತು ಮಕ್ಕಳ ಹಕ್ಕುಗಳ ಕ್ಷೇತ್ರದಲ್ಲಿ ಕೆಲಸ ಮಾಡುವ ಯಾವುದೇ ಸಂಸ್ಥೆಗಳು ಅರ್ಜಿ ಸಲ್ಲಿಸಬಹುದಾಗಿದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಕ್ಷೇತ್ರ ಕಾರ್ಯವನ್ನು ಮಾಡಲು ಮತ್ತು ಅಪರಾಧ ನ್ಯಾಯ ವ್ಯವಸ್ಥೆಯ ಮೂಲಕ ಮಕ್ಕಳು ಮತ್ತು ಅವರ ಕುಟುಂಬಗಳಿಗೆ ಸಹಾಯ ಮಾಡಲು ತರಬೇತಿ ನೀಡಲಾಗುವುದು. ಪ್ರತಿ ಪ್ರಕರಣಕ್ಕೆ ರೂ. 3000/- ಗಳ ಸಂಭಾವನೆ ನೀಡಲಾಗುವುದು.

ನಿಗದಿತ ನಮೂನೆ ಅರ್ಜಿಯನ್ನು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಕಚೇರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಸರ್ಕಾರಿ ವೀಕ್ಷಣಾಲಯ ಕಟ್ಟಡ, 100 ಅಡಿ ರಸ್ತೆ, ಆಲ್ಕೋಳ, ಶಿವಮೊಗ ಕಚೇರಿಯಿಂದ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಪ್ರಮಾಣ ಪತ್ರಗಳೊಂದಿಗೆ ಸಲ್ಲಿಸುವಂತೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ವೆಬೆಕ್ಸ್ ಮೂಲಕ ಪಿಂಚಣಿ ಅದಾಲತ್ ಮತ್ತು ಜಿಪಿಎಫ್ ಅದಾಲತ್ ಕಾರ್ಯಕ್ರಮ

**ಶಿವಮೊಗ್ಗ:** ಡಿ. 12 ರಂದು ಬೆಳಗ್ಗೆ 11.11ಕ್ಕೆ ಚಿಕ್ಕಮಗಳೂರು ಜಿಲ್ಲಾಧಿಕಾರಿಗಳ ಕಚೇರಿಯ ವಿಡಿಯೋ ಕಾನ್ಫರೆನ್ಸ್ ಸಭಾಂಗಣದಲ್ಲಿ ಪಿಂಚಣಿ ಅದಾಲತ್ ಹಾಗೂ ಮಧ್ಯಾಹ್ನ ಜಿಪಿಎಫ್ ಅದಾಲತ್ ಕಾರ್ಯಕ್ರಮವನ್ನು ವೆಬೆಕ್ಸ್ ಮೂಲಕ ಹಮ್ಮಿಕೊಳ್ಳಲಾಗಿದ್ದು, ಶಿವಮೊಗ್ಗ ಜಿಲ್ಲೆಗೆ ಸಂಬಂಧಿಸಿದ ಪಿಂಚಣಿದಾರರು ಡಿ.26 ರಂದ ಬೆಳಗ್ಗೆ 11.00ಕ್ಕೆ ಎ.ಸಿ.ಕಚೇರಿ, ಕೆ-ಸ್ವಾನ್ ವಿ.ಸಿ. ಸಭಾಂಗಣದಲ್ಲಿ ಹಾಜರಾಗಿ ರಾಜ್ಯ ಸೇವಾ ಹಾಗೂ ಕುಟುಂಬ ಪಿಂಚಣಿಗೆ ಸಂಬಂಧಿಸಿದ ತಮ್ಮ ಕುಂದು ಕೊರತೆಗಳನ್ನು ತಿಳಿಸಬಹುದಾಗಿದೆ. ಅಥವಾ ಜಿಲ್ಲಾ ಖಜಾನೆಯ ಉಪನಿರ್ದೇಶಕರಿಗೆ ಮುಂಚಿತವಾಗಿ ವಿವರಗಳನ್ನು ನೀಡಬಹುದಾಗಿದೆ ಎಂದು ಜಿಲ್ಲಾ ಖಜಾನೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ

**ಹಾವೇರಿ:** ಜಿಲ್ಲೆಯಲ್ಲಿ ಡಿ.21 ರಿಂದ ಡಿ.24ರವರೆಗೆ ಪಲ್ಸ್ ಪೊಲಿಯೋ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ತಮ್ಮ ಸೊನ್ನೆಯಿಂದ ಐದು ವರ್ಷದೊಳಗಿನ ಮಕ್ಕಳಿಗೆ ಎಲ್ಲ ಮಕ್ಕಳಿಗೆ ಕಡ್ಡಾಯವಾಗಿ ಪೋಲಿಯೋ ಲಸಿಕೆ ಹಾಕಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಂ.ಜಯಾನಂದ ಅವರು ತಿಳಿಸಿದ್ದಾರೆ.

ಡಿ.21 ರಂದು ಬೂತ್‌ಗಳಲ್ಲಿ ಹಾಗೂ ಡಿ.22 ರಿಂದ 24ರವರೆಗೆ ಮನೆ ಮನೆ ಭೇಟಿ ಮೂಲಕ ಪೋಲಿಯೋ ಲಸಿಕೆ ನೀಡಲಾಗುತ್ತಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿ.24 ರಂದು ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಸಮಿತಿ ಸಭೆ

**ದಾವಣಗೆರೆ:** ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ನೇಮಕಾತಿ ನಿಷೇಧ ಮತ್ತು ಪುನರ್ವಸತಿ ಕಾಯ್ದೆಯ ಕುರಿತಂತೆ ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಸಮಿತಿ ಸಭೆಯನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಡಿಸೆಂಬರ್ 24 ರಂದು ಸಂಜೆ 4 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

## ಇಂದು ಆಯವ್ಯಯ ಸಭೆ

**ದಾವಣಗೆರೆ:** ಪ್ರಸಕ್ತ ಸಾಲಿನ ಹರಿಹರ ನಗರಸಭೆಯ ಆಯ ವ್ಯಯ ಸಭೆಯನ್ನು ಡಿಸೆಂಬರ್ 22 ರಂದು ಬೆಳಿಗ್ಗೆ 11.30ಕ್ಕೆ ಆಯೋಜಿಸಲಾಗಿದೆ ಎಂದು ಪೌರಾಯುಕ್ತರು ತಿಳಿಸಿದ್ದಾರೆ.

## ರೈತರ ಬಾಂಧವರ ಗಮನಕ್ಕೆ

**ಗದಗ :** ಮುಂಗಾರು-2025 ಹಂಗಾಮಿನಲ್ಲಿ ಪ್ರಮುಖ ವಾಣಿಜ್ಯ ಬೆಳೆಯಾದ ಹತ್ತಿಯನ್ನು ಜಿಲ್ಲೆಯಲ್ಲಿ ಅಂದಾಜು 7000 ಹೆ. ಪ್ರದೇಶದಲ್ಲಿ ಬೆಳೆಯಲಾಗಿರುತ್ತದೆ. ಪ್ರಸ್ತುತ ಹತ್ತಿ ಕೃಷಿ ಉತ್ಪನ್ನಕ್ಕೆ ಮಾರುಕಟ್ಟೆ ದರವು ಕಡಿಮೆಯಾಗಿರುದರಿಂದ ಕೇಂದ್ರ ಸರ್ಕಾರವು ಬೆಂಬಲ ಬೆಲೆ ಯೋಜನೆಯಡಿ ಮಧ್ಯಮ ಎಳೆ ಹತ್ತಿಗೆ ರೂ. 7,710 ಮತ್ತು ಉದ್ದನೆಯ ಎಳೆ ಹತ್ತಿಗೆ ರೂ. 8,110 ದರವನ್ನು ಘೋಷಿಸಿರುತ್ತದೆ.ಬೆಂಬಲ ಬೆಲೆ ಯೋಜನೆಯಡಿ ನೋಂದಾಯಿಸಿಕೊಳ್ಳಲು 31-12-2025

ಕೊನೆಯ ದಿನವಾಗಿದ್ದು, ಜಿಲ್ಲೆಯ ರೈತರು ಸದರಿ ಯೋಜನೆಯ ಸದುಪಯೋಗಪಡೆದುಕೊಳ್ಳಲು ಭಾರತೀಯ ಹತ್ತಿ ನಿಗಮದ ಏಂಕಂಖ ಝಚಿಟ ಂಠಿಠಿ ನಲ್ಲಿ ಡಿಸೆಂಬರ್ 31 ರೊಳಗಾಗಿ ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಸಮೀಪದ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಛೇರಿ ಅಥವಾ ಭಾರತೀಯ ಹತ್ತಿ ನಿಗಮದ ಗದಗ ಕಛೇರಿಯನ್ನು ಸಂಪರ್ಕಿಸಲು ಜಂಟಿ ಕೃಷಿ ನಿರ್ದೇಶಕರಾದ ಶ್ರೀಮತಿ ಚೇತನಾ ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯಾವುದೇ ಸರ್ಕಾರಿ ಶಾಲೆಗಳು ಮುಚ್ಚಬಾರದು : ಎಸ್ ಎನ್ ಚನ್ನಬಸಪ್ಪ

**ಶಿವಮೊಗ್ಗ:** ಯಾವುದೇ ಸರ್ಕಾರಿ ಶಾಲೆಗಳು ಮುಚ್ಚಬಾರದು. ಅದು ಮುಚ್ಚಿದರೆ ಒಂದು ವ್ಯವಸ್ಥೆ ಮುಚ್ಚಿದಂತಾಗುತ್ತದೆ ಎಂದು ಶಾಸಕರಾದ ಎಸ್ ಎನ್ ಚನ್ನಬಸಪ್ಪ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಉಪ ನಿರ್ದೇಶಕರ ಕಚೇರಿ, ಶಾಲಾ ಶಿಕ್ಷಣ ಇಲಾಖೆ, ರಾಜ್ಯ ಬಾಲಭವನ ಸೊಸೈಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ, ಬಾಲ ಭವನ ಸಮಿತಿ ಸಂಯುಕ್ತಾಶ್ರಯದಲ್ಲಿ ಶನಿವಾರ ನಗರದ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯಲ್ಲಿ ಆಯೋಜಿದ್ದ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ 2025-26 ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು,

ಶಿಕ್ಷಣ ಇಲಾಖೆಯು ಪ್ರತಿಭಾ ಕಾರಂಜಿಯಂತಹ ಕಾರ್ಯಕ್ರಮಗಳ ಮೂಲಕ ಮಕ್ಕಳಲ್ಲಿರುವ ಪ್ರತಿಭೆಗಳನ್ನು ಅನಾವಣಗೊಳಿಸಲು ಅವಕಾಶ ಕಲ್ಪಿಸುತ್ತಿರುವುದು ಉತ್ತಮ ಕಾರ್ಯವಾಗಿದೆ. ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳೂ ಕೂಡ ಅತ್ಯಗತ್ಯವಾಗಿದ್ದು, ಸರ್ಕಾರಿ ಶಾಲೆಗಳು ಇಂತಹ ಚಟುವಟಿಕಗಳನ್ನು ಆಯೋಜಿಸುವಲ್ಲಿ ಯಶಸ್ವಿಯಾಗಿವೆ.

ದೇಶ ಕಟ್ಟಲು ಶಿಕ್ಷಣ ವ್ಯವಸ್ಥೆ ಸಮರ್ಪಕವಾಗಿರಬೇಕು. ಶಿಕ್ಷಣ ಎಲ್ಲರಿಗೂ ಅತಿ ಅಗತ್ಯವಾಗಿದ್ದು, ಬಹು ಮುಖ್ಯವಾಗಿ ಸರ್ಕಾರಿ ಶಾಲೆಗಳಲ್ಲಿ ಓದುವ ಮಕ್ಕಳು




ದೇಶಕ್ಕೆ ಉತ್ತಮ ಕೊಡುಗೆ ನೀಡುತ್ತಿದ್ದಾರೆ ಎಂದ ಅವರು ಸರ್ಕಾರಿ ಶಾಲೆಗಳಲ್ಲಿ ಉತ್ತಮ ಶಿಕ್ಷಣ ದೊರಕುತ್ತಿದ್ದರೂ ಕಾರಣಾಂತರಗಳಿಂದ ಶಾಲೆಗಳು ಮುಚ್ಚುವ ಹಂತಕ್ಕೆ ಬಂದಿದ್ದು ಇದಕ್ಕೇನು ಕಾರಣವೆಂದು ನಾವೆಲ್ಲ ಅವಲೋಕಿಸುವುದು ಅತಿ ಮುಖ್ಯವಾಗಿದೆ ಎಂದರು.

ಸೂಡಾ ಅಧ್ಯಕ್ಷ ಹೆಚ್ ಎಸ್ ಸುಂದರೇಶ್ ಉದ್ಘಾಟಕ ನುಡಿಗಳನ್ನಾಡಿ, ಸ್ವಾತಂತ್ರಾ ನಂತರ ಶಿಕ್ಷಣ ಕ್ಷೇತ್ರದಲ್ಲಿ ಸರ್ಕಾರ ಅನೇಕ ಬದಲಾವಣೆಗಳನ್ನು

ತಂದಿದ್ದು, ಸರ್ಕಾರಿ ಶಾಲೆಗಳಿಗೆ ಹೆಚ್ಚಿನ ಮಾನ್ಯತೆ ನೀಡಲಾಗಿದೆ. ಸರ್ಕಾರಿ ಶಾಲೆಗಳಲ್ಲಿ ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳಿಗೆ ಸೌಲಭ್ಯಗಳನ್ನು ನೀಡಿ ಸುಸಜ್ಜಿತ ವ್ಯವಸ್ಥೆ ಕಲ್ಪಿಸಿದೆ. ಇತ್ತೀಚಿಗೆ ಶಿಕ್ಷಣ ವ್ಯಾಪಾರೀಕರಣವಾಗುತ್ತಿದ್ದು ಇದು ಸರ್ಕಾರಿ ಶಾಲೆಗಳ ಮೇಲೆ ಪರಿಣಾಮ ಬೀರುತ್ತಿರುವ ಕಾರಣ ಸರ್ಕಾರಿ ಶಾಲೆಗಳು ಮುಚ್ಚುವ ಹಂತಕ್ಕೆ ಬಂದಿದ್ದು ಈ ಬಗ್ಗೆ ಗಂಭೀರವಾಗಿ ಚಿಂತನೆ ಮಾಡಬೇಕಿದೆ.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಚಂದ್ರಭೂಪಾಲ, ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷರಾದ ಹೆಚ್ ಎಂ ಮಧು, ಡಿಡಿಪಿಐ ಮಂಜುನಾಥ್, ಡಯಟ್ ಪ್ರಾಂಶುಪಾಲ ಕೃಷ್ಣಮೂರ್ತಿ, ಶಿವಮೊಗ್ಗ ಬಿಇಓ ರಮೇಶ್, ಜಿಪಿಟಿ ರಾಜ್ಯಾಧ್ಯಕ್ಷ ಮುರಳೀಧರ, ಪ್ರೌಢ ಶಿಕ್ಷಕರ ಸಂಘದ ಅಧ್ಯಕ್ಷ ರಾಘವೇಂದ್ರ, ಇತರೆ ಅಧಿಕಾರಿಗಳು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಪತ್ರಿಕಾ ವಿತರಕ ಚಲುವರಾಜು (ರಘು)ಗೆ ಕನ್ನಡ ಸೇನೆಯ ಸೇವಾ ರತ್ನ ಪ್ರಶಸ್ತಿ



**ತುಮಕೂರು :** ಡಾ. ಧನಿಯಾಕುಮಾರ್‌ನೇತೃತ್ವದ "ಕನ್ನಡ ಸೇನೆ ಕರ್ನಾಟಕ " ಸಂಘಟನೆಯು 25ನೇ ವರ್ಷದ ಬೆಳ್ಳಿ ಹಬ್ಬ ಆಚರಿಸುತ್ತಿರುವ ಸಂದರ್ಭದಲ್ಲಿ ಕಳೆದ ಏಳು ವರ್ಷಗಳಿಂದ ತುಮಕೂರು ಜಿಲ್ಲಾ ದಿನಪತ್ರಿಕೆ ಹಂಚಿಕೆದಾರರ ಸಂಘದ ಸಂಸ್ಥಾಪಕ ಅಧ್ಯಕ್ಷರಾಗಿ ಸಂಘಟನೆಯನ್ನು ಮುನ್ನಡೆಸುತ್ತಾ, ನಿಸ್ವಾರ್ಥ ಸೇವೆ ಸಲ್ಲಿಸಿದ ಚಲುವರಾಜು ( ರಘು) ರವರಿಗೆ ಕನ್ನಡ ಸೇನೆ ವತಿಯಿಂದ "ಸೇವಾ ರತ್ನ" ಪ್ರಶಸ್ತಿ ನೀಡಿ ಗೌರವಿಸುತ್ತಿದೆ.

ತುಮಕೂರು ಜಿಲ್ಲೆಯ ಪತ್ರಿಕಾ ವಿತರಕರಿಗೆ ಗೌರವ ನೀಡಿದ ಕನ್ನಡ ಸೇನೆಯ ಧನಿಯಾ ಕುಮಾರ್ ರವರಿಗೆ ಮತ್ತು ಅವರ ತಂಡಕ್ಕೆ ಸಮಸ್ತ ರಾಜ್ಯದ ಪತ್ರಿಕಾ ವಿತರಕರು ಧನ್ಯವಾದ ಸಲ್ಲಿಸಿದ್ದಾರೆ.

ಕರ್ನಾಟಕ ರಾಜ್ಯ ಪತ್ರಿಕಾ ವಿತರಕರ ಒಕ್ಕೂಟದ ರಾಜ್ಯಾಧ್ಯಕ್ಷರಾದ ಕೆ ಶಂಭುಲಿಂಗ ಹಾಗೂ ಉಪಾಧ್ಯಕ್ಷರಾದ ಪ್ರಶಾಂತ್ ಕುಮಾರ್ ಹಾಗೂ ಪ್ರಧಾನ ಕಾರ್ಯದರ್ಶಿಗಳಾದ ಸಂಗಮ್ ಸುರೇಶ್ ರವರು ಹರ್ಷ ವ್ಯಕ್ತಪಡಿಸಿದ್ದಾರೆ

# ಮಕ್ಕಳಲ್ಲಿ ಸಮರ್ಪಣಾ ಭಾವನೆ ಅಗತ್ಯ ಡಾ. ರಾಹುಲ್ ದೇವರಾಜ್



**ಶಿವಮೊಗ್ಗ:** ಮಕ್ಕಳಲ್ಲಿ ಸಮರ್ಪಣಾ ಭಾವನೆ ಅಗತ್ಯ ಎಂದು ಡಾ. ರಾಹುಲ್ ದೇವರಾಜ್ ಅವರು ಹೇಳಿದರು.

ಅವರು ನಗರದ ಡೆಲ್ಲಿ ವರ್ಡ್ ಶಾಲೆಯ ವಾರ್ಷಿಕೋತ್ಸವವನ್ನು ಉದ್ಘಾಟಿಸಿ ಮಾತನಾಡುತ್ತಾ, ಮಕ್ಕಳ ಸಾಧನೆಗೆ ಮನೋಬಲ ಉತ್ತೇಜನ ನೀಡುವುದು, ಸಂಸ್ಕಾರ ನೀಡುವುದು ಪೋಷಕರ ಜವಾಬ್ದಾರಿ ಎಂದು ಹೇಳಿದರು.

ಡಾ. ಸಂಧ್ಯಾ ಕಾವೇರಿ ಅವರು ಮಾತನಾಡಿ, ಪ್ರಕೃತಿ ಕಲಿಸುವ ಪಾಠ ಯಾವುದೇ ಮಾಧ್ಯಮ ಕಲಿಸುವುದಿಲ್ಲ. ಮೊಬೈಲ್ ಹಾಗೂ ಮಾಧ್ಯಮಗಳಿಗೆ ನೀಡುವ ಸಮಯವನ್ನು ಪೋಷಕರು ಮಕ್ಕಳಿಗಾಗಿ ಮೀಸಲಿಡಿ ಎಂದರು.

ಕಾರ್ಯಕ್ರಮಲ್ಲಿ ಶಾಲೆಯ ಬೋರ್ಡ್ ಆಫ್ ಡೈರೆಕ್ಟರ್ ಡಾ. ನಲ್ಲಪಾಟಿ ವೆಂಕಟೇಶ್ವರ, ಶಾಲೆಯ ಪ್ರಾಂಶುಪಾಲೆ ದಿವ್ಯ ಶೆಟ್ಟಿ, ಡೆಲ್ಲಿ ವರ್ಲ್ಡ್ ಶಾಲೆಯ ವಿವಿಧ ಶಾಖೆಯ ಶಾಲೆಯ ಪ್ರಾಂಶುಪಾಲರು, ಆಡಳಿತ ಅಧಿಕಾರಗಳು, ಶಿಕ್ಷಕರು ಮಕ್ಕಳು ಪೋಷಕರು ಉಪಸ್ಥಿತರಿದ್ದರು.

# ಪಾರ್ಶ್ವನಾಥ ವಿದ್ಯಾಸಂಸ್ಥೆಯ ಆಶ್ರಯದಲ್ಲಿ ಮಕ್ಕಳ ಸಂತೇ ಕಾರ್ಯಕ್ರಮ

**ಚಿತ್ರದುರ್ಗ :** ಚಿತ್ರದುರ್ಗ ನಗರದ ಪಾರ್ಶ್ವನಾಥ ವಿದ್ಯಾಸಂಸ್ಥೆಯ ಆಶ್ರಯದಲ್ಲಿ ಶನಿವಾರ ಮಕ್ಕಳ ಸಂತೇ ಕಾರ್ಯ ಕ್ರಮವನ್ನು ಶಾಲಾ ಆವರಣದಲ್ಲಿ ನಡೆಸಲಾಯಿತು.

ಈ ಕಾರ್ಯಕ್ರಮದಲ್ಲಿ ಮಕ್ಕಳು ಸ್ವಯಂ ಆಗಿ ವಸ್ತುಗಳನ್ನು ಮಾರಾಟ ಮಾಡುವುದರ ಮೂಲಕ ಗ್ರಾಹಕರನ್ನು ಆಕರ್ಷಿಸಿ ತಮ್ಮ ವಸ್ತುಗಳನ್ನು ಮಾರಾಟ ಮಾಡುತ್ತಿದ್ದು ಕಂಡು ಬಂದಿತು. ಅಣ್ಣಬನ್ನಿ, ಅಕ್ಕಬನ್ನಿ, ಅಂಕಲ್ ಬನ್ನಿ ಅಂಟಿಬನ್ನಿ, ತಾತಾಬನ್ನಿ, ಅಜ್ಜಿಬನ್ನಿ ಎಂದು ಕೂಗುತ್ತಾ ತಮ್ಮಲ್ಲಿದ್ದ ವಸ್ತುಗಳನ್ನು ಅವರಿಗೆ ತೋರಿಸಿ ಕಡಿಮೆ ರೇಟು ತೆಗೆದುಕೊಳ್ಳಿ ಎಂದು ದುಬಾಲು ಬೀಳುತ್ತಿದ್ದು ದೃಶ್ಯ ಕಂಡು ಬಂದಿತು.

ಈ ಮಕ್ಕಳ ಸಂತೇಯಲ್ಲಿ ಸೋಪ್ಪು, ತರಕಾರಿ, ಬಿಸ್ಕತ್‌ಗಳು, ರವೆ ಉಂಡೆ, ಕಾರ ಮಂಡಕ್ಕಿ, ಗಿರಿಮಿಟ್, ಪಾನಿ ಪೂರಿ, ಸೌಂದರ್ಯ ವರ್ಧಕ ವಸ್ತುಗಳು, ಹಣ್ಣುಗಳು, ಹೂಗಳು, ಕಡ್ಲೇಗಿಡ, ಬಳೆಗಳು ಹೇರ್ ಪಿನ್, ಕ್ಲಪಿಗಳು, ತಿಕಲಿಗಳು, ಹುರಿದ ಸೇಂಗಾ, ಚಕ್ಕಲಿ, ಹವರೆಕಾಯಿ, ಪಾಪ್‌ಕಾರನ್, ಬಿಸ್ಕತ್, ಸೋಪುಗಳು, ಪೇಸ್ಟ್ ಬ್ರಶ್‌ಗಳು, ಮೋಬೈಲ್ ಚಾರ್ಜರ್ ವೈರ್, ಹಿಯರಿಂಗ್, ಉದಿನಕಡ್ಡಿ, ಪೆನ್ನು ನೈಲ್ ಪಾಲಿಷ್ ಸೇರಿದಂತೆ ಇತರೆ ವಸ್ತುಗಳ ಮಾರಾಟವನ್ನು ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಪಾರ್ಶ್ವನಾಥ ವಿದ್ಯಾ ಸಂಸ್ಥೆಯ ಕಾರ್ಯದರ್ಶಿ ಸುರೇಶ್ ಕುಮಾರ್ ಸಿಸೋಡಿಯಾ ಈ ರೀತಿಯಾದ ಕಾರ್ಯಕ್ರಮವನ್ನು



ನಮ್ಮ ಶಾಲೆಯಲ್ಲಿ ಕಳೆದ ಹಲವಾರು ವರ್ಷಗಳಿಂದ ನಡೆಸಿಕೊಂಡು ಬರಲಾಗುತ್ತಿದೆ ಇದರಲ್ಲಿ ಮಕ್ಕಳು ಕೂಡುವ ತೆಗೆದುಕೊಳ್ಳುವ ಲೆಕ್ಕಾಚಾರವನ್ನು ಕಲಿಯುವ ಉದ್ದೇಶದಿಂದ ಇದನ್ನು ಮಾಡಲಾಗುತ್ತಿದೆ ಈ ರೀತಿಯಾಗಿ ಮಾಡುವುದರಿಂದ ಮಕ್ಕಳಲ್ಲಿ ಗಣಿತದ ಪ್ರಜ್ಞೆ ಬೆಳೆಯುತ್ತಿದೆ ಜನತೆಯ ನಡುವೆ ಯಾವ ರೀತಿ ವ್ಯವಹಾರ ಮಾಡಬೇಕೆಂಬುದು ತಿಳಿಯುತ್ತದೆ. ನಮ್ಮ ಶಾಲೆಯಲ್ಲಿನ ಎಲ್ ಕೆ.ಜಿ.ಯಿಂದ ಹಿಡಿದು 9 ನೇ ತರಗತಿಯವರೆಗಿನ ಸುಮಾರು 400 ಮಕ್ಕಳು ಈ ಮಕ್ಕಳ ಸಂತೇ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಾರೆ ಎಂದರು.ಈ ಸಂದರ್ಭದಲ್ಲಿ ಪಾರ್ಶ್ವನಾಥ ವಿದ್ಯಾ ಸಂಸ್ಥೆಯ ಸಹಾ ಕಾರ್ಯದರ್ಶಿ ಸುರೇಶ್ ಪಟಿಯಾರ್,ಖಂಜಾಚಿ ರಾಜೇಂದ್ರ ದಲೇಷಾ ನಿರ್ದೇಶಕರಾದ ಜವೇರಿಲಾಲ್, ಹಿರಿಯ ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಯರಾದ ಶ್ರೀಮತಿ ನಜೀಮಾ ಸ್ವಾಲೆಹಾ ಪ್ರೌಢಶಾಲಾ ಮುಖ್ಯೋಪಾಧ್ಯಯರಾದ ಜನಕರೆಡ್ಡಿ ಸೇರಿದಂತೆ ಶಾಲೆಯ ಬೋಧಕ ಮತ್ತು ಭೋದಕೇತರ ಸಿಬ್ಬಂದಿಗಳು ಹಾಜರಿದ್ದರು.

# ಡಿ.22, 23 ರಂದು ಜಿಎಂ ವಿವಿಯಲ್ಲಿ ಓಪನ್ ಡೇ ಕಾರ್ಯಕ್ರಮ

**ದಾವಣಗೆರೆ:** ಪಿಯು ನಂತರ ವಿದ್ಯಾರ್ಥಿಗಳು ಯಾವ ಪದವಿ ಅಥವಾ ಕೋರ್ಸ್‌ಗಳಿಗೆ ಹೋಗಬೇಕೆಂಬ ಗೊಂದಲದಲ್ಲಿರುತ್ತಾರೆ ಅಂತಹವರಿಗೆ ಕೋರ್ಸ್‌ಗಳ ಬಗ್ಗೆ ಮಾಹಿತಿ ನೀಡಲು ಹಾಗೂ ಜಿಎಂ ವಿಶ್ವವಿದ್ಯಾಲಯದಲ್ಲಿ ಪದವಿ ಹಾಗೂ ಕೋರ್ಸ್‌ಗಳ ಲಭ್ಯತೆ ಬಗ್ಗೆ, ವಿದ್ಯಾರ್ಥಿಗಳಿಗೆ ನೇರವಾಗಿ ತಿಳಿಸಲು ಇದೇ ಡಿಸೆಂಬರ್ 23 ಮತ್ತು 24 ರಂದು ವಿದ್ಯಾಲಯದಲ್ಲಿ "ಓಪನ್ ಡೇ" ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಸುದ್ದಿಗೋಷ್ಠಿಯಲ್ಲಿ ಈ ಬಗ್ಗೆ ವಿವಿಯ ಡಾ॥ ಶ್ವೇತಾ ಮರಿಗೌಡರ್ ಮಾತನಾಡಿ, ಜಿಎಂಯುನಲ್ಲಿ ಇಂಜಿನಿಯರಿಂಗ್ ಅಷ್ಟೇ ಅಲ್ಲದೇ, ವಿಜ್ಞಾನ, ವಾಣಿಜ್ಯ, ಮ್ಯಾನೇಜ್‌ಮೆಂಟ್, ಸಂಶೋಧನಾ ಪದವಿ, ಕಂಪ್ಯೂಟರ್ ಅಪ್ಲಿಕೇಶನ್ಸ್ ಸೇರಿದಂತೆ ಆಹಾರ, ಕೃಷಿ, ಆರೋಗ್ಯ ಕ್ಷೇತ್ರಗಳಿಗೆ ಸಂಬಂಧಿಸಿದ ಸ್ನಾತಕ ಮತ್ತು ಸ್ನಾತಕೋತರ ಹಾಗೂ ಪಿಹೆಚ್‌ಡಿ ಕೋರ್ಸ್‌ಗಳು ಲಭ್ಯವಿದ್ದು ಇವುಗಳು ಉದ್ಯೋಗಮುಖಿ ಮತ್ತು ಕೌಶಲ್ಯಾಧಾರಿತ ಶಿಕ್ಷಣವನ್ನು ಒಳಗೊಂಡಿವೆ. ಪ್ರಸಕ್ತ ಸಾಲಿನಲ್ಲಿ ಕೈಗಾರಿಕಾ ಅಗತ್ಯಗಳಿಗೆ ಅನುಗುಣವಾಗಿ ರೂಪಿಸಿದ ಹೊಸ ಕೋರ್ಸ್‌ಗಳ ಜೊತೆಗೆ ರೋಬೋಟಿಕ್ ಮತ್ತು ಅಟೋಮೇಷನ್, ಅರ್ಟಿಫಿಷಲ್ ಇಂಟಲಿಜೆನ್ಸ್ ಮತ್ತು ಮಿಷನ್ ಲರ್ನಿಂಗ್ ಸೇರಿದಂತೆ ಹೊಸ ತಂತ್ರಜ್ಞಾನ, ನಿರ್ವಹಣೆ ಮತ್ತು ವಿಜ್ಞಾನ ಕ್ಷೇತ್ರಗಳಿಗೆ ಒತ್ತು ನೀಡುವ ಹೊಸ ಕೋರ್ಸ್‌ಗಳನ್ನು ಪ್ರಾರಂಭಿಸಲಾಗಿದೆ ಎಂದರು.

ವಾಣಿಜ್ಯ ಶಾಲೆಯ ನಿರ್ದೇಶಕಿ ಡಾ॥ ಶ್ವೇತಾ ಹೆಚ್.ಎಸ್. ಮಾತನಾಡಿ, ಇತರೆ ಕಾಲೇಜುಗಳ ವಿದ್ಯಾರ್ಥಿಗಳಿಗೆ ಮಾದರಿ ಆಗುವ ನಿಟ್ಟಿನಲ್ಲಿ ಜಿಎಂಯು ವಿವಿಧ ವಿಭಾಗಗಳ ವಿದ್ಯಾರ್ಥಿಗಳು ಸಿದ್ಧಪಡಿಸಿದ ಮಾದರಿಗಳ ಪ್ರಸ್ತುತಿಗೆ ವಿಜ್ಞಾನ ವಸ್ತುಪ್ರದರ್ಶನ ಸಹ ಏರ್ಪಡಿಸಲಾಗಿದೆ. ಈ ಓಪನ್‌ಡೇ ಕಾರ್ಯಕ್ರಮವು ಎರಡು ದಿನಗಳು ಬೆಳಗ್ಗೆ 9 ರಿಂದ ಸಂಜೆ 6 ಗಂಟೆವರೆಗೆ ನಡೆಯಲಿದ್ದು, ದಾವಣಗೆರೆ ಅಲ್ಲದೇ, ರಾಜ್ಯದ ವಿವಿಧ ಜಿಲ್ಲೆಗಳ ಸುಮಾರು 60 ಪಿಯು ಕಾಲೇಜುಗಳಿಗೆ ಭೇಟಿ ನೀಡಿ ಆಹ್ವಾನ ನೀಡಲಾಗಿದ್ದು, ಸಾವಿರಾರು ವಿದ್ಯಾರ್ಥಿಗಳು ಭಾಗವಹಿಸುವ ನಿರೀಕ್ಷೆ ಇದೆ. ಕಾರ್ಯಕ್ರಮಕ್ಕೆ ಆಗಮಿಸುವ ವಿದ್ಯಾರ್ಥಿಗಳಿಗೆ ವಾಹನ ವ್ಯವಸ್ಥೆ ಸಹ ಕಲ್ಪಿಸಲಾಗಿದೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಜಿಎಂ ವಿಶ್ವವಿದ್ಯಾಲಯದ ಡಾ. ವೀರಗಂಗಾಧರಸ್ವಾಮಿ ಟಿ.ಎಂ. ಸುರೇಶ್ ಬಾಬು ಉಪಸ್ಥಿತರಿದ್ದರು

# ಸಾಲು ಮರದ ತಿಮ್ಮಕ್ಕ ಅವರ ಸಾಧನೆ ಮಾದರಿ



ನ್ಯಾಮತಿ ತಾಲೂಕಿನ ಸುರಹೊನ್ನೆ ಗ್ರಾಮದ ಪಿಎಂಸಿ ಶಾಲೆಯಲ್ಲಿ ಶನಿವಾರ ಆಯೋಜಿಸಿದ್ದ ತಾಲೂಕು ಮಟ್ಟದ ಪ್ರಾಥಮಿಕ ಶಾಲಾ ಪ್ರತಿಭಾ ಕಾರಂಜಿ ಕಾರ್ಯಕ್ರಮದ ಉದ್ಘಾಟನೆ ನಡೆಸುತ್ತಿರುವ ಗಣ್ಯರು.

**ನ್ಯಾಮತಿ :** ಸಾಲುಮರದ ತಿಮ್ಮಕ್ಕ ಅವರ ಸಾಧನೆ ಮಾದರಿಯಾಗಿದ್ದು, ಅವರಂತೆ ಮಕ್ಕಳು ಸಾಮಾಜಿಕ ಕ್ಷೇತ್ರದಲ್ಲಿ ತೊಡಗಿಸಿಕೊಳ್ಳಬೇಕು. ಅಂತಹ ಪ್ರಯತ್ನಕ್ಕೆ ಪ್ರತಿಭಾ ಕಾರಂಜಿಯಂತಹ ಕಾರ್ಯಕ್ರಮಗಳು ಪೂರಕವಾಗಿವೆ ಎಂದು ಶಾಸಕ ಡಿ.ಜಿ. ಶಾಂತನಗೌಡ ಹೇಳಿದರು.

ಅವರು ನ್ಯಾಮತಿ ತಾಲೂಕಿನ ಸುರಹೊನ್ನೆ ಗ್ರಾಮದ ಪಿಎಂಸಿ ಶಾಲೆಯಲ್ಲಿ ಶನಿವಾರ

ಆಯೋಜಿಸಿದ್ದ ತಾಲೂಕು ಮಟ್ಟದ ಪ್ರಾಥಮಿಕ ಶಾಲಾ ಪ್ರತಿಭಾ ಕಾರಂಜಿ ಕಾರ್ಯಕ್ರಮದಲ್ಲಿ ಮಾತನಾಡಿದರು.

"ಮಕ್ಕಳಲ್ಲಿರುವ ಪ್ರತಿಭೆ ಚಿಕ್ಕ ವಯಸ್ಸಿನಲ್ಲಿಯೇ ಅರಳಲು ಕೌಶಲಗಳ ವೃದ್ಧಿ ಅಗತ್ಯ. ಇದಕ್ಕಾಗಿ ಸರ್ಕಾರ ಹಲವು ಯೋಜನೆಗಳನ್ನು ರೂಪಿಸಿದೆ. ವಿದ್ಯಾರ್ಥಿಗಳು ಕಲಿಕೆಯ ಜೊತೆಗೆ ವಿವಿಧ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಶಿಕ್ಷಣ ಪಡೆಯುವುದು ಒಂದು ಅದ್ಭುತ ಕಲೆ" ಎಂದು ಅಭಿಪ್ರಾಯಪಟ್ಟರು.

ಡಿಡಿಪಿಐ ಗೀತಾ ಅವರು ಮಾತನಾಡಿ, ವಿದ್ಯಾರ್ಥಿಗಳಲ್ಲಿನ ಪ್ರತಿಭೆಯನ್ನು ಗುರುತಿಸಿ ಹೊರತರಲು ಶಿಕ್ಷಕರಿಗೆ ಅವಕಾಶವನ್ನು ನೀಡುತ್ತದೆ. ವಿದ್ಯಾರ್ಥಿಗಳ ಕಲಿಕೆಗೆ ಹಾಗೂ ಹೊಸದಾದ ಜೀವನ ಕೌಶಲವನ್ನು ಹೊಂದಲು ಪ್ರತಿಭಾ ಕಾರಂಜಿ ಸಹಕಾರಿಯಾಗಲಿಗು ಆಯ್ಕೆಯಾದ ಪ್ರತಿಭೆಗಳು ರಾಜ್ಯ ಮಟ್ಟದವರೆಗೂ ಬೆಳೆಯಲು ಅವಕಾಶವಿದೆ" ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನ್ಯಾಮತಿ ತಹಶೀಲ್ದಾರ್ ಕವಿರಾಜ್, ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಟಿ. ನಿಂಗಪ್ಪ, ಕ್ಷೇತ್ರ ಸಮನ್ವಯಾಧಿಕಾರಿ ತಿಪ್ಪೇಶಪ್ಪ ಎಂ, ಪಿಡಬ್ಲ್ಯೂಡಿ ಎಇಇ ಅಶೋಕ್, ಅನಿಲ್, ಸಿ.ಟಿ. ಹರೀಶ್, ಶಿಕ್ಷಕರು , ವಿವಿಧ ಸಂಘಗಳ ಅಧ್ಯಕ್ಷರು ಪದಾಧಿಕಾರಿಗಳು ವಿದ್ಯಾರ್ಥಿಗಳು ಇದ್ದರು.

# ವೈದ್ಯಾಧಿಕಾರಿ ಹುದ್ದೆಗಳ ಮೆರಿಟ್ ಆಯ್ಕೆ ಪಟ್ಟಿ ಪ್ರಕಟ

**ಹಾವೇರಿ:** ರಾಷ್ಟ್ರೀಯ ಆರೋಗ್ಯ ಅಭಿಯಾನ ಎನ್.ಪಿ.ಎಸ್.ಸಿ.ಡಿ. ಕಾರ್ಯಕ್ರಮದಡಿ ಗುತ್ತಿಗೆ ಆಧಾರದ ಎನ್.ಸಿ.ಡಿ. ವೈದ್ಯಾಧಿಕಾರಿ ಹುದ್ದೆಗಳ ಮೆರಿಟ್ ಆಯ್ಕೆ ಪಟ್ಟಿಯನ್ನು www.haveri.nic.in ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ಆಕ್ಷೇಪಣೆಗಳಿದ್ದಲ್ಲಿ ದಿನಾಂಕ 24–12–2024ರೊಳಗಾಗಿ ಸಲ್ಲಿಸಲು ಅವಕಾಶ ನೀಡಲಾಗಿದೆ ಎಂದು ಜಿಲ್ಲಾ ಸರ್ವೇಕ್ಷಣಾ ಘಟಕದ ಜಿಲ್ಲಾ ಸವೇಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಖಿಲ ಭಾರತ ವಿವಿ ಯೋಗ ಪಂದ್ಯಾವಳಿಗೆ ಸೋಮೇಶ್ವರ ಎಸ್.ಶೆಟ್ಟರ್ ಆಯ್ಕೆ



**ದಾವಣಗೆರೆ:** ವೆಲ್ಸ್ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್ ಚೆನ್ನೈನಿಂದ ಡಿಸೆಂಬರ್ 18 ರಿಂದ 22 ರವರೆಗೆ ಆಯೋಜಿಸಲ್ಪಡುವ ಅಖಿಲ ಭಾರತ ಅಂತರ ವಿಶ್ವವಿದ್ಯಾಲಯ ಯೋಗ ಪುರುಷರ ಪಂದ್ಯಾವಳಿಗೆ ದಾವಣಗೆರೆ ವಿಶ್ವವಿದ್ಯಾಲಯದ ತಂಡಕ್ಕೆ ದಾವಣಗೆರೆ ವಚನ ವಿವಿಧ ಕಾಲೇಜುಗಳ ಏಳು ವಿದ್ಯಾರ್ಥಿಗಳು ಆಯ್ಕೆ ಆಗಿದ್ದಾರೆ. ಅವರಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸೋಮೇಶ್ವರ ಎಸ್.ಶೆಟ್ಟರ್ ಕೂಡ ಆಯ್ಕೆ ಅಗಿದ್ದಾರೆ.

# ನಾಗರಾಜಗೆ ಪಿಎಚ್.ಡಿ. ಪದವಿ



**ದಾವಣಗೆರೆ** : ಚನ್ನಗಿರಿ ತಾಲ್ಲೂಕಿನ ಈರಗನಹಳ್ಳಿ ಗ್ರಾಮದ ಎಸ್.ನಾಗರಾಜ ಅವರಿಗೆ ಹರಿದಾಸ ಸಾಹಿತ್ಯದಲ್ಲಿ ಹೆಳವನಕಟ್ಟೆ ಗಿರಿಯಮ್ಮ: ಭಕ್ತಿ ಮತ್ತು ಪ್ರಾದೇಶಿಕತೆ ಕುರಿತು ಸಂಶೋಧನಾ ಮಹಾಪ್ರಬಂಧ ಮಂಡಿಸಿದಕ್ಕಾಗಿ ದಾವಣಗೆರೆ ವಿಶ್ವವಿದ್ಯಾನಿಲಯವು ಪಿಎಚ್.ಡಿ. ಪದವಿ ಪ್ರದಾನ ಮಾಡಿದೆ.

ವಿಶ್ವವಿದ್ಯಾನಿಲಯದ ಕನ್ನಡ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಭೀಮಾಶಂಕರ ಜೋಶಿ ಅವರ ಮಾರ್ಗದರ್ಶನದಲ್ಲಿ ನಾಗರಾಜ ಅವರು ಸಂಶೋಧನೆ ನಡೆಸಿದ್ದರು.

# ರಾಷ್ಟ್ರೀಯ ಲಸಿಕಾ ದಿನ – ಪಲ್ಸ್ ಪೋಲಿಯೋ 2025

**ಹಾಸನ** : ಜಿಲ್ಲಾದ್ಯಂತಡಿ.21ರಂದುನಡೆಯುವ ಪಲ್ಸ್ ಪೋಲಿಯೋಕಾರ್ಯಕ್ರಮವನ್ನು "ಎರಡು ಹನಿಗಳು– ಪೋಲಿಯೋ ವಿರುದ್ಧ ನಿರಂತರ ಗೆಲುವು" ಎಂಬ ಘೋಷ ವಾಕ್ಯದೊಂದಿಗೆಆಯೋಜಿಸಲಾಗಿದೆ, ಜಿಲ್ಲೆಯಲ್ಲಿ 0–5 ವರ್ಷದೊಳಗಿನ 1,06,747 ಮಕ್ಕಳ ಗುರಿ ಹೊಂದಿದ್ದು ಮತ್ತು 468493 ಮನೆಗಳನ್ನು ತಲುಪುವಗುರಿ ಹೊಂದಲಾಗಿದೆ. ಮೊದಲ ದಿನ 872 ಬೂತ್‌ಗಳಲ್ಲಿ
(ನಗರ–140 ಮತ್ತು ಗ್ರಾಮೀಣ–732) ಲಸಿಕೆ ಹಾಕಲಾಗುತ್ತಿದೆ, ನಂತರಎರಡನೆ ದಿನದಿಂದ 1744 ತಂಡಗಳು ಮನೆ ಮನೆ ಭೇಟಿ ಮಾಡಲಿದ್ದು (ಒಂದುತಂಡದಲ್ಲಿ 2 ಸದಸ್ಯರಂತೆ) ಹಾಗೂ 174 ಮೇಲ್ವಿಚಾರಕರುಒಟ್ಟು (5 ಬೂತ್‌ಗಳಿಗೆ ಒಬ್ಬರಂತೆ) ರಂತೆ ನಗರ ಪ್ರದೇಶ ಮತ್ತುಗ್ರಾಮಾಂತರ ಪ್ರದೇಶಗಳಲ್ಲಿ ತಾಲ್ಲೂಕುವಾರು ಪಲ್ಸ್ ಪೋಲಿಯೋ ಸೂಕ್ಷ್ಮಕ್ರಿಯಾಯೋಜನೆಯಂತೆಕಾರ್ಯನಿರ್ವಹಿಸಲಿದ್ದಾರೆ. ಇದರಲ್ಲಿಗ್ರಾಮೀಣ ಪ್ರದೇಶದಲ್ಲಿ 3 ದಿನ ಹಾಗೂ ನಗರ ಪ್ರದೇಶದಲ್ಲಿ 4 ದಿನಗಳು ಕಾಲ ಮನೆ ಬೇಟಿಮಾಡುವ ಮೂಲಕ ಲಸಿಕೆ ಪಡೆಯಲು ಬಿಟ್ಟುಹೋದ ಮಕ್ಕಳಿಗೂ ಲಸಿಕೆ ಹಾಕಲಾಗುತ್ತದೆ.

ಜಿಲ್ಲೆಯ 8 ತಾಲ್ಲೂಕಿನಲ್ಲಿ ವಿಶೇಷವಾಗಿ ಒಟ್ಟು 7 ಒಂಭುಟಜ ಣಜಚಿಟ(ಸಂಚಾರಿತಂಡ) ಮತ್ತುಒಟ್ಟು 23 ಖಿಡಿಚಿಟ್ಟುಣ ಖಿರುಟಣಾ ಗಳನ್ನು ಬಸ್‌ಸ್ಟ್ಯಾಂಡ್, ರೈಲ್ವೆ ಸ್ಟೇಷನ್, ದೇವಸ್ಥಾನ, ರಿಂಗ್‌ರೋಡ್, ಟೋಲ್‌ಗೇಟ್ ಗಳಲ್ಲಿ ಸ್ಥಾಪಿಸಲಾಗಿದ್ದು, 0–5 ವರ್ಷದ ಮಕ್ಕಳನ್ನು ಗುರುತಿಸಿ ಪೋಲಿಯೋ ಹನಿಯನ್ನು ನೀಡಲಾಗುವುದು.

ಆರೋಗ್ಯಇಲಾಖೆಯಿಂದ ಮೇಲ್ವಿಚಾರಣೆ ನಡೆಸಲುಎಲ್ಲಾಕಾರ್ಯಕ್ರಮ ಅನುಷ್ಠಾನಾಧಿಕಾರಿಗಳನ್ನು ಮತ್ತು ಸಿಬ್ಬಂದಿಗಳನ್ನು ತಾಲ್ಲೂಕುವಾರು ನೋಡೆಲ್ ಅಧಿಕಾರಿಗಳನ್ನಾಗಿ ನೇಮಿಸಿ ಸುತ್ತೋಲೆಯನ್ನು ಹೊರಡಿಸಲಾಗಿದೆ ಹಾಗೂ ಜಿಲ್ಲೆಯಲ್ಲಿಡಿ.21ಬೂತ್ ದಿನದಂದು ಪಲ್ಸ್ ಪೋಲಿಯೋಕಾರ್ಯಕ್ರಮವನ್ನುಜನಪ್ರತಿನಿಧಿಗಳಿಂದ ಉದ್ಘಾಟಿಸಲುಎಲ್ಲಾತಾಲ್ಲೂಕು ಆರೋಗ್ಯಾಧಿಕಾರಿಗಳಿಗೆ ಕ್ರಮವಹಿಸಲು ಸೂಚಿಸಲಾಗಿದೆ.

ಪೋಲಿಯೋ ಮುಕ್ತ ಸಮಾಜ, ಆರೋಗ್ಯವಂತ ಸಮಾಜದ ಸೂಚಕವಾಗಿದ್ದು ಸಾರ್ವಜನಿಕರು ಮತ್ತು 5 ವರ್ಷದೊಳಗಿನ ಮಕ್ಕಳ ತಂದೆ ತಾಯಿಗಳು ಮತ್ತು ಪೋಷಕರು ದಿನಾಂಕ 21/12/2025 ರ ಭಾನುವಾರದಂದುತಪ್ಪದೆತಮ್ಮ ಹತ್ತಿರದ ಪಲ್ಸ್ ಪೋಲಿಯೋ ಬೂತ್‌ಗಳಿಗೆ ಮಕ್ಕಳನ್ನು ಕರೆದುಕೊಂಡು ಬಂದು "ಮಗುವಿನ ಉಜ್ವಲ ಬದುಕಿಗಾಗಿಎರಡು ಹನಿಪಲ್ಸ್ ಪೋಲಿಯೋ ಹಾಕಿಸಿಕೊಳ್ಳುವಂತೆ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

# ಲಿಂ॥ ಡಾ. ಶಾಮನೂರು ಶಿವಶಂಕರಪ್ಪನವರಿಗೆ ನುಡಿನಮನ ಕಾರ್ಯಕ್ರಮ



**ದಾವಣಗೆರೆ:** ನಗರದ ಶ್ರೀ ಶಿವಕುಮಾರಸ್ವಾಮಿ ಬಡಾವಣೆಯಲ್ಲಿರುವ 1ನೇ ಹಂತ, 2ನೇ ಮೇನ್, 4ನೇ ಕ್ರಾಸ್, ಡೋ.ನಂ. 830/31ರಲ್ಲಿನ ಶ್ರೀ ವೀರಾಂಜನೇಯ ಮಹಾಸ್ವಾಮಿ ಸಾರ್ವಜನಿಕ ಧ್ಯಾನಮಂದಿರದಲ್ಲಿ ಪರಮಪೂಜ್ಯ ಹನುಮಾವತಾರಿ ಶ್ರೀ ಶ್ರೀ ಶ್ರೀ ಬಸವರಾಜ ಗುರೂಜಿಯವರು ಅಧ್ಯಕ್ಷರು, ಶ್ರೀ ಕ್ಷೇತ್ರ ಬಿದ್ಧ ಹನುಮಪ್ಪನಮಟ್ಟಿ ಶ್ರೀ ವೀರಾಂಜನೇಯ ಸ್ವಾಮಿ ದೇವಸ್ಥಾನ (ರಿ.) ಟ್ರಸ್ಟ್ ಕಂಚಿಕೆರೆ ಇವರ ಸಾನಿಧ್ಯದಲ್ಲಿ ದಾವಣಗೆರೆಯ ಶ್ರೀ ವೀರಾಂಜನೇಯ ಸ್ವಾಮಿ ಸದ್ಭಕ್ತ ಮಂಡಳಿಯವರಿಂದ ಸನ್ಮಾನ್ಯ ಲಿಂ॥ ಡಾ. ಶಾಮನೂರು ಶಿವಶಂಕರಪ್ಪನವರಿಗೆ ಶ್ರದ್ಧಾಂಜಲಿ ಕಾರ್ಯಕ್ರಮವನ್ನು ದಿನಾಂಕ 20–12–2025ರ ಶನಿವಾರದಂದು ಹಮ್ಮಿಕೊಳ್ಳಲಾಗಿತ್ತು. ಪೂಜ್ಯರು ಮತ್ತು ಸಮಸ್ತ ಭಕ್ತಾದಿಗಳೊಂದಿಗೆ ಧ್ಯಾನಮಂದಿರದಲ್ಲಿನ ಶ್ರೀ ವೀರಾಂಜನೇಯ ಸ್ವಾಮಿ, ಶ್ರೀ ವೀರಭದ್ರೇಶ್ವರ ಸ್ವಾಮಿಗೆ ವಿಶೇಷ ಪೂಜೆ, ಮಹಾಮಂಗಳಾರತಿಯೊಂದಿಗೆ ಲಿಂ॥ಡಾ. ಶಾಮನೂರು ಶಿವಶಂಕರಪ್ಪನವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ಹನುಮಾವತಾರಿ ಶ್ರೀ ಶ್ರೀ ಶ್ರೀ ಬಸವರಾಜ ಗುರುಗಳು ತಮ್ಮ ಆಶೀರ್ವಚನದಲ್ಲಿ ಶಿವಶಂಕರಪ್ಪನವರ ಅಂತಿಮ ಯಾತ್ರೆಯಲ್ಲಿ ಸಕಲ ದೇವಾನುದೇವತೆಗಳು, ಸಾಧುಸಂತರು, ಮಹಾತಪಸ್ವಿಗಳು, ಗುರು ಬ್ರಹ್ಮ, ಗುರುವಿಷ್ಣು, ಗುರುಮಹೇಶ್ವರರು ಅಷ್ಟ ದಿಕ್ಪಾಲಕರು, ಪಂಚಗಣಾಧೀಶ್ವರರು, ಪುಷ್ಪವೃಷ್ಟಿಗೈದರು. ಸನ್ಮಾನ್ಯ ಲಿಂ॥ ಡಾ.ಶಾಮನೂರು ಶಿವಶಂಕರಪ್ಪನವರ ಸಮಾಧಿ ಕಲ್ಲೇಶ್ವರ ರೈಸ್‌ಮಿಲ್ ಆವರಣದಲ್ಲಿ ಪ್ರತಿ ತಿಂಗಳು 14ನೇ ತಾರೀಖು ಒಂದು ವರ್ಷದವರೆಗೆ ಅನ್ನಪ್ರಸಾದ ನಡೆಯಬೇಕು, ನಂತರ ಪ್ರತಿವರ್ಷ ಡಿಸೆಂಬರ್ 14ನೇ ತಾರೀಖು ಶಿವಪಾರ್ವತಿ ಸ್ಮಾರಕದ ಸಮ್ಮುಖದಲ್ಲಿ ವಿಶೇಷವಾಗಿ ಪೂಜೆಯನ್ನು ಸಲ್ಲಿಸಿ ಅನ್ನಸಂತರ್ಪಣೆ ನಡೆಯಬೇಕು ಎಂದು ಪೂಜ್ಯರು ತಮ್ಮ ಅಭಿಪ್ರಾಯವನ್ನು ತಿಳಿಸಿದರು.

ಈ ಸಂದರ್ಭದಲ್ಲಿ ಪಿಗ್ಮಿಸಂಗ್ರಹಕಾರರು, ಸಂಗಪ್ಪ ತೋಟದ್ ಇವರು ಮಾತನಾಡುತ್ತಾ ಕಾರಣಿಕ ಪುರುಷ ಶ್ರೀ ಲಿಂ॥ ಹಾನಗಲ್ ಕುಮಾರ ಸ್ವಾಮಿಗಳವರಿಂದ ಕನಸಿನ ಕೂಸು ಅಖಿಲಭಾರತ ವೀರಶೈವ ಮಹಾಸಭಾ ಪ್ರಾರಂಭವಾಯಿತು. ನಂತರ ಭೀಮಣ್ಣ ಖಂಡ್ರೆಯವರು ಅಧ್ಯಕ್ಷರಾದರು. ನಂತರ ಪರಮಪೂಜ್ಯ ಸಿರಿಗೆರೆ ಗುರುಗಳು, ಸಿದ್ಧಗಂಗಾ ಶಿವಕುಮಾರ ಮಹಾಸ್ವಾಮಿಗಳು, ಸುತ್ತೂರು ಶಿವರಾತ್ರಿ ದೇಶೀಕೇಂದ್ರ ಮಹಾಸ್ವಾಮಿಗಳವರ ಅಪ್ಪಣೆಯಂತೆ ಲಿಂ. ಡಾ. ಶಾಮನೂರು ಶಿವಶಂಕರಪ್ಪನವರು ಅಖಿಲ ಭಾರತ ವೀರಶೈವ ಮಹಾಸಭಾದ ಅಧ್ಯಕ್ಷತೆಯನ್ನು ವಹಿಸಿಕೊಂಡರು. ಯಾವ ಮಠ–ಪೀಠಗಳಿಂದ ಆಗದಂತಹ ಕೆಲಸವನ್ನು ಲಿಂ. ಡಾ. ಶಾಮನೂರು ಶಿವಶಂಕರಪ್ಪನವರು ಮಾಡಿದ್ದಾರೆ. ಅಖಿಲ ಭಾರತ ವೀರಶೈವ ಮಹಾಸಭಾವು ಬೃಹತ್ ಮಟ್ಟದಲ್ಲಿ ಬೆಳೆದು ನಿಂತಿದೆ. ಅವರ ತರುವಾಯ ಧೀಮಂತ ವ್ಯಕ್ತಿಗಳೇ ಅಧ್ಯಕ್ಷರಾಗಬೇಕಿದೆ. ಡಾ.ಶಾಮನೂರು ಅವರ ಆತ್ಮಕ್ಕೆ ಶಾಂತಿ ಸಿಗಲಿ. ಅವರ ಕುಟುಂಬವರ್ಗಕ್ಕೆ ದುಃಖ ಭರಿಸುವ ಶಕ್ತಿಯನ್ನು ಶ್ರೀ ಕ್ಷೇತ್ರ ಬಿದ್ದ ಹನುಮಪ್ಪನ ಮಟ್ಟಿ ಶ್ರೀ ವೀರಾಂಜನೇಯ ಸ್ವಾಮಿ ದಯಪಾಲಿಸಲಿ ಎಂದು ಪ್ರಾರ್ಥಿಸೋಣ.

# ಟ್ರ್ಯಾಪ್ ಪ್ರಕರಣ ಆರೋಪಿತರಿಗೆ ಶಿಕ್ಷೆ




**ಹಾಸನ** : ಹಾಸನ ಲೋಕಾಯುಕ್ತ ಪೊಲೀಸ್‌ಠಾಣೆ ಮೊ.ನಂ 07/2011, ಕಲಂ7, 13(1)(ಡಿ) ಸಹವಾಚನ 13(2) ಕರ್ನಾಟಕ ಭ್ರಷ್ಟಚಾರ ನಿಗ್ರಹಕಾಯಿದೆ 1988 ರರಡಿ ದಿನಾಂಕ 01–04–2011 ರಂದುಆಪಾದಿತರಾದ ಪಾಪೇಗೌಡ, ಉಪ ಜಿಲ್ಲಾಆರೋಗ್ಯ ಶಿಕ್ಷಣಾಧಿಕಾರಿ. ಆರೋಗ್ಯ ಮತ್ತುಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ, ಹಾಸನ ರವರ ವಿರುದ್ದಟ್ರ್ಯಾಪ್ ಪ್ರಕರಣ ವರದಿಯಾಗಿದ್ದು ಈ ಪ್ರಕರಣದಲ್ಲಿ ತನಿಖಾಧಿಕಾರಿಗಳು ತನಿಖೆ ಪೂರೈಸಿ ಆಪಾದಿತರ ವಿರುದ್ದ ಹಾಸನದ ಘನ ಪ್ರಧಾನಜಿಲ್ಲಾ ಸತ್ರ ಮತ್ತು ವಿಶೇಷ ನ್ಯಾಯಾಲಯಕ್ಕೆದೋಷಾರೋಪಣ ಪತ್ರ ಸಲ್ಲಿಸಿದ್ದು ಮಾನ್ಯ ನ್ಯಾಯಾಲಯವು ಸ್ಪೆಷಲ್ ಸಿ.ಸಿ. ನಂ 73/2013 ರಡಿ ವಿಚಾರಣೆಕೈಗೊಂಡು ಪ್ರಕರಣದ

ಆರೋಪಿತರಾದ ಪಾಪೇಗೌಡ ಉಪ ಜಿಲ್ಲಾಆರೋಗ್ಯ ಶಿಕ್ಷಣಾಧಿಕಾರಿ, ಆರೋಗ್ಯ ಮತ್ತುಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ, ಹಾಸನ ರವರಿಗೆ ದಿನಾಂಕ 18–12–2025 ರಂದು ಶಿಕ್ಷೆಯನ್ನು ವಿಧಿಸಿದ್ದು, ಕಲಂ 7 ಪಿಸಿ ಆಕ್ಟ್‌ಗೆ 6 ತಿಂಗಳ ಸದಾ ಶಿಕ್ಷೆ ಮತ್ತು 25,000 ರೂದಂಡ ಹಾಗೂ 13(1) (ಡಿ) ರೆ.ವಿ. 13(2) ಆಫ್ ಪಿಸಿ ಆಕ್ಟ್ ಗೆ ಒಂದು ವರ್ಷ ಸಾದಾ ಶಿಕ್ಷೆ ಹಾಗೂ 25,000ರೂದಂಡ ವಿಧಿಸಿದ್ದು, ದಂಡಕಟ್ಟಲು ವಿಫಲವಾದಲ್ಲಿ 5 ತಿಂಗಳು ಸಾದಾ ಶಿಕ್ಷೆಯನ್ನು ವಿಧಿಸಿ ತೀರ್ಪನ್ನು ಹೊರಡಿಸಿರುತ್ತೆ. ಈ ಪ್ರಕರಣದಲ್ಲಿ ತನಿಖಾಧಿಕಾರಿಗಳಾಗಿ ರುದ್ರಮುನಿ ಪೊಲೀಸ್ ನಿರೀಕ್ಷಕರು, ಕ.ಲೋ ಹಾಸನ ರವರುತನಿಖೆ ಪೂರೈಸಿ ನ್ಯಾಯಾಲಯಕ್ಕೆದೋಷಾರೋಪಣ ಪತ್ರ ಸಲ್ಲಿಸಿದ್ದು, ಹಾಗೂ ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಪರವಾಗಿ ವಿಶೇಷಅಭಿಯೋಜಕರಾದ ಪರಶುರಾಮ್‌ರವರು ಮಾನ್ಯನ್ಯಾಯಾಲಯದಲ್ಲಿ ವಾದ ಮಂಡಿಸಿರುತ್ತಾರೆಎಂದುಕರ್ನಾಟಕ ಲೋಕಾಯುಕ್ತ ಹಾಸನ ಪೊಲೀಸ್‌ಅಧೀಕ್ಷಕರು ತಿಳಿಸಿದ್ದಾರೆ.

# ಆನ್‌ಲೈನ್‌ನಲ್ಲಿ ಇ–ಖಾತೆ ಪಡೆಯಲು ಅವಕಾಶ

**ಹಾಸನ :** ಆಸ್ತಿ ಮಾಲೀಕರಿಗೆ ಇ–ಖಾತೆ ಪಡೆಯುವುದನ್ನು ಸರ್ಕಾರ ಸರಳೀಕರಿಸಿದ್ದು, ಇನ್ನು ಮುಂದೆ ಮನೆಯಲ್ಲಿಯೇ ಕುಳಿತು ಆನ್‌ಲೈನ್ ಮುಖಾಂತರ ಈ ಕೆಳಕಂಡ ಅಗತ್ಯ ದಾಖಲಾತಿಗಳಾದ ಮಾಲೀಕರ ಭಾವಚಿತ್ರ, ಆಸ್ತಿಯ ಕಟ್ಟಡ/ನಿವೇಶನದ ಜಿ.ಪಿ.ಎಸ್. ಛಾಯಾಚಿತ್ರ, ಪ್ರಸ್ತುತ ಸಾಲಿನವರೆಗೆ ಪಾವತಿಸಿರುವ ಆಸ್ತಿ, ನೀರಿನ, ಯು.ಜಿ.ಡಿ, ಘನತ್ಯಾಜ್ಯ ಹಾಗೂ ಇತರೆ ಚಲನ್ ಪ್ರತಿಗಳು, ವಿದ್ಯುತ್ ಆರ್.ಆರ್.ಸಂಖ್ಯೆ, ಸ್ವತ್ತಿನ ನೋಂದಾಯಿತ ದಾಖಲಾತಿಗಳು ಇ.ಸಿ, ನಮೂನೆ–15 ಮತ್ತು 16, ಮಾಲೀಕರ 'ಆಧಾರ್‌ಕಾರ್ಡ್, ಪಾನ್‌ಕಾಡ್, ಚುನಾವಣಾಗುರುತಿನಚೀಟಿ, ಪಡಿತರಚೀಟಿ, ಮಾಲೀಕರ ದೂರವಾಣಿ ಸಂಖ್ಯೆ, ಆಸ್ತಿಯ ಭೂ ಪರಿವರ್ತನಾ ಆದೇಶ, ಅನುಮೋದಿತ ಲೇಔಟ್ ನಕ್ಷೆ ಪ್ರತಿ, ಕಟ್ಟಡ ಪರವಾನಗಿ ಪ್ರತಿ ಹಾಗೂ ಸ್ವತ್ತಿಗೆ ಸಂಬಂಧಿಸಿದ ಇತರ ಪೂರಕ ದಾಖಲಾತಿಗಳನ್ನು ಆನ್‌ಲೈನ್‌ನಲ್ಲಿ ಹಾಜರುಪಡಿಸಿ ಸದರಿ ದಾಖಲಾತಿಗಳನ್ನು ಪರಿಶೀಲಿಸಿದ ನಂತರಆನ್‌ಲೈನ್‌ನಲ್ಲಿ ಇ–ಖಾತೆ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿwww.eaasthi.karnataka.gov.in ಸಹಾಯವಾಣಿ ಸಂಖ್ಯೆ:7259585959 ರ ಮೂಲಕ ಸಂಪರ್ಕಿಸಬಹುದಾಗಿದೆ. ಸದರಿಅವಕಾಶವನ್ನು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕಾಗಿ ಮಹಾನಗರಪಾಲಿಕೆಯಆಯುಕ್ತರು ತಿಳಿಸಿದ್ದಾರೆ.

# ಯುವನಿಧಿ ಸ್ವಯಂ ಘೋಷಣೆ ಡಿ.31 ರವರೆಗೆ ವಿಸ್ತರಣೆ

**ಚಿತ್ರದುರ್ಗ:** ಯುವನಿಧಿ ಸ್ವಯಂ ಘೋಷಣೆ ಮಾಡುವ ಪ್ರಕ್ರಿಯೆ ಡಿಸೆಂಬರ್–2025ರ ತಿಂಗಳಾಂತ್ಯಕ್ಕೆ ವಿಸ್ತರಣೆ ಮಾಡಲಾಗಿದೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ ತಿಳಿಸಿದ್ದಾರೆ.

ಗ್ಯಾರಂಟಿ ಯೋಜನೆಯಾದ ಯುವನಿಧಿ ಯೋಜನೆಯ ಫಲಾನುಭವಿಗಳಿಗೆ ಡಿ.ಬಿ.ಟಿ.ಮೂಲಕ ಹಣ ಸಂದಾಯ ಮಾಡಲಾಗುತ್ತಿದ್ದು, ಫಲಾನುಭವಿಗಳಿಗೆ ನಂತರದ ತಿಂಗಳುಗಳ ಯುವನಿಧಿ ಹಣ ಸಂದಾಯವಾಗಲು ಕಡ್ಡಾಯವಾಗಿ ಪ್ರತಿ ತಿಂಗಳ 25ನೇ ತಾರೀಖಿನೊಳಗೆ ಸ್ವಯಂ ದೃಢೀಕರಣ ಮಾಡಿಕೊಳ್ಳಬೇಕಾಗಿತ್ತು. ಆದರೆ ಡಿಸೆಂಬರ್ –2025ರ ಮಾಹೆಯಲ್ಲಿ ಸ್ವಯಂ ಘೋಷಣೆ ಮಾಡುವ ಮುನ್ನ ಹಲವು ಹೆಚ್ಚುವರಿ ಮಾಹಿತಿಯನ್ನು ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್ ಲೈನ್ ನಲ್ಲಿ ಸಲ್ಲಿಸಬೇಕಾಗಿದ್ದು, ಈ ಸಂಬಂಧ ಸ್ವಯಂ ಘೋಷಣೆ ಮಾಡುವ ಅವಧಿಯನ್ನು ಡಿಸೆಂಬರ್ 31 ರವರೆಗೆ ವಿಸ್ತರಿಸಲಾಗಿದೆ. ಯುವನಿಧಿ ಫಲಾನುಭವಿಗಳು ಈ ಯೋಜನೆಯ ಸದ್ಬಳಕೆ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಕಚೇರಿ, ಚಿತ್ರದುರ್ಗ–9448460786, 9945587060, 8105619020 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ ತಿಳಿಸಿದ್ದಾರೆ.

# ಕಾಫಿಗೆ ಹೊಸ ಮಾರುಕಟ್ಟೆ ವ್ಯವಸ್ಥೆ ಹುಡುಕ ಬೇಕಿದೆ: ಸಚಿವ ಪ್ರಲ್ಹಾದ ಜೋಷಿ



**ಚಿಕ್ಕಮಗಳೂರು:** ಭಾರತದ ಕಾಫಿಗೆ ಜಾಗತಿಕ ಹಾಗೂ ದೇಶೀಯ ಮಟ್ಟದಲ್ಲಿ ಹೊಸ ಮಾರುಕಟ್ಟೆಯನ್ನು ಹುಡುಕಬೇಕಿದೆ. ಸಂಶೋಧನೆಗಳು ಕೇವಲ ಬೆಳೆ, ತಳಿಗಳಿಗೆ ಸೀಮಿತವಾಗದೆ ಉತ್ತಮ ಮಾರುಕಟ್ಟೆ ಅನ್ವೇಷಣೆ ನಿಟ್ಟಿನಲ್ಲೂ ನಡೆಯಬೇಕಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳು, ಅಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ನೂತನ ಹಾಗೂ ನವೀಕರಿಸಬಹುದಾದ ಇಂಧನ ಖಾತೆ ಸಚಿವ ಪ್ರಲ್ಹಾದ ಜೋಷಿ ಹೇಳಿದರು.

ಕಾಫಿ ಮಂಡಳಿ ಮತ್ತು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದ ವತಿಯಿಂದ ಇಂದು ನಡೆದ ಬಾಳೆಹೊನ್ನೂರಿನ ಕೇಂದ್ರೀಯ ಕಾಫಿ ಸಂಶೋಧನಾ ಸಂಸ್ಥೆ(ಸಿ.ಸಿ.ಆರ್.ಐ.) ಯ ಶತಮಾನೋತ್ಸವ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಜಗತ್ತಿನಾದ್ಯಂತ ಭಾರತದ ಕಾಫಿಗೆ ಬೇಡಿಕೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಉತ್ತಮ ಗುಣಮಟ್ಟದ ಪ್ಯಾಕೇಜ್ ಜೊತೆಗೆ ಜಾಗತಿಕ ಮಾರುಕಟ್ಟೆಯನ್ನು ಅಧ್ಯಯನ ಮಾಡಿ ನಮ್ಮ ಕಾಫಿ ಹೆಚ್ಚು ದೇಶಗಳಿಗೆ ತಲುಪುವುದು ಹೇಗೆ ಎನ್ನುವ ಬಗ್ಗೆ ಚಿಂತನೆ ಮಾಡಬೇಕಿದೆ ಎಂದರು.

ಕಳೆದ ಹಲವಾರು ವರ್ಷಗಳಲ್ಲಿ ಅನೇಕ ರೀತಿಯ ಬೆಳವಣಿಗೆ ಕಾಫಿ ಕ್ಷೇತ್ರದಲ್ಲಿ ನಡೆದಿದ್ದರೂ ಭಾರತ ಜಾಗತಿಕ ಮಟ್ಟದಲ್ಲಿ ಶಕ್ತಿಶಾಲಿಯಾಗಿ ಬೆಳೆಯುತ್ತಿಲ್ಲ. ಇತ್ತೀಚಿನ ದಿನಗಳಲ್ಲಿ ಕಾಫಿ ಮೇಲಿನ ಜಿಎಸ್‌ಟಿಯನ್ನು ಸಹ ಶೇ.18 ರಿಂದ ಶೇ.5 ಕ್ಕೆ ಕೇಂದ್ರ ಸರ್ಕಾರ ಇಳಿಸಿದೆ. ಜಿಎಸ್‌ಟಿ ಬರುವ ಮುಂಚೆ ಒಟ್ಟಾರೆ ಶೇ.35 ರಷ್ಟು ತೆರಿಗೆ ಬೀಳುತ್ತಿತ್ತು. ಈಗ ಯಾವುದೇ ಆಹಾರ ಉತ್ಪನ್ನಗಳಿಗೆ ಕೇವಲ ಶೇ.5 ಜಿಎಸ್‌ಟಿ ವಿಧಿಸಲಾಗುತ್ತಿದೆ ಎಂದರು.

ಇದರ ಜೊತೆಗೆ ಯುಕೆ ಸೇರಿದಂತೆ ಹಲವು ದೇಶಗಳ ಜೊತೆಗೆ ಮುಕ್ತ ವಾಣಿಜ್ಯ ಒಪ್ಪಂದ ಆಗಿದೆ. ಭಾರತ ಜಾಗತಿಕ ಮಟ್ಟದಲ್ಲಿ ಶಕ್ತಿಯಾಗಿ ಬೆಳೆಯುತ್ತಿದೆ. ಜಗತ್ತಿನ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಆರ್ಥಿಕ ವ್ಯವಸ್ಥೆ ನಮ್ಮದಾಗಿದೆ. ಜಗತ್ತಿನ ನಾಲ್ಕನೇ ಅತೀ ದೊಡ್ಡ ಆರ್ಥಿಕ ಶಕ್ತಿಯಾಗಿಯೂ ಭಾರತ ಹೊರಹೊಮ್ಮಿದೆ. ಕಳೆದ 10 ವರ್ಷದಲ್ಲಿ ನಮ್ಮ ದೇಶದ ಒಟ್ಟು ವಾಣಿಜ್ಯ ವಹಿವಾಟು ದುಪ್ಪಟ್ಟಾಗಿದೆ. ಇದೇ ವೇಳೆ ಮೂಲ ಸೌಕರ್ಯಗಳಿಗಾಗಿ ಅತೀ ಹೆಚ್ಚು ಅನುದಾನ ನೀಡುತ್ತಿರುವ ದೇಶ ಯಾವುದಾದರೂ ಇದ್ದರೆ ಅದು ಭಾರತ ಎಂದರು.

ಸೌರ ವಿದ್ಯುತ್‌ಗೆ ಹೆಚ್ಚು ಪ್ರೋತ್ಸಾಹ ನೀಡಿದ ಪರಿಣಾಮ 12 ರಿಂದ 13 ರೂ. ಇದ್ದ ವಿದ್ಯುತ್ ಬೆಲೆ ಇಂದು 2 ರಿಂದ 2.20 ರೂ.ಗೆ ಲಭ್ಯವಾಗುತ್ತಿದೆ. ಒನ್ ಗ್ರಿಡ್ ಒನ್ ನೇಷನ್ ಮಾಡಿದ ಪರಿಣಾಮ ರಾಜ್ಯಗಳ ನಡುವೆ ವಿದ್ಯುತ್ ಹಂಚಿಕೆ ಒಪ್ಪಂದ ನಡೆಯಲು ಸಾಧ್ಯವಾಗುತ್ತಿದೆ ಎಂದರು.

ಅನೇಕ ದೇಶಗಳ ಜೊತೆಗೆ ಮುಕ್ತ ವಾಣಿಜ್ಯ ಒಪ್ಪಂದವನ್ನು ಮಾಡಿಕೊಳ್ಳಲಾಗುತ್ತಿದೆ. ಹಲವು ದೇಶಗಳು ಚಹಾದಿಂದ ಕಾಫಿ ಕಡೆಗೆ ಒಲವು ತೋರಲಾರಂಭಿಸಿವೆ. ಈ ಕಾರಣಕ್ಕೆ ನಾವು ಉತ್ತಮ ಗುಣಮಟ್ಟದ ಕಾಫಿ, ಜೊತೆಗೆ ಉತ್ತಮ ಪ್ಯಾಕಿಂಗ್, ಪೆಸ್ಟಿಸೈಡ್ ಕಡಿಮೆ ಮಾಡಿ ಜಾಗತಿಕ ಮಟ್ಟದಲ್ಲಿ ನಮ್ಮ ಉತ್ಪನ್ನದ ಸ್ವೀಕಾರತೆಯನ್ನು ವಿಸ್ತರಿಸಬೇಕಿದೆ ಎಂದರು.

ನಮ್ಮ ಕೌಶಲ್ಯ, ಪ್ಯಾಕಿಂಗ್ ಮತ್ತು ಗುಣಮಟ್ಟ ಸುಧಾರಿಸಿಕೊಳ್ಳಬೇಕು. 14 ಕಾರ್ಯತಂತ್ರದ ವಲಯಗಳಲ್ಲಿ ಭಾರತ ಸರ್ಕಾರ ಸುಮಾರು 2 ಲಕ್ಷ ಕೋಟಿ ರೂ.ಗಳ ಹೂಡಿಕೆ ಮಾಡಿದೆ. ಆರಂಭದಲ್ಲಿ ಸುಮಾರು 24 ಸಾವಿರ ಕೋಟಿ ರೂ.ಗಳ ಸಹಾಯಧನವನ್ನು ಬಿಡುಗಡೆ ಮಾಡಲಾಗಿದೆ. ಇದರಿಂದ ಉತ್ಪಾದನೆ ಹೆಚ್ಚಾಗಿ ಉದ್ಯೋಗ ಸೃಷ್ಟಿ ಆಗುತ್ತಿದೆ. ಜಾಗತಿಕ ಮಟ್ಟದಲ್ಲಿ ಗುಣಮಟ್ಟವನ್ನೂ ಉಳಿಸಿಕೊಂಡಲ್ಲಿ ಬೇಡಿಕೆಯೂ ಹೆಚ್ಚಾಗಲಿದೆ ಎಂದು ಹೇಳಿದರು.

ತೀರಾ ಇತ್ತೀಚಿನ ದಿನಗಳವರೆಗೆ ನಾವು ಮೊಬೈಲ್‌ಗಳನ್ನು ಬೇರೆ ದೇಶಗಳಿಂದ ತರಿಸಿಕೊಳ್ಳಬೇಕಿತ್ತು. ಆದರೆ ಜಾಗತಿಕ ಮಾರುಕಟ್ಟೆಯಲ್ಲಿ ಶೇ.30 ರಷ್ಟು ಭಾರತದ ಮೊಬೈಲ್‌ಗಳು ಲಭ್ಯವಿದೆ. ಆರಂಭದಲ್ಲಿ ಕೇವಲ ಎರಡು ಕಂಪನಿಗಳು ಮಾತ್ರ ಮೊಬೈಲ್ ತಯಾರಿಸುತ್ತಿದ್ದರೆ ಇಂದು 300 ಕ್ಕೂ ಹೆಚ್ಚು ಉತ್ಪಾದನಾ ಘಟಕಗಳು ಕಾರ್ಯನಿರ್ವಹಿಸುತ್ತಿವೆ. ಹತ್ತು ವರ್ಷಕ್ಕೆ ಮೊದಲು ಇಡೀ ದೇಶದಲ್ಲಿ 90 ಸಾವಿರ ಕಿ.ಮೀ. ರಾಷ್ಟ್ರೀಯ ಹೆದ್ದಾರಿ ಇತ್ತು. ಇಂದು 1.55 ಲಕ್ಷ ಕಿ.ಮೀ. ಇದೆ. ಕರ್ನಾಟಕದಲ್ಲೇ 3000 ಕಿ.ಮೀ. ರಾಷ್ಟ್ರೀಯ ಹೆದ್ದಾರಿಯನ್ನು ನಮ್ಮ ಸರ್ಕಾರ ಬಂದ ಮೇಲೆ ನಿರ್ಮಿಸಲಾಗಿದೆ ಎಂದರು.

ವಿಧಾನ ಪರಿಷತ್ ಉಪಸಭಾಪತಿ ಎಂ.ಕೆ.ಪ್ರಾಣೇಶ್ ಮಾತನಾಡಿ, ಮುಂದಿನ ಹತ್ತು ವರ್ಷದಲ್ಲಿ ಕಾಫಿ ಕ್ಷೇತ್ರದಲ್ಲಿ ಹಮ್ಮಿಕೊಂಡಿರುವ ಗುರಿ ತಲುಪಲು ನಿರಂತರ ಶ್ರಮ ಹಾಕಬೇಕಿದೆ ಎಂದು ತಿಳಿಸಿದರು. ಹವಾಮಾನ ವೈಪರೀತ್ಯಗಳು, ಕಾರ್ಮಿಕರ ಸಮಸ್ಯೆ, ವನ್ಯ ಪ್ರಾಣಿಗಳೊಂದಿಗಿನ ಸಂಘರ್ಷ ಎಲ್ಲದರ ಮಧ್ಯೆ ಬದುಕುತ್ತಿದ್ದೇವೆ. ನಮ್ಮ ಗುರಿ ತಲುಪಬೇಕೆಂದರೆ ಮೊದಲು ಈ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕಿದೆ. ಈ ಬಗ್ಗೆ ಕೇಂದ್ರ ಸರ್ಕಾರ ಮತ್ತು ಕಾಫಿ ಮಂಡಳಿ ಗಮನಹರಿಸಿ ಸಮಸ್ಯೆ ಪರಿಹಾರಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು. ಅಧ್ಯಯನಗಳನ್ನು ಇನ್ನಷ್ಟು ಹೆಚ್ಚಿಸಬೇಕು. ವಿಜ್ಞಾನಿಗಳಿಗೆ ಅಗತ್ಯ ಉತ್ತೇಜನ ನೀಡಬೇಕು ಎಂದರು.

ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಟಿ.ಡಿ.ರಾಜೇಗೌಡ, ಸಂಸದರಾದ ಕೋಟ ಶ್ರೀನಿವಾಸ ಪೂಜಾರಿ (ಉಡುಪಿ–ಚಿಕ್ಕಮಗಳೂರು ಕ್ಷೇತ್ರ), ಶಾಸಕ ಹೆಚ್.ಡಿ.ತಮ್ಮಯ್ಯ, ವಿಧಾನ ಪರಿಷತ್ ಸದಸ್ಯರಾದ ಸಿ.ಟಿ.ರವಿ, ಮಾಜಿ ಸಚಿವರಾದ ಡಿ.ಎನ್.ಜೀವರಾಜ್, ಕೇಂದ್ರ ವಾಣಿಜ್ಯ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿ (ಪ್ಲಾಂಟೇಶನ್) ನಿತಿನ್‌ಕುಮಾರ್ ಯಾದವ್, ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್, ಜಿಪಂ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನಾ ಮತ್ತಿತರರು ಕಾರ್ಯಕ್ರಮದಲ್ಲಿಸದ್ದರು.

### ಅತಿರುದ್ರ ಪಾರಾಯಣ ಜಪಯಜ್ಞದ ಸತ್ಸಂಗ

# ಲೋಕಹಿತಕ್ಕೆ ಕಾರ್ಯ ಸಮರ್ಪಿತ: ಹಿರೇಮಗಳೂರುಕಣ್ಣನ್

**ಚಿಕ್ಕಮಗಳೂರು:** ಲೋಕಹಿತಕ್ಕೆ ನಮ್ಮೆಲ್ಲ ಕಾರ್ಯ ಸಮರ್ಪಿತವಾಗಬೇಕು. ಸ್ವಂತಕ್ಕಿಲ್ಲ ಸಮಾಜಕ್ಕೆಲ್ಲ ಎಂಬುದು ಆದರ್ಶವಾಗಬೇಕು ಎಂದು ಸಾಹಿತಿ-ಚಿಂತಕ ಕನ್ನಡ ಸಾಹಿತ್ಯಪೂಜಾರಿ ಹಿರೇಮಗಳೂರುಕಣ್ಣನ್ ನುಡಿದರು.

ಜ್ಯೋತಿನಗರದ ಶ್ರೀರುದ್ರಪಾರಾಯಣ ಬಳಗ ಹಿರೇಮಗಳೂರಿನ ಪಂಚವಟಿ ಕುಟೀರದಲ್ಲಿ ಡಿಸೆಂಬರ್ 18ರಿಂದ 28ರವರೆಗೆ ಶ್ರೀಕಾಂತಾನಂದ ಸರಸ್ವತಿ ಮಹಾರಾಜರ ದಿವ್ಯಸಾನಿಧ್ಯದಲ್ಲಿ ಆಯೋಜಿಸಿರುವ 'ಕೋಟಿರುದ್ರ ಯಜ್ಞಾಂಗ ಅತಿರುದ್ರ ಪಾರಾಯಣ ಜಪಯಜ್ಞ'ದ ಸತ್ಸಂಗದಲ್ಲಿಂದು ಅವರು ಪ್ರವಚನ ನೀಡಿದರು.

ಸಂಪಾದನೆಗಿಂತ ಸಂಸ್ಕಾರ ಮುಖ್ಯ. ಸಂಸ್ಕಾರ-ಸಂಸ್ಕೃತಿಯನ್ನು ಮತ್ತೊಬ್ಬರಿಗೆ ಪರಿಚಯಿಸುವ ಹೊಣೆಗಾರಿಕೆ ನಮ್ಮದು. ದೇವರ ದೃಷ್ಟಿಯಲ್ಲಿ ಮಾನವೀಯ ಮನುಷ್ಯರಾದರೆ ಸಾಲದು, ಮನುಷ್ಯರ ದೃಷ್ಟಿಯಲ್ಲೂ ಮಾನವೀಯ ಮನುಷ್ಯರಾಗುವುದು ಬಹಳ ಮುಖ್ಯ. ಜಾತಿಗಿಂತ ನೀತಿ ಮುಖ್ಯ ಎಂದರು.

ಲೋಕ ಹಿತಮ್ ಮಮಕರಣೀಯಂ ಎಂಬ ದಿವ್ಯವಾಕ್ಯ ನಮಗೆ ಆದರ್ಶ. ಲೋಕದ ಕ್ಷೇಮಕ್ಕೆ ಮುಖಾಮುಖಿಯಾದ ಬದುಕು ನಮ್ಮದಾಗಬೇಕು. ಏಕಾಂತದಿಂದ ಲೋಕಾಂತಕ್ಕೆ



ಹೋಗಲು ಭಜನೆ-ಸಂಕೀರ್ತನೆ-ಸತ್ಸಂಗಗಳು ಸಹಕಾರಿ. ಜಾತಿಯ ಸಂಕುಚಿತ ಕಟ್ಟುಪಾಡು ಇವಕ್ಕಿಲ್ಲ. ಜ್ಞಾನ ವಿವೇಚನೆಗೆ ಒಳಪಡಿಸುವ ಅಗತ್ಯವಿಲ್ಲ. ಮುಖಾಮುಖಿಯಾಗಿ ಹಸನ್ಮುಖಿಯಾಗಿರುತ್ತೇವೆ. ನಾವು ಜಗತ್ತಿನೊಳಗಿದ್ದೇವೆಂಬ ಸತ್ಯ ಅರಿಯಬೇಕೆಂದರು.ಬ್ರಹ್ಮಜ್ಞಾನಿಯೆ ನಿಜವಾದ ವಿಶ್ವಮಾನವ. ಜ್ಞಾನ ಎಂಬುದು ಅಜ್ಞಾನಕ್ಕೆ ಹೋಗದೆ ಸುಜ್ಞಾನದತ್ತ ಸಾಗಬೇಕು. ಭೂಮಿಗೆ ಬಿದ್ದ ಬೀಜ ಎದೆಗೆ ಬಿದ್ದ ಅಕ್ಷರ ವ್ಯರ್ಥವಾಗದೆ ಮೊಳಕೆಯೊಡೆದರೆ ಸಾರ್ಥಕತೆಯಾಗುತ್ತದೆ ಎಂದ ಕಣ್ಣನ್, ವಿಜ್ಞಾನದ ಬುದ್ಧಿ, ತತ್ತ್ವಜ್ಞಾನಿಯ ಮನಸ್ಸು, ಕವಿ ಹೃದಯ ಮುಖ್ಯ ಎಂದರು. ವಿಚಾರವನ್ನು ಬಿತ್ತಿ ಕೃತಿಯನ್ನು ಬೆಳೆಸಬೇಕು. ಕೃತಿಯನ್ನು ಬಿತ್ತಿ ಸ್ವಭಾವ ಬೆಳೆಸಬೇಕು. ಸ್ವಭಾವ ಬಿತ್ತಿ ಭವಿಷ್ಯ ಬೆಳೆಸಬೇಕು. ಓದಿದ್ದನ್ನು ನಡೆಯಲ್ಲಿ ಅಳವಡಿಸಿಕೊಳ್ಳಬೇಕು. ಅಖಿಲ ಭಾರತೀಯ ಸಾಹಿತ್ಯ ಪರಿಷದ್ ಶೃಂಗೇರಿ ವಿಭಾಗೀಯ ಸಂಯೋಜಕ ಪ್ರಭುಲಿಂಗಶಾಸ್ತ್ರಿ ವೇದಿಕೆಯಲ್ಲಿದ್ದರು. ಅರ್ಚಕ ವೈಷ್ಣವಸಿಂಹ, ಸಾಹಿತಿ ಬೆಳವಾಡಿ ಮಂಜುನಾಥ್ ಮತ್ತಿತರರು ಪಾಲ್ಗೊಂಡಿದ್ದರು. ಶ್ರೀರುದ್ರ ಪಾರಾಯಣ ಬಳಗದ ಮುಖಸ್ಥ ಎಚ್.ಗೋಪಿನಾಥ್ ಸ್ವಾಗತಿಸಿ-ವಂದಿಸಿದರು. ವಿವಿಧ ಜಿಲ್ಲೆಗಳು ಹಾಗೂ ರಾಜ್ಯಗಳಿಂದ 70ಕ್ಕೂ ಹೆಚ್ಚು ಗುರುಭಕ್ತರು 11ದಿನಗಳ ಅತಿರುದ್ರ ಪಾರಾಯಣದಲ್ಲಿ ತೊಡಗಿದ್ದಾರೆ.

# ಮಕ್ಕಳು ಸಾಮಾಜಿಕಜಾಲ ತಾಣಗಳಿಂದ ದೂರವಿದ್ದುಗುರಿ ಸಾಧಿಸಿ

**ಹಾಸನ:** ಮಕ್ಕಳು ಸಮಯ ವ್ಯರ್ಥ ಮಾಡದೆ ಓದಿನಲ್ಲಿ ತೊಡಗಿಸಿಕೊಳ್ಳಿ ಸಾಮಾಜಿಕಜಾಲ ತಾಣಗಳಿಂದ ದೂರವಿದ್ದು, ನಿಮ್ಮಗುರಿ ಸಾಧಿಸಿ ಎಂದುಜಿಲ್ಲಾಧಿಕಾರಿ ಲತಾಕುಮಾರಿಅವರು ತಿಳಿಸಿದ್ದಾರೆ.

ಕೇಂದ್ರ ವಿದ್ಯಾಲಯದ ವಾರ್ಷಿಕೋತ್ಸವದಲ್ಲಿ ಭಾಗವಹಿಸಿ ಮಾತನಾಡಿದಅವರು ಮಕ್ಕಳು ದೇಶದ ಮುಂದಿನ ರಾಯಭಾರಿಗಳು, ನಿಮ್ಮಜೀವನಕ್ಕೆ ನೀವೇ ನಾಯಕರಾಗಿದ್ದೀರಿ ಈ ನಿಟ್ಟಿನಲ್ಲಿ ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳಲು ತಿಳಿಸಿದರು.

ಪ್ರತಿಯೊಂದು ಮಕ್ಕಳಿಗೆ ಬಾಲ್ಯವುಉತ್ತಮವಾದ ನೆನಪು ಪ್ರತಿಯೊಂದು ಕ್ಷಣಗಳು ಮಕ್ಕಳಿಗೆ ವಿಶೇಷವಾದವುಗ ಳಾಗಿವೆ ಹಾಗಾಗಿ ಬಾಲ್ಯವನ್ನು ಆನಂದಿಸಿ ಎಂದು ತಿಳಿಸಿದರು.

ಬಾಲ್ಯದಲ್ಲಿ ಬಹಳಷ್ಟು ವಿಷಯಗಳನ್ನು ಕಲಿಯುವುದಕ್ಕೆ ನೋಡಿ, ವೀಕ್ಷಣೆ ಮಾಡಿ ಗ್ರಹಿಸಿ, ಕೇಳಿ ಹೀಗೆ ವಿವಿಧರೀತಿಯಲ್ಲಿಕಲಿಯುವ ವಿಧಾನಗಳಿವೆ ಅವುಗಳನ್ನು ನಾನು ಕೂಡ ಅಳವಡಿಸಿಕೊಂಡಿದ್ದೆ ಎಂದುಅವರ ಬಾಲ್ಯದ ನೆನಪುಗಳನ್ನು ಮೆಲುಕು ಹಾಕಿದರು.

ಮಕ್ಕಳು ಕುಟುಂಬ, ಸ್ನೇಹಿತರು ಹಾಗೂ ಶಿಕ್ಷಕರೊಂದಿಗೆ ಉತ್ತಮ ಬಾಂಧವ್ಯವನ್ನು ರೂಡಿಸಿಕೊಳ್ಳಬೇಕು ಮತ್ತುಅಂಬೇಡ್ಕರ್,



ಸುಭಾಷ್‌ಚಂದ್ರ ಬೋಸ್, ಭಗತ್ ಸಿಂಗ್ ರಂತಹ ಮಹಾನುಭಾವರ ಪುಸ್ತಕಗಳನ್ನು ಓದುವ ಹವ್ಯಾಸವನ್ನು ರೂಡಿಸಿಕೊಳ್ಳಬೇಕು ಪುಸ್ತಕಗಳೇ ನಮಗೆ ನಿಜವಾದ ಸ್ನೇಹಿತರುಎಂದರು.

ಮಕ್ಕಳ ಜೀವನದಲ್ಲಿ ಪೋಷಕರ ಪಾತ್ರ ಬಹಳ ಮಹತ್ವವಾದಾಗಿದೆ. ಪೋಷಕರು ಮಕ್ಕಳಿಗೆ ನಿರಂತರವಾಗಿ ಬೆಂಬಲವಾಗಿ ನಿಂತು ಪ್ರೋತ್ಸಾಹ ನೀಡಿಎಂದರಲ್ಲದೆ, ಹೆಚ್ಚು ಸಮಯವನ್ನುತಮ್ಮ ಮಕ್ಕಳೊಂದಿಗೆ ಕಳೆಯಬೇಕು ಎಂದು ತಿಳಿಸಿದರು.

ರಾಷ್ಟ್ರಕಟ್ಟುವ ನಿಟ್ಟಿನಲ್ಲಿ ಶಿಕ್ಷಕರ ಪಾತ್ರ ಬಹಳ ಮಹತ್ವದ್ದಾಗಿದೆ ಈ ನಿಟ್ಟಿನಲ್ಲಿ ಮಕ್ಕಳನ್ನು ತಯಾರಿಸುವ ಶಿಕ್ಷಕರಿಗೆ ಅಭಿನಂದನೆಗಳನ್ನು ತಿಳಿಸಿದರು.

ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ವಿಜೇತರಾಗಿ ಬಹುಮಾನ ಪಡೆದಎಲ್ಲಾ ವಿದ್ಯಾರ್ಥಿಗಳಿಗೆ ಅಭಿನಂದನೆಗಳನ್ನು ತಿಳಿಸಿದರು.

ಪ್ರಾಂಶುಪಾಲರಾದಎಂ. ಜಯಶೀಲನ್, ಡಾ.ಮಿನಿ ವರ್ಗೀಸ್‌ಉಪಸ್ಥಿತರಿದ್ದರು.

### ಸರ್ಕಾರಿ ವಿಜ್ಞಾನ ಕಾಲೇಜುಗೆ ನೆಟ್ ಬಾಲ್ ರನ್ನರ್ಸಪ್ ಟ್ರೋಫಿ

# ಹೆಣ್ಣು ಮಕ್ಕಳು ಸಹ ಕ್ರೀಡೆಗಳಲ್ಲಿ ಹೆಚ್ಚಿನ ಆಸಕ್ತಿ ವಹಿಸಬೇಕು.



**ಚಿತ್ರದುರ್ಗ:** ಹೆಣ್ಣು ಮಕ್ಕಳು ಸಹ ಕ್ರೀಡೆಗಳಲ್ಲಿ ಹೆಚ್ಚಿನ ಮಟ್ಟದ ಆಸಕ್ತಿ ತೋರಿಸಿ ತಮ್ಮಲ್ಲಿರುವ ಪ್ರತಿಭೆಯನ್ನ ಹೊರ ತರಲು ಪ್ರಯತ್ನಿಸಬೇಕು, ಕ್ರೀಡೆಗಳಲ್ಲಿ ಭಾಗವಹಿಸುವುದರಿಂದ ಮುಂದಿನ ಜೀವನವನ್ನ ನಿರೂಪಿಸಿಕೊಳ್ಳಲು ಅನುಕೂಲಕರವಾಗುವುದು,

ಕ್ರೀಡೆಯಲ್ಲಿ ಸಾಧನೆ ಮಾಡಿದವರಿಗೆ ಉತ್ತಮ ಉದ್ಯೋಗ, ಪ್ರಶಸ್ತಿಗಳು ಲಭಿಸಿ, ಸಮಾಜದಲ್ಲಿ ಅತ್ಯುತ್ತಮ ಗೌರವೂ ಸಹ ಲಭಿಸುತ್ತದೆ ಎಂದು ಸರ್ಕಾರಿ ವಿಜ್ಞಾನ ಕಾಲೇಜಿನ ದೈಹಿಕ ನಿರ್ದೇಶಕರಾದ ಡಾ ರಾಘವೇಂದ್ರ ಕೆ ರವರು ಮಾತನಾಡಿದರು.

ಅವರು ಚಿತ್ರದುರ್ಗ ನಗರದಲ್ಲಿ ವಿಶ್ವವಿದ್ಯಾಲಯ ಮಟ್ಟದಲ್ಲಿ ಆಯೋಜಿಸಿದ್ದ ಮಹಿಳೆಯರ ನೆಟ್ ಬಾಲ್ ಕ್ರೀಡೆಯಲ್ಲಿ ರನ್ನರ್ಸಪ್ ಟ್ರೋಫಿ ವಿಜೇತರಾದ ವಿದ್ಯಾರ್ಥಿನಿಯರನ್ನು ಅಭಿನಂದಿಸುತ್ತ ಮಾತನಾಡುತ್ತಿದ್ದರು.

ದಾವಣಗೆರೆ ವಿಶ್ವವಿದ್ಯಾಲಯ ದ ನೆಟ್ ಬಾಲ್ ಪಂದ್ಯಾವಳಿ ಇತ್ತೀಚೆಗೆ ಚಿತ್ರದುರ್ಗದಲ್ಲಿ ನಡೆದು, ಸರ್ಕಾರಿ ವಿಜ್ಞಾನ ಕಾಲೇಜು ಮಹಿಳೆಯರ

ವಿಭಾಗದಲ್ಲಿ ಸತತ ಎರಡನೇ ಬಾರಿಗೆ ವಿಶ್ವವಿದ್ಯಾಲಯದ ಮಟ್ಟದಲ್ಲಿ ಎರಡನೇ ಸ್ಥಾನವನ್ನು ಪಡೆದುಕೊಂಡಿದ್ದು,,

ಕಾಲೇಜಿಗೆ ಮತ್ತು ಜಿಲ್ಲೆಗೆ ಹೆಸರು ತಂದು ಕೊಟ್ಟಿರುವಂತಹ ಕ್ರೀಡಾಪಟುಗಳನ್ನು ಕಾಲೇಜಿನ ಪ್ರಾಂಶುಪಾಲರು ಉಪನ್ಯಾಸಕರುಗಳು ಅಭಿನಂದಿಸುತ್ತಾರೆ ಎಂದರು.

ಕ್ರೀಡೆಯಲ್ಲಿ ಭಾಗವಹಿಸಿ ವಿಜೇತರಾದ ಪಲ್ಲವಿ, ಹರ್ಷಿತ ಎಂ.ವಿ. ರೇಣು ಆರ್, ಅಕ್ಷಯ, ಲಕ್ಷ್ಮಿ, ಅನು, ಸುಚಿತ್ರ, ಅನುಷಾ, ವಿದ್ಯಾ ಶ್ರೀ, ಅವರನ್ನು ಅಭಿನಂದಿಸಲಾಗಿದೆ ಎಂದು ಪತ್ರಿಕಾ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡಿದ್ದಾರೆ.

# ಪೋಲಿಯೋ ಮೇಲಿನ ವಿಜಯ ಮುಂದುವರೆಸಲು ಕೈಜೋಡಿಸಿ: ಡಿಹೆಚ್ಓ ಡಾ.ಯಲ್ಲಾ ರಮೇಶ್ ಬಾಬು

**ಬಳ್ಳಾರಿ:** ಭಾರತ ದೇಶವು ಪೋಲಿಯೋ ವಿರುದ್ಧ ನಿರಂತರ ವಿಜಯ ಸಾಧಿಸಿದ್ದು, ಇದನ್ನು ಮುಂದುವರೆಸಲು ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಕೋರಿದ್ದಾರೆ.

ಸಾಮಾನ್ಯವಾಗಿ ಮಕ್ಕಳಲ್ಲಿ ಶಾಶ್ವತ ಅಂಗವಿಕಲತೆ ಉಂಟು ಮಾಡುವ ಪೋಲಿಯೋ ಮೆಲಟೈಸ್ ಎಂಬ ಸೂಕ್ಷ್ಮಾಣುವಿನಿಂದ ಉಂಟಾಗುವ ಪೋಲಿಯೋ ರೋಗದ ನಿಯಂತ್ರಣಕ್ಕಾಗಿ 1995 ರಿಂದ ನಿರಂತರವಾಗಿ ಹುಟ್ಟಿನಿಂದ 5 ವರ್ಷದೊಳಗಿನ ಮಕ್ಕಳಿಗೆ ರಾಷ್ಟ್ರದ್ಯಾಂತ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ.

ಪ್ರಸ್ತುತ ಈ ವರ್ಷದ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ಡಿಸೆಂಬರ್-21 ರಂದು ಜರುಗಲಿದೆ. 1998ರಲ್ಲಿ 71 ಪ್ರಕರಣಗಳಿದ್ದ ಕರ್ನಾಟಕದಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮದ ಮೂಲಕ ಪೋಲಿಯೋ ನಿರ್ಮೂಲನೆಗೆ ಪಣ ತೊಡಲಾಯಿತು. 2007 ರಲ್ಲಿ ಕರ್ನಾಟಕದಲ್ಲಿ ಕೊನೆಯ ಪೋಲಿಯೋ ಪ್ರಕರಣ ವರದಿಯಾಗಿದೆ ಎಂದು ಅವರು ತಿಳಿಸಿದ್ದಾರೆ.



ದೇಶದಲ್ಲಿ 2011 ರ ಜನವರಿ 13 ರಂದು ಪಶ್ಚಿಮ ಬಂಗಾಳದ ಹೌರಾ ಜಿಲ್ಲೆಯಲ್ಲಿ ಕೊನೆಯ ಪೋಲಿಯೋ ಪ್ರಕರಣ ವರದಿಯಾಗಿದ್ದು, ನಂತರದಲ್ಲಿ ಯಾವುದೇ ಪ್ರಕರಣ ವರದಿಯಾಗಿರುವುದಿಲ್ಲ. ವಿಶ್ವ ಆರೋಗ್ಯ ಸಂಸ್ಥೆಯು 11ನೇ ಪೆಬ್ರವರಿ 2014 ರಂದು ಭಾರತವನ್ನು ಪೋಲಿಯೋ ಮುಕ್ತ ರಾಷ್ಟ್ರವೆಂದು ಘೋಷಣೆ ಮಾಡಿತು.

ಪಲ್ಸ್ ಪೋಲಿಯೊ ಎನ್ನುವುದು ಪೋಲಿಯೊ (Poliomyelitis) ಎಂಬ ಭೀಕರ ವೈರಲ್ ರೋಗವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವ ಉದ್ದೇಶದಿಂದ ಸರ್ಕಾರ ನಡೆಸುವ ವಿಶೇಷ ಲಸಿಕೆ ಅಭಿಯಾನ. ಇದರಲ್ಲಿ 5 ವರ್ಷಕ್ಕಿಂತ ಕಡಿಮೆ ವಯಸ್ಸಿನ ಎಲ್ಲಾ ಮಕ್ಕಳಿಗೂ ಪೋಲಿಯೊ ಲಸಿಕೆ ಹನಿಗಳನ್ನು ನೀಡಲಾಗುತ್ತದೆ.

ಪೋಲಿಯೊ ಒಂದು ವೈರಸ್‌ನಿಂದ ಉಂಟಾಗುವ ಸೋಂಕು ರೋಗ. ಇದು ಮುಖ್ಯವಾಗಿ ನರವ್ಯವಸ್ಥೆಯನ್ನು ಹಾನಿಗೊಳಿಸಿ, ಕೆಲವೊಮ್ಮೆ ಶಾಶ್ವತ ಅಂಗವಿಕಲತೆ ಉಂಟುಮಾಡಬಹುದು.

ಭಾರತ ದೇಶವು ಪೋಲಿಯೊ ಮೇಲಿನ ವಿಜಯವನ್ನು ಮುಂದುವರೆಸುತ್ತಾ, ಜಗತ್ತಿನಾದ್ಯಂತ ಪೋಲಿಯೊ ರೋಗವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವುದು ಪಲ್ಸ್ ಪೋಲಿಯೊ ಕಾರ್ಯಕ್ರಮದ ಉದ್ದೇಶವಾಗಿದೆ ಎಂದಿದ್ದಾರೆ.

5 ವರ್ಷದೊಳಗಿನ ಯಾವುದೇ ಮಗುವೂ ಲಸಿಕೆಯಿಂದ ವಂಚಿತವಾಗದಂತೆ ನೋಡಿಕೊಳ್ಳುವುದು. ಈಗಾಗಲೇ ಲಸಿಕೆ ಪಡೆದ ಮಕ್ಕಳಿಗೂ ಹೆಚ್ಚುವರಿ ರಕ್ಷಣೆಯನ್ನು ನೀಡುವುದಾಗಿದೆ.

ಬೈ ವಾಲೆಂಟ್ ಓರಲ್ ಪೋಲಿಯೊ ವ್ಯಾಕ್ಸಿನ್ ನೀಡುವ ವಿಧಾನ: ಬಾಯಿ ಮುಖಾಂತರ 2 ಹನಿ.

ವಯಸ್ಸು: 0-5 ವರ್ಷಗಳೊಳಗಿನ ಎಲ್ಲಾ ಮಕ್ಕಳು.

ಹಿಂದೆ ಲಸಿಕೆ ಪಡೆದಿದ್ದರೂ ಕೂಡ ಪಲ್ಸ್ ಪೋಲಿಯೊ ದಿನದಂದು ಮತ್ತೆ ಪೋಲಿಯೊ ಲಸಿಕೆ ಕೊಡಿಸಬೇಕು (ಇದು ಸುರಕ್ಷಿತ ಹಾಗೂ ಹೆಚ್ಚು ಪರಿಣಾಮಕಾರಿ) ನಿಮ್ಮ ಹತ್ತಿರದ ಆರೋಗ್ಯ ಕೇಂದ್ರ / ಬೂತ್ ಗೆ ಡಿಸೆಂಬರ್ 21 ರಂದೇ ಮಗುವನ್ನು ಕರೆದೊಯ್ದು ಲಸಿಕೆ ಕೊಡಿಸಬೇಕು.

ಡಿಸೆಂಬರ್ 22 ರಿಂದ 24 ರ ವರೆಗೆ ಆರೋಗ್ಯ ಕಾರ್ಯಕರ್ತರು ಮನೆಗೆ ಬಂದು ಲಸಿಕೆ ಪಡೆದ ಬಗ್ಗೆ ಮಕ್ಕಳ ಪರಿಶೀಲನೆ ಮಾಡುವಾಗ ಸಹಕರಿಸಬೇಕು. ಲಸಿಕೆ ಪಡೆದ ನಂತರ ಮಗುವಿನ ಎಡಗೈ ಕಿರು ಬೆರಳಿಗೆ ಅಳಿಸಲಾಗದ ಶಾಯಿಯಿಂದ ಗುರುತು ಹಾಕಲಾಗುತ್ತದೆ (ಪಲ್ಸ್ ಪೋಲಿಯೊ ಅಭಿಯಾನದಲ್ಲಿ ಲಸಿಕೆ ಪಡೆದಿರುವುದನ್ನು ಖಾತ್ರಿಪಡಿಸಲು) ಅಲ್ಪ ಪ್ರಮಾಣದ ಜ್ವರ, ಶೀತ, ಅತಿಸಾರ ಭೇದಿ ಇದ್ದರೂ ಕೂಡ ಲಸಿಕೆ ಕೊಡಿಸಬಹುದು.

ಯಾವುದೇ ಗಂಭೀರ ಅಡ್ಡ ಪರಿಣಾಮಗಳು ಇಲ್ಲ. ಈ ಹಿನ್ನೆಲೆಯಲ್ಲಿ ವಲಸೆ ಪ್ರದೇಶಗಳು, ಕೈಗಾರಿಕಾ ಪ್ರದೇಶಗಳು, ಇಟ್ಟಿಗೆ ಬಟ್ಟಿಗಳು, ಅಲೆಮಾರಿ ಕುರಿ ಸಾಕಾಣಿಕೆದಾರರು, ತೋಟದ ಮನೆಗಳು, ಕಟ್ಟಡ ನಿರ್ಮಾಣ ಸ್ಥಳಗಳು ಮುಂತಾದ ಸ್ಥಳಗಳಲ್ಲಿ ಮಕ್ಕಳಿರುವ ಬಗ್ಗೆ ಕ್ರಿಯಾಯೋಜನೆಯಲ್ಲಿ ಹೆಚ್ಚು ಆದ್ಯತೆ ನೀಡಿ ಲಸಿಕೆ ಹಾಕಲು ಕ್ರಮವಹಿಸಲಾಗುವುದು ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ತಿಳಿಸಿದ್ದಾರೆ.

## ಕಟ್ಟಡ ಮಾಲೀಕರ ಗಮನಕ್ಕೆ

**ಗದಗ** : 2025-26ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಡಾ.ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯಕ್ಕೆ 100 ವಿದ್ಯಾರ್ಥಿಗಳಿಗೆ ಬೇಕಾಗುವ 1 ವಸತಿ ನಿಲಯಕ್ಕೆ 1 ಬಾಡಿಗೆ ಕಟ್ಟಡ ಅವಶ್ಯವಿದ್ದು, 100 ವಿದ್ಯಾರ್ಥಿಗಳಿಗೆ ಸ್ಥಳಾವಕಾಶ ಇರುವ ಪ್ರತ್ಯೇಕ ಕೊಠಡಿಗಳನ್ನು, ಶೌಚಾಲಯ, ಸ್ನಾನಗೃಹ ವಿಶಾಲವಾದ ಅಡುಗೆ ಮನೆ, ವಿದ್ಯುತ್ ಸೌಲಭ್ಯ, ಬೋರವೆಲ್ ಹೊಂದಿರುವ ಸುಸಜ್ಜಿತ 1 ವಸತಿ ನಿಲಯಕ್ಕೆ । ಕಟ್ಟಡ ಅವಶ್ಯಕತೆ ಇರುತ್ತದೆ ಕಟ್ಟಡವನ್ನು ಬಾಡಿಗೆ ರೂಪದಲ್ಲಿ ಕೊಡಲು ಬಯಸುವ ಕಟ್ಟಡ ಮಾಲೀಕರು ತಕ್ಷಣ ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ, ಎಸ್.ಪಿ.ಆಫಿಸ್ ಎದುರಿಗೆ ಗದಗ ( ಕಛೇರಿ ದೂರವಾಣಿ ಸಂಖ್ಯೆ:08372-297258, ಮೊಬೈಲ್ ಸಂಖ್ಯೆ-9480843128) ಇವರನ್ನು ಭೇಟಿ ನೀಡಿ ಸಂಪರ್ಕಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಪ್ರಕಟಣೆ ತಿಳಿಸಿದೆ.

## ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳ ಗಮನಕ್ಕೆ

**ಗದಗ** : ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಅನುಷ್ಠಾನ ಮಾಡಲಾಗುತ್ತಿರುವ ಮೆಟ್ರಿಕ್ ಪೂರ್ವ 9 ಮತ್ತು 10 ನೇ ತರಗತಿಯ ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ಜಾತಿಯ ಮೆಟ್ರಿಕ್ ನಂತರ ವಿದ್ಯಾರ್ಥಿ ವೇತನ ಕಾರ್ಯಕ್ರಮದಡಿ ವಿದ್ಯಾರ್ಥಿ ವೇತನ ಕೋರಿ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳನ್ನು ಕಡ್ಡಾಯವಾಗಿ ಆಧಾರ ಆಧಾರಿತ ಬಯೋಮೆಟ್ರಿಕ್ ಇ ಆಂಥಟಿಕೇಷನ್ ಪ್ರಕ್ರಿಯೆಗೆ ಒಳಪಡಿಸಬೇಕಾಗಿರುತ್ತದೆ. ಮೆಟ್ರಿಕ್ ಪೂರ್ವ 9 ಮತ್ತು 10 ನೇ ತರಗತಿ ಮಾತ್ರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಜಾತಿಯ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಕಾಲೇಜಿನ ವಿದ್ಯಾರ್ಥಿಗಳು ಎಸ್‌ಎಸ್‌ಪಿ ಐಡಿ , ಆಧಾರ ಕಾರ್ಡ , 9 ಮತ್ತು 10 ನೇ ತರಗತಿ ವಿದ್ಯಾರ್ಥಿಗಳು ಸ್ಯಾಟ್ಸ್ ( ಖಂಖಿಖ ) ನಂಬರ್ ಆಧಾರ ಕಾರ್ಡ ನೊಂದಿಗೆ ತಮಗೆ ಹತ್ತಿರದ ಗ್ರಾಮ ಒನ್ ಕೇಂದ್ರ, ಕರ್ನಾಟಕ ಒನ್ ಕೇಂದ್ರ ಹಾಗೂ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಎಸ್.ಪಿ, ಆಫೀಸ್ ಎದುರಿಗೆ ಗದಗ ಇಲ್ಲಿಗೆ ಭೇಟಿ ನೀಡಿ ಬಯೋಮೆಟ್ರಿಕ್ ಇ ಆಂಥಟಿಕೇಷನ್ ಮಾಡಿಸಬೇಕಾಗಿರುತ್ತದೆ. ಡಿಸೆಂಬರ್ 31 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಎಸ್.ಪಿ. ಆಫೀಸ್ ಎದುರಿಗೆ , ಹೊಸ ಬಸ್ ನಿಲ್ದಾಣ ಹಿಂದುಗಡೆ ಗದಗ ದೂರವಾಣಿ ಸಂಖ್ಯೆ 08372-297258 ಸಂಪರ್ಕಿಸಬಹುದಾಗಿದೆ.

## ಯುವನಿಧಿ ಫಲಾನುಭವಿಗಳು ಸ್ವಯಂ ಘೋಷಣೆ ಕಡ್ಡಾಯ

**ಚಿಕ್ಕಬಳ್ಳಾಪುರ:** ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳಲ್ಲಿ ಒಂದಾದ ಯುವನಿಧಿ ಯೋಜನೆಯ ನೋಂದಣಿ 2022-23 ರಿಂದಲ್ಲೇ ಪ್ರಾರಂಭವಾಗಿದ್ದು, 2022-23ನೇ ಸಾಲಿನಿಂದ ಉತ್ತೀರ್ಣರಾಗಿ 180 ದಿನಗಳು ಪೂರೈಸಿದ ಅಭ್ಯರ್ಥಿಗಳಿಗೆ ಜನವರಿ-2024 ರಿಂದ ನೇರ ನಗದು ವರ್ಗಾವಣೆ ಮಾಡಲಾಗುತ್ತಿದೆ.

# ಕಡಲೆ ಬೆಳೆಯಲ್ಲಿ ಪೋಷಕಾಂಶ ನಿರ್ವಹಣೆ ಬಗ್ಗೆ ಸಲಹೆ



**ಗದಗ** : ಜಿಲ್ಲೆಯಲ್ಲಿ ಪ್ರಸ್ತುತ ಕಡಲೆ ಬೆಳೆಯು ಹೂವಾಡುವ ಹಂತದಿಂದ ಕಾಯಿ ಕಟ್ಟುವ ಹಂತದವರೆಗಿದೆ. ಬಹಳಷ್ಟು ಕಡೆಗಳಲ್ಲಿ, ಪೋಷಕಾಂಶಗಳ ಕೊರತೆಯಿಂದ ಸದರಿ ಬೆಳೆಯು ಹಳದಿ ಹಾಗೂ ಕೆಂಪು ಬಣ್ಣಕ್ಕೆ ತಿರುಗಿ ಒಣಗಿದ ಹಾಗೆ ತಾಕಿನಲ್ಲಿ ಕಾಣಸಿಗುತ್ತಿದೆ.

ಪೋಷಕಾಂಶಗಳ ಕೊರತೆಯಿಂದ ಬೆಳೆಯ ಬೆಳವಣಿಗೆ ಕುಂಠಿತವಾಗಿ, ಇಳುವರಿಯು ಕಡಿಮೆಯಾಗುವ ಸಂಭವವಿರುತ್ತದೆ. ರೈತರು ತಮ್ಮ ಹತ್ತಿರದ ರೈತ ಸಂಪರ್ಕ ಕೇಂದ್ರದಲ್ಲಿ ರಿಯಾಯಿತಿ ದರದಲ್ಲಿ ಲಭ್ಯವಿರುವ ದ್ರವರೂಪದ ಲಘುಪೋಷಕಾಂಶಗಳ ಮಿಶ್ರಣವನ್ನು (2ಮಿ.ಲೀ./ಲೀ.) ಶಿಫಾರಸ್ಸಿಗನುಗುಣವಾಗಿ ಬೆಳೆಗೆ ಸಿಂಪಡಿಸಿದ್ದಲ್ಲಿ, ಎಲ್ಲ ಪೋಷಕಾಂಶಗಳು ಬೆಳೆಗೆ ಒದಗಿ, ಬೆಳೆಯು ಸಮೃದ್ಧವಾಗಿ, ಇಳುವರಿಯು ಉತ್ತಮವಾಗಿರುತ್ತದೆ ಎಂದು ಗದಗ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರಾದ ಶ್ರೀಮತಿ ಚೇತನಾ ಪಾಟೀಲ ತಿಳಿಸಿದ್ದಾರೆ.ಬೆಳೆಗೆ ಬೇಕಾದ ಬೊರೋನ್ ಮೂಲದ ಪೋಷಕಾಂಶವನ್ನು ಶಿಫಾರಸ್ಸಿಗನ್ವಯ ದ್ರವರೂಪದ ಕನ್ಸೋರ್ಷಿಯಾದ ಜೊತೆಗೆ (2ಮಿ.ಲೀ./ಲೀ.) ಸಿಂಪರಣೆ ಮಾಡಿದಲ್ಲಿ, ಚೆನ್ನಾಗಿ ಹೂವು ಹಿಡಿದು, ಕಾಯಿ ಕಟ್ಟಿ, ಗುಣಮಟ್ಟದ ಉತ್ಪಾದನೆಗೆ ಸಹಕಾರಿಯಾಗುತ್ತದೆ. ಸದರಿ ಎಲ್ಲ ಪೋಷಕಾಂಶಗಳು ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರಗಳಲ್ಲಿ ರಿಯಾಯಿತಿ ದರದಲ್ಲಿ ಲಭ್ಯವಿದ್ದು, ಜಿಲ್ಲೆಯ ಎಲ್ಲ ರೈತರು ಅವುಗಳ ಉಪಯೋಗ ಪಡೆಯುವಂತೆ ಜಂಟಿ ಕೃಷಿ ನಿರ್ದೇಶಕರು ಮನವಿ ಮಾಡಿದ್ದಾರೆ. ಸದರಿ ಪೋಷಕಾಂಶಗಳನ್ನು ರೈತ ಬಾಂಧವರು ಸಿಂಪಡಿಸುವ ಕೀಟನಾಶಕಗಳ ಜೊತೆಗೆ ಕೂಡ ಮಿಶ್ರ ಮಾಡಿ ಸಿಂಪಡಿಸಬಹುದಾಗಿದೆ ಎಂದು ತಿಳಿಸಿದ್ದಾರೆ. 025-26 ಸಾಲಿನ ಸೂಕ್ಷ್ಮ ನೀರಾವರಿ ಯೋಜನೆಗಳಡಿ, ಪರಿಶಿಷ್ಟ ಜಾತಿ ರೈತರುಗಳಿಗೆ ಸೂಕ್ಷ್ಮ ನೀರಾವರಿ ಘಟಕಗಳಾದ ಹನಿ ನೀರಾವರಿ ಮತ್ತು ತುಂತುರು ನೀರಾವರಿ ಉಪಕರಣಗಳನ್ನು ಶೇ. 90 ರ ಸಹಾಯಧನದಲ್ಲಿ ಪಡೆಯಲು ಅವಕಾಶವಿದ್ದು, ಜಿಲ್ಲೆಯ ರೈತರು ಸದರಿ ಯೋಜನೆಯ ಸದುಪಯೋಗ ಪಡೆದುಕೊಳ್ಳಲು ತಿಳಿಸಿದೆ.ಕೇಂದ್ರ ಸರ್ಕಾರದ ಹೊಸ ಜಿ. ಎಸ್. ಟಿ. ಕಾಯ್ದೆಯನ್ವಯ ಹನಿ ನೀರಾವರಿ ಮತ್ತು ತುಂತುರು ನೀರಾವರಿ ಉಪಕರಣಗಳ ಬೆಲೆ / ದರ ಕಡಿಮೆಯಾಗಿದ್ದು, ಪ್ರಸಕ್ತ / ಹಿಂದಿನ ಸಾಲಿನಲ್ಲಿ ಒಂದು ಹೆ. ಪ್ರದೇಶಕ್ಕೆ ಸೂಕ್ಷ್ಮ ನೀರಾವರಿ ಘಟಕವನ್ನು ಅಳವಡಿಸಿಕೊಂಡ ಪರಿಶಿಷ್ಟ ಜಾತಿ ರೈತರು ಹೆಚ್ಚುವರಿಯಾಗಿ ಇನ್ನೊಂದು ಹೆ. ಪ್ರದೇಶಕ್ಕೆ ಸೂಕ್ಷ್ಮ ನೀರಾವರಿ ಘಟಕವನ್ನು ಅಳವಡಿಸಿಕೊಳ್ಳಲು ಅರ್ಹರಾಗಿರುತ್ತಾರೆ.

# ಪೋಲಿಯೋ ಹನಿ ಕಾರ್ಯಕ್ರಮ ಯಶಸ್ವಿ



**ಬಳ್ಳಾರಿ:** ದಿನಾಂಕ 21.12.2025 ಭಾನುವಾರ ದಂದು ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಂಗ ಸಂಸ್ಥೆಯಾದ ಚೇಂಬರ್ ಉಚಿತ ಆಸ್ಪತ್ರೆಯ ಸಭಾಂಗಣದಲ್ಲಿ ನಮ್ಮ ಕ್ಲಿನಿಕ್ ವತಿಯಿಂದ ಪೋಲಿಯೋ ಹನಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸಲಾಯಿತು.

ಕಾರ್ಯಕ್ರಮಕ್ಕೆ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಅವ್ವಾರ್ ಮಂಜುನಾಥ್ ಹಾಗೂ ಗೌರವ ಕಾರ್ಯದರ್ಶಿಗಳಾದ ಶ್ರೀ ಕೆ.ಸಿ. ಸುರೇಶ್ ಬಾಬು ಅವರು ಭಾಗವಹಿಸಿ ಪೋಲಿಯೋ ಹನಿ ಹಾಕುವ ಮೂಲಕ ಕಾರ್ಯಕ್ರಮಕ್ಕೆ ಅಧಿಕೃತ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಚೇಂಬರ್ ಉಚಿತ ಆಸ್ಪತ್ರೆ ಚೇರ್ಮನ್, ಶ್ರೀ ಬಿ. ಸುರೇಂದ್ರ ಕುಮಾರ್, ಹಾಗೂ ನಮ್ಮ ಕ್ಲಿನಿಕ್ ನ ವೈದ್ಯಾಧಿಕಾರಿಗಳಾದ, ಡಾ ಅಭಿಷೇಕ್, ಮತ್ತು ಸಿಬ್ಬಂದಿ ವರ್ಗದವರು, ಹೆಚ್ಚಿನ ಸಂಖ್ಯೆಯಲ್ಲಿ ತಾಯಂದಿರು ತಮ್ಮ ಮಕ್ಕಳೊಂದಿಗೆ ಭಾಗವಹಿಸಿ ಮಕ್ಕಳಿಗೆ ಪೋಲಿಯೋ ಹನಿ ಹಾಕಿಸುವ ಮೂಲಕ ಕಾರ್ಯಕ್ರಮವನ್ನು ನೆರವೇರಿಸಿದರು. ಮಕ್ಕಳ ಆರೋಗ್ಯ ಮತ್ತು ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ಸಾರ್ವಜನಿಕರು ತೋರಿದ ಉತ್ತಮ ಸಹಕಾರ ಶ್ಲಾಘನೀಯವಾಗಿದೆ.

ಪೋಲಿಯೋ ರಹಿತ ಸಮಾಜ ನಿರ್ಮಾಣಕ್ಕೆ ಸಹಕರಿಸಿದ ಎಲ್ಲಾ ತಾಯಂದಿರಿಗೆ ನಮ್ಮ ಕ್ಲಿನಿಕ್ ವತಿಯಿಂದ ಧನ್ಯವಾದಗಳನ್ನು ಸಲ್ಲಿಸಲಾಯಿತು.

## ವಿವಿಧ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಸಿಬ್ಬಂದಿ ನೇಮಕಾತಿ ಆಯೋಗ, ಕೇಂದ್ರ ಸಶಸ್ತ್ರ ಪೊಲೀಸ್ (CAPF) ಮತ್ತು ಖಖಈ ಪಡೆಗಳಲ್ಲಿ ಕಾನ್‌ಸ್ಟೆಬಲ್ (GD) ಮತ್ತು ಅಸ್ಸಾಂ ರೈಫಲ್ಸ್ ನಲ್ಲಿ, ರೈಫಲ್ ಮ್ಯಾನ್ (GD) ಹುದ್ದೆಗಳ ನೇಮಕಾತಿಗಾಗಿ ಕಂಪ್ಯೂಟರ್ ಅಧಾರಿತ ಪರೀಕ್ಷೆಯನ್ನು ನಡೆಸುತ್ತಿದ್ದು, ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಆನ್ ಲೈನ್ ನ ವೆಬ್ ಸೈಟ್ ವಿಳಾಸ: https://ssc.gov.in ªÀÄvÀÄÛ https://ssc.nic.in ನಲ್ಲಿ ಅರ್ಜಿಗಳನ್ನು ಡಿಸೆಂಬರ್ 31 ರೊಳಗೆ ಸಲ್ಲಿಸಬಹುದು.ಅರ್ಹತೆಗಳು: ವಯೋಮಿತಿ 18 ರಿಂದ 23 ವರ್ಷಗಳು (01/01/2026 ರಂತೆ), ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ, ಅರ್ಜಿ ಶುಲ್ಕ 100/- (ಮಹಿಳೆ/ SC/ST/EXS ವರ್ಗಗಳಿಗೆ ಯಾವುದೇ ಶುಲ್ಕವಿಲ್ಲ).

# ರಾಜ್ಯದ ಸಮತೋಲನ ಅಭಿವೃದ್ಧಿಗಾಗಿ ಸಮಗ್ರ ಭೂ ಸ್ವಾಧೀನ ನೀತಿ ಜಾರಿಗೊಳಿಸಿ

**ದಾವಣಗೆರೆ:** ಕರ್ನಾಟಕ ರಾಜ್ಯದ ಸಮತೋಲನ ಅಭಿವೃದ್ಧಿಗೆ ಪೂರಕವಾದ ಸಮಗ್ರ ಭೂ ಸ್ವಾಧೀನ ನೀತಿಯನ್ನು ಬರುವ ಬಜೆಟ್‌ನಲ್ಲಿ ಘೋಷಿಸಬೇಕೆಂದು ಕರ್ನಾಟಕ ನೀತಿ ಮತ್ತು ಯೋಜನಾ ಆಯೋಗದ ಸದಸ್ಯ, ಕೃಷಿ ವಿಜ್ಞಾನಿ ಡಾ.ಪ್ರಕಾಶ ಕಮ್ಮರಡಿ ಸರ್ಕಾರಕ್ಕೆ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಉಳುವವನಿಗೆ ಹ'ೂ ಲ ದ'ೂ ಡ' ತ' ನ' ದ' ೦ ತ' ಹ' ಮಹದಾಶಯವನ್ನು ಸಾಕಾರಗೊಳಿಸಿ, ಕ್ರಾಂತಿಕಾರಕ ಭೂ ಸುಧಾರಣಾ ಕಾಯ್ದೆ ಜಾರಿಗೊಳಿಸಿದ್ದ ಕರ್ನಾಟಕದಲ್ಲೇ ರೈತರು ಇಂದು ಭೂಮಿ ಕಳೆದುಕೊಳ್ಳುವ ಭೀತಿ ಎದುರಿಸುತ್ತಿದ್ದು, ಬೆಂಗಳೂರಿನ ದೇವನಹಳ್ಳಿ, ಚನ್ನಗಿರಿ ಪಟ್ಟಣದ ಹೋಬಳಿ ಫಲವತ್ತಾದ ಕೃಷಿ ಭೂಮಿಯ ಸ್ವಾಧೀನ ವಿರೋಧಿಸಿ 3 ವರ್ಷ ನಿರಂತರ ಹೋರಾಟ ಮಾಡಿ, ಭೂಮಿ ಉಳಿಸಿಕೊಂಡರು. ರಾಜ್ಯದ ಇತರೆಡೆ ಹೋರಾಟ ನಡೆದೇ ಇದೆ ಎಂದರು.

ದೇಶ ಅಭಿವೃದ್ಧಿ ಪಥದಲ್ಲಿ ಸಾಗುತ್ತಿರುವಾಗ ಕೈಗಾರಿಕೆಗೆ, ವಸತಿ, ರಸ್ತೆ, ಮೂಲಸೌಲಭ್ಯ ಒದಗಿಸಲು ಭೂಮಿಯ ಅಗತ್ಯವಿದೆ. ಆದರೆ, ಆಹಾರ ಭದ್ರತೆಯ ಸಮಗ್ರ ಉದ್ದೇಶಕ್ಕಾಗಿ ಅಲ್ಪ ಪ್ರಮಾಣದ ಕೃಷಿ ಯೋಗ್ಯಭೂಮಿ ಬೇರೆ ಉದ್ದೇಶಕ್ಕೆ ಬಳಕೆಯಾಗುವ ಬಗ್ಗೆ ಕಟ್ಟೆಚ್ಚರಿಕೆ ಅವಶ್ಯಕವಾಗಿದೆ. ಈ ನಿಟ್ಟಿನಲ್ಲಿ ಬೆಂಗಳೂರಿನ "ಕೃಷಿ ತಂತ್ರಜ್ಞಾನ ಸಂಸ್ಥೆ"ಯಲ್ಲಿ ಎಲ್ಲಾ ವಾರಸುದಾರರ ಸಭೆ ಜರುಗಿದ್ದು, ಕರ್ನಾಟಕದ ಸಮತೋಲನ ಅಭಿವೃದ್ಧಿಗೆ ಪೂರಕವಾದ "ಸಮಗ್ರ ಭೂಸ್ವಾಧೀನ ನೀತಿ" ಜಾರಿಗೆ ತರಬೇಕೆಂದು ಅಗ್ರಹಿಸಲಾಗಿರುತ್ತದೆ ಎಂದು ಹೇಳಿದರು.

ಇನ್ನೂ ಕೃಷಿ ಯೋಗ್ಯ ಭೂಮಿಯನ್ನು ಭೂ ಪರಿವರ್ತನೆ ಮಾಡಬಾರದು. ರಾಜ್ಯದಲ್ಲಿ ಸುಮಾರು 70-80 ಸಾವಿರಕ್ಕೂ ಅದಿಕ ಕೃಷಿ ಭೂಮಿ ಭೂ ಸ್ವಾಧೀನಪಡಿಸಿಕೊಂಡ ಕೆಐಎಡಿಬಿ ಅದನ್ನು ಬಳಕೆ ಮಾಡಿದ ಬಗ್ಗೆ ಸ್ಪಷ್ಟ ಮಾಹಿತಿ ನೀಡುತ್ತಿಲ್ಲ. ಭೂ ಸ್ವಾಧೀನಪಡಿಸಿಕೊಂಡ ಭೂಮಿ ಉದ್ದೇಶಿತ ಕಾರ್ಯಕ್ಕೆ ಸದ್ಬಳಕೆ ಆಗಿದೆಯಾ ಎಂಬ ಪ್ರಶ್ನೆ ಕಾಡುತ್ತದೆ. ಅನೇಕ ಕಡೆ ಹೀಗೆ ಭೂ ಸ್ವಾಧೀನ ಆದ ಭೂಮಿಯಲ್ಲಿ ದೊಡ್ಡ ದೊಡ್ಡ ಅಪಾರ್ಟ್‌ಮೆಂಟ್‌ಗಳು ತಲೆ ಎತ್ತಿ ನಿಂತಿವೆ. ಬೆಲೆ ಬಾಳುವ ಕೃಷಿ ಯೋಗ್ಯ ಭೂಮಿಯನ್ನೇ ಭೂ ಸ್ವಾಧೀನಪಡಿಸಿಕೊಳ್ಳುವುದು ಸರಿಯಲ್ಲ ಎಂದು ಅವರು ಆಕ್ಷೇಪಿಸಿದರು.

ಕೆಐಎಡಿಬಿ ಸೇರಿದಂತೆ ವಿವಿಧ ಸಂಸ್ಥೆಗಳ ಮೂಲಕ ರಾಜ್ಯ ಸರ್ಕಾರ ಇದುವರೆಗೆ ಕೈಗೊಂಡ ಭೂ ಸ್ವಾಧೀನ, ಅದರ ಹಂಚಿಕೆ, ಸದ್ಬಳಕೆ, ಉದ್ಯೋಗ ಸೃಷ್ಟಿ ಇತ್ಯಾದಿ ವಿಷಯಗಳ ಕುರಿತಂತೆ ಶ್ವೇತಪತ್ರ ಹೊರಡಿಸಬೇಕು. ರೈತರ ವಿಶ್ವಾಸಕ್ಕೆ ಪಡೆಯುವವರೆಗೆ ರಾಜ್ಯ ಸರ್ಕಾರ ಯಾವುದೇ ಭೂ ಸ್ವಾಧೀನಕ್ಕೆ ಪ್ರಯತ್ನಿಸಬಾರದು. ಕರ್ನಾಟಕ ಭೂ ಸುಧಾರಣಾ ಕಾಯ್ದೆಗೆ ಈ ಹಿಂದಿನ ಸರ್ಕಾರ ತಂದಿರುವ ಮಾರಕ ಬದಲಾವಣೆಗಳನ್ನು ಹಿಂಪಡೆದು, ಕಾಯ್ದೆಗೆ ಪುನರ್ ಚೇತನ ನೀಡಬೇಕು. ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ? ಯೋಗ ಮುಂಬರುವ ಬಜೆಟ್‌ನಲ್ಲಿ ಸಮಗ್ರ ಭೂ ಸ್ವಾಧೀನ ನೀತಿ ಘೋಷಿಸುವ ಶಿಫಾರಸ್ಸನ್ನು ರಾಜ್ಯ ಸರ್ಕಾರದ ಮುಂದಿಡಲಿದ್ದು, ನೀತಿ ರೂಪಿಸುವ ಜವಾಬ್ದಾರಿ ಹೊರಲು ಆಯೋಗ ಸಿದ್ಧವಿದೆ ಅವರು ಸ್ಪಷ್ಟಪ 'ಡಿಸಿದರು.ಸುದ್ದಿಗೋಷ್ಠಿಯಲ್ಲಿ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ತೇಜಸ್ವಿ ಪಟೇಲ್, ಶ್ರೀನಿವಾಸ ಇದ್ದರು.

## 50 ಕೋಟಿ ಮೌಲ್ಯದ ಆಸ್ತಿ ವಶ



**ಬೆಂಗಳೂರು:** ನಗರದ ಬಾಣಸವಾಡಿ ಗ್ರಾಮದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಕಾರ್ಯಾಚರಣೆ ನಡೆಸಿ ಸುಮಾರು 50ಕೋಟಿ ರೂ. ಮೌಲ್ಯದ ಆಸ್ತಿಯನ್ನು ವಶಪಡಿಸಿಕೊಂಡಿದೆ.

ಒ.ಎಂ.ಬಿ.ಆರ್. ಬಡಾವಣೆಯ ಬಾಣಸವಾಡಿ ಗ್ರಾಮ ಸರ್ವೆ ನಂ. 227/2, ಮತ್ತು 227 ರಲ್ಲಿ ಸುಮಾರು 1 ಎಕರೆ 24 ಗುಂಟೆ ಜಾಗದಲ್ಲಿದ್ದ ಅನಧಿಕೃತ ಒತ್ತುವರಿಯನ್ನು ಬಿಡಿಎ ಅಧಿಕಾರಿ ತೆರವುಗೊಳಿಸಿ ತಮ್ಮ ವಶಕ್ಕೆ ಪಡೆದು ಕೊಂಡಿದ್ದಾರೆ.

ಬಿಡಿಎ ಕಾರ್ಯನಿರತ ಪಡೆಯ ಆರಕ್ಷಕ ಅಧೀಕ್ಷಕರು, ಅಭಿಯಂತರ ಅಧಿಕಾರಿ, ಕಾರ್ಯಪಾಲಕ ಅಭಿಯಂತರರು ಸ್ಥಳೀಯ ಪೊಲೀಸರ ಸಹಕಾರದೊಂದಿಗೆ ಕಾರ್ಯಾಚರಣೆ ನಡೆಸಿದರು.

## ಬೊಲೆರೋ ಕಾರು ಅಪಘಾತ ಇಬ್ಬರು ಸಾವು




**ಬೆಂಗಳೂರು:** ಬೊಲೆರೋ ಕಾರು ಹಾಗೂ ಬಲ್ಕರ್ ಲಾರಿ ನಡುವೆ ಅಪಘಾತ ಸಂಭವಿಸಿ ಇಬ್ಬರು ಸಾವನ್ನಪ್ಪಿರುವ ಘಟನೆ ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು ತಾಲೂಕಿನ ಪೇತೇನಹಳ್ಳಿ ಬಳಿ ನಡೆದಿದೆ.

ಜಕ್ಕೇನೆಹಳ್ಳಿಯ ಅಶೋಕ್(25) ಆಂಧ್ರಪ್ರದೇಶ ಸಂಜೀವರಾಯನಪಲ್ಲಿಯ ನಾಗರಾಜಪ್ಪ ಮೃತಪಟ್ಟವರು. ಗೌರಿಬಿದನೂರು ಹಿಂದೂಪುರ ಕಡೆಯಿಂದ ಬೆಂಗಳೂರಿಗೆ ಬರುತಿದ್ದ ಬಲ್ಕರ್ ಲಾರಿ ಬೆಂಗಳೂರಿನಿಂದ ಗೌರಿಬಿದನೂರು ಕಡೆಗೆ ಬರುತಿದ್ದ ಬುಲೆರೊ ವಾಹನಕ್ಕೆ ಡಿಕ್ಕಿ ಹೊಡೆದು ಈ ದುರ್ಘಟನೆ ಸಂಭವಿಸಿದೆ.

ಮಂಚೆನಹಳ್ಳಿ ಪೊಲೀಸರು ಪ್ರಕರಣ ದಾಖಲಿಸಿ ಮುಂದಿನ ತನಿಖೆಯನ್ನು ಕೈಗೊಂಡಿದ್ದಾರೆ.

## ಜಿಹಾದಿ ಚಟುವಟಿಕೆ ಹತ್ತಿಕ್ಕಲು ಕಟ್ಟುನಿಟ್ಟಿನ ಕ್ರಮ



**ಗುವಾಹಟಿ:** ಆಸ್ಸಾಂನಲ್ಲಿ ಜಿಹಾದಿ ಚಟುವಟಿಕೆಗಳನ್ನು ಹತ್ತಿಕ್ಕಲು ಪೊಲೀಸರು ಮತ್ತು ಭದ್ರತಾ ಸಂಸ್ಥೆಗಳು ಕಟ್ಟುನಿಟ್ಟಿನ ಕ್ರಮ ಕೈಗೊಂಡಿವೆ.

ಜೆಎಂಬಿ ಮತ್ತು ಅನ್ಸರ್ ಬಾಂಗ್ಲಾ ತಂಡದಂತಹ ಬಾಂಗ್ಲಾದೇಶದ ಜಿಹಾದಿ ಗುಂಪುಗಳು ಅಸ್ಸಾಂನಲ್ಲಿ ತಮ್ಮ ನೆಲೆಗಳನ್ನು ಸ್ಥಾಪಿಸಲು ಹಲವಾರು ಪ್ರಯತ್ನಗಳನ್ನು ಮಾಡಿವೆ ಎಂದು ಭದ್ರತಾ ಮೂಲಗಳು ತಿಳಿಸಿವೆ, ಆದ-ರೆ ಪ್ರತಿ ಬಾರಿಯೂ ಪೊಲೀಸರು ಮತ್ತು ಭದ್ರತಾ ಪಡೆಗಳು ಈ ಪ್ರಯತ್ನಗಳನ್ನು ವಿಫಲಗೊಳಿಸಿವೆ ಮತ್ತು ಬಾಂಗ್ಲಾದೇಶಿ ಪ್ರಜೆಗಳು ಸೇರಿದಂತೆ ಹಲವಾರು ಜಿಹಾದಿಗಳನ್ನು ಬಂಧಿಸಲಾಗಿದೆ.

ಆದರೆ, ಬೆದರಿಕೆ ಹಾಗೆಯೇ ಉಳಿದಿದೆ, ಏಕೆಂದರೆ ಅಂತಹ ಅಂಶಗಳು ನಿಸ್ಸಂದೇಹವಾಗಿ ಅಸ್ಸಾಂಗೆ ನುಸುಳಲು ಪ್ರಯತ್ನಿಸುತ್ತವೆ. ಅಂತಹ ಪ್ರಯತ್ನಗಳನ್ನು ತಡೆಯಲು ಪೊಲೀಸರು ಮತ್ತು ಭದ್ರತಾ ಸಂಸ್ಥೆಗಳು ಜಾಗರೂಕರಾಗಿದ್ದಾ-ರೆ. ಬಾಂಗ್ಲಾದೇಶದಲ್ಲಿ ತೀವ್ರಗಾಮಿ ಸಂಘಟನೆಗಳ ಚಟುವಟಿಕೆಗಳು ಹೆಚ್ಚುತ್ತಿರುವುದರಿಂದ ಪರಿಸ್ಥಿತಿ ಇನ್ನಷ್ಟು ಅಪಾಯಕಾರಿಯಾಗಿದೆ.

ಭಯೋತ್ಪಾದಕ ಗುಂಪುಗಳು ಸೇರಿದಂತೆ ಮೂಲಭೂತವಾದಿ ಶಕ್ತಿಗಳು ಯುವಕರನ್ನು ಮೂಲಭೂತವಾದಿಗಳನ್ನಾಗಿ ಮಾಡಲು ಸೈಬರ್‌ಸ್ಪೇಸ್ ಸಕ್ರಿಯವಾಗಿ ಬಳಸುತ್ತಿವೆ, ಇದು ಗಂಭೀರ ಕಳವಳಕಾರಿ ವಿಷಯವಾಗಿದೆ. ಜಿಹಾದಿ ಸಾಹಿತ್ಯವು ಸೈಬರ್‌ಸ್ಪೇಸ್‌ನಲ್ಲಿ ಮುಕ್ತವಾಗಿ ಲಭ್ಯವಿದೆ ಮತ್ತು ಅಂತಹ ಸಂಘಟನೆಗಳು ಯುವಕರನ್ನು ಮೂಲಭೂತವಾದಿಗಳನ್ನಾಗಿ ಮಾಡಲು ಪ್ರಯತ್ನಿಸುತ್ತಿವೆ.

ಅಸ್ಸಾಂ ಸರ್ಕಾರ ಇತ್ತೀಚೆಗೆ ಜಿಹಾದಿ ಸಾಹಿತ್ಯವನ್ನು ನಿಷೇಧಿಸಿದೆ, ಮತ್ತು ಭದ್ರತಾ ಮೂಲಗಳು ಹೇಳುವಂತೆ ಇದು ಅದರ ಹರಡುವಿಕೆಯನ್ನು ಸ್ವಲ್ಪಮಟ್ಟಿಗೆ ತಡೆಯುತ್ತದೆ. ನಿಷೇಧವು ಪೊಲೀಸರಿಗೆ ಅಂತಹ ಸಾಹಿತ್ಯವನ್ನು ಹೊಂದಿರುವ ಯಾರನ್ನಾದರೂ ಬಂಧಿಸಲು ಸುಲಭಗೊಳಿಸುತ್ತದೆ. ಸೈಬರ್‌ಸ್ಪೇಸ್ ನಿಕಟ ಕಣ್ಗಾವಲಿನಲ್ಲಿದೆ ಮತ್ತು ಜಿಹಾದಿ ಸಾಹಿತ್ಯವನ್ನು ಹರಡುವುದು ಕಂಡುಬಂದರೆ ಯಾರಾದರೂ ಶಿಕ್ಷೆಯನ್ನು ಎದುರಿಸಬೇಕಾಗುತ್ತದೆ.

## ತಿಮರೋಡಿ ಸೇರಿ ಐವರ ವಿರುದ್ಧ ಮಾಸ್ಕ್ ಮ್ಯಾನ್ ದೂರು

**ಮಂಗಳೂರು:** ಧರ್ಮಸ್ಥಳ ಪ್ರಕರಣದ ಸಂಬಂಧ ಬಂಧಿತನಾಗಿದ್ದ ಮಾಸ್ಕ್ ಮ್ಯಾನ್ ಚಿನ್ನಯ್ಯ ಜೈಲಿನಿಂದ ಜಾಮೀನು ಪಡೆದು ಹೊರಬಂದ ತಕ್ಷಣವೇ ಪೊಲೀಸ್ ಠಾಣೆಗೆ ಹಾಜರಾಗಿ ನನಗೂ ನನ್ನ ಪತ್ನಿಗೂ ಜೀವ ಬೆದರಿಕೆ ಇರುವುದಾಗಿ ಮಹೇಶ್ ತಿಮರೋಡಿ ಸೇರಿ ಐವರ ವಿರುದ್ಧವೇ ದೂರು ನೀಡಿದ್ದಾನೆ.

ಬುರುಡೆ ಪ್ರಕರಣದಲ್ಲಿ ನಾಲ್ಕು ತಿಂಗಳಿಂದ ಶಿವಮೊಗ್ಗ ಜೈಲಿನಲ್ಲಿರುವ ಚಿನ್ನಯ್ಯನಿಗೆ ನವೆಂಬರ್ 24ರಂದು ಜಾಮೀನು ಸಿಕ್ಕಿತ್ತು. 1 ಲಕ್ಷ ರೂ. ಬಾಂಡ್, ಇಬ್ಬರ ಶ್ಯೂರಿಟಿಯೊಂದಿಗೆ 12 ಷರತ್ತು ವಿಧಿಸಿ ಕೋರ್ಟ್ ಜಾಮೀನು ಮಂಜೂರು ಮಾಡಿತ್ತು.

ಆದರೆ ಜಾಮೀನು ಸಿಕ್ಕಿದರೂ ಚಿನ್ನಯ್ಯನಿಗೆ ಶ್ಯೂರಿಟಿ ನೀಡಲು ಯಾರೂ ಮುಂದೆ ಬಂದಿರಲಿಲ್ಲ. ಇದೀಗ ಜಾಮೀನಿನಿಂದ ಹೊರಬಂದಿರುವ ಮಾಸ್ಕ್ ಮ್ಯಾನ್, ಮಹೇಶ್ ಶೆಟ್ಟಿ ತಿಮರೋಡಿ, ಗಿರೀಶ್ ಮಟ್ಟಣ್ಣವರ್, ವಿಠಲ ಗೌಡ, ಜಯಂತ್ ಹಾಗೂ ಸಮೀರ್ ಎಂ.ಡಿ. ವಿರುದ್ಧವೇ ಜೀವ ಬೆದರಿಕೆಯ ದೂರು ನೀಡಿದ್ದಾನೆ.

ಧರ್ಮಸ್ಥಳ ಪೊಲೀಸ್ ಠಾಣೆಗೆ ನೀಡಿದ ದೂರಿನಲ್ಲಿ ಈ ಐವರು ಹೋರಾಟಗಾರರು ತನಗೆ ಹಾಗೂ ತನ್ನ ಪತ್ನಿಯ ಜೀವಕ್ಕೆ ಕುತ್ತು ತರಬಹುದು.

# ಬಾಂಗ್ಲಾದೇಶದಲ್ಲಿ ಹಿಂಸಾಚಾರ: ಭಾರತೀಯ ಸಹಾಯಕ ಹೈಕಮಿಷನ್ ಕಚೇರಿ, ವೀಸಾ ಅರ್ಜಿ ಕೇಂದ್ರದಲ್ಲಿ ಬಿಗಿ ಭದ್ರತೆ

**ಢಾಕಾ:** ಪ್ರಮುಖ ವಿದ್ಯಾರ್ಥಿ ನಾಯಕ ಷರೀಫ್ ಉಸ್ಮಾನ್ ಹಾದಿ ಮರಣದ ನಂತರ ಬಾಂಗ್ಲಾದೇಶದಲ್ಲಿ ಹಿಂಸಾಚಾರ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ಬಾಂಗ್ಲಾದೇಶದಲ್ಲಿರುವ ಭಾರತೀಯ ಸಹಾಯಕ ಹೈಕಮಿಷನ್ ಕಚೇರಿ ಮತ್ತು ವೀಸಾ ಅರ್ಜಿ ಕೇಂದ್ರದಲ್ಲಿ ಭದ್ರತೆಯನ್ನು ಬಿಗಿಗೊಳಿಸಲಾಗಿದೆ.

ಢಾಕಾದ ಉಪಶಹರ್ ಪ್ರದೇಶದಲ್ಲಿರುವ ಸಹಾಯಕ ಹೈಕಮಿಷನ್ ಕಚೇರಿ, ಅದೇ ಪ್ರದೇಶದಲ್ಲಿರುವ ಸಹಾಯಕ ಹೈಕಮಿಷನರ್ ನಿವಾಸ ಮತ್ತು ಶೋಭಾನಿಘಾಟ್ ಪ್ರದೇಶದಲ್ಲಿರುವ ವೀಸಾ ಅರ್ಜಿ ಕೇಂದ್ರದಲ್ಲಿ ಶುಕ್ರವಾರ ಬೆಳಗ್ಗೆಯಿಂದ ಭದ್ರತೆಯನ್ನು ಹೆಚ್ಚಿಸಲಾಗಿದೆ.

ಗುಂಡಿನ ದಾಳಿಯಲ್ಲಿ ಹಾದಿ ಮೃತಪಟ್ಟ ಬಳಿಕ, ಇಂಕಿಲಾಬ್ ಮಂಚಾದ ವಕ್ತಾರ ಗೋನೊ ಓಧಿಕಾರ್, ಸಹಾಯಕ ಹೈಕಮಿಷನ್ ಕಚೇರಿಯನ್ನು ಮುತ್ತಿಗೆ ಹಾಕುವುದಾಗಿ ಘೋಷಿಸಿದ್ದರು. ಹೀಗಾಗಿ ರಾತ್ರಿಯಿಡೀ ಭದ್ರತೆಯನ್ನು ಕೈಗೊಳ್ಳಲಾಗಿತ್ತು. ಪರಿಸ್ಥಿತಿ ಉಲ್ಬಣಗೊಂಡಿರುವುದರಿಂದ ಯಾರೂ ಕೂಡ




ಹಿಂಸಾಚಾರ ಮಾಡದಂತೆ ಕ್ರಮ ಕೈಗೊಳ್ಳುವ ಸಲುವಾಗಿ ಭದ್ರತೆಯನ್ನು ಹೆಚ್ಚಿಸಲಾಗಿದೆ ಎಂದು ತಿಳಿದುಬಂದಿದೆ. ಹಾದಿ ಹತ್ಯೆಯನ್ನು ಪ್ರತಿಭಟಿಸಿ ಇಂಕಿಲಾಬ್ ಮಂಚಾ ಕಾರ್ಯಕರ್ತರು, ಸಿಲ್ಹೆಟ್ ಸೆಂಟ್ರಲ್ ಶಹೀದ್ ಮಿನಾರ್ ಮುಂದೆ ಧರಣಿ ನಡೆಸಿದ್ದರು. ಭಾರತದ ವಿರುದ್ಧ ಘೋಷಣೆ ಕೂಗಿದ್ದರು.

ಕಳೆದ ವರ್ಷ ಬಾಂಗ್ಲಾದೇಶದಲ್ಲಿ ಪ್ರಧಾನಿ ಶೇಖ್ ಹಸೀನಾ ನೇತೃತ್ವದ ಅವಾಮಿ ಲೀಗ್ ಸರ್ಕಾರವನ್ನು ಪದಚ್ಯುತಗೊಳಿಸಲು ಕಾರಣರಾದ ಪ್ರಮುಖ ನಾಯಕ ಮತ್ತು ಪ್ರಮುಖ ವ್ಯಕ್ತಿ ಹಾದಿ. ಮುಂದಿನ ವರ್ಷ ಫೆಬ್ರವರಿ 12 ರಂದು ನಡೆಯಲಿರುವ ಸಾರ್ವತ್ರಿಕ ಚುನಾವಣೆಗೆ ಅವರು ಅಭ್ಯರ್ಥಿಯಾಗಿದ್ದರು.

ಡಿಸೆಂಬರ್ 12 ರಂದು ಕೇಂದ್ರ ಢಾಕಾದ ಬಿಜೋಯ್‌ನಗರ ಪ್ರದೇಶದಲ್ಲಿ ಚುನಾವಣಾ ಪ್ರಚಾರದ ವೇಳೆ ಮುಸುಕುಧಾರಿ ಬಂದೂಕುಧಾರಿಗಳು ಹಾದಿ ಅವರ ಮೇಲೆ ಗುಂಡು ಹಾರಿಸಿದ್ದರು. ಅವರನ್ನು ಸಿಂಗಾಪುರದ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದ-ರೆ, ಚಿಕಿತ್ಸೆ ಫಲಕಾರಿಯಾಗದೆ ಅವರು ನಿಧನರಾದರು.

ಹೀಗಾಗಿ ಅವರ ನಿಧನದ ನಂತರ ಬಾಂಗ್ಲಾದೇಶದಲ್ಲಿ ಪ್ರತಿಭಟನೆ ಭುಗಿಲೆದ್ದಿತು.

ಚಟ್ಟೋಗ್ರಾಮ್‌ನಲ್ಲಿರುವ ಸಹಾಯಕ ಭಾರತೀಯ ಹೈಕಮಿಷನರ್ ನಿವಾಸದ ಮೇಲೆ ಕಲ್ಲು ತೂರಾಟ ಸೇರಿದಂತೆ ಬಾಂಗ್ಲಾದೇಶದಾದ್ಯಂತ ಹಿಂಸಾತ್ಮಕ ದಾಳಿಗಳು ಮತ್ತು ವಿಧ್ವಂಸಕ ಕೃತ್ಯಗಳು ನಡೆದಿವೆ. ಢಾಕಾ ವಿಶ್ವವಿದ್ಯಾಲಯದ ಮಸೀದಿಯ ಬಳಿಯ ರಾಷ್ಟ್ರೀಯ ಕವಿ ಕಾಜಿ ನಜ್ರುಲ್ ಇಸ್ಲಾಂ ಅವರ ಸಮಾಧಿಯ ಪಕ್ಕದಲ್ಲಿ ಶನಿವಾರ ಬಿಗಿ ಭದ್ರತೆಯ ನಡುವೆ 32 ವರ್ಷದ ಯುವ ನಾಯಕ ಹಾದಿಯ ಅಂತ್ಯಕ್ರಿಯೆ ನಡೆಸಲಾಯಿತು.

ಅಂತ್ಯಕ್ರಿಯೆಯ ಪ್ರಾರ್ಥನೆಯಲ್ಲಿ ಗೌರವ ಸಲ್ಲಿಸಲು ಸಾವಿರಾರು ಜನರು ನೆರೆದಿದ್ದರು.

ಇದಕ್ಕೂ ಮುನ್ನ ಅಲ್ಲಿ ನೆರೆದಿದ್ದ ಜನರು ಭಾರತ ವಿರೋಧಿ ಘೋಷಣೆಗಳನ್ನು ಕೂಗಿದರು. ಈ ಘೋಷಣೆಗಳಲ್ಲಿ ಸಹೋದರ ಹಾದಿಯ ರಕ್ತ ವ್ಯರ್ಥವಾಗಲು ಬಿಡುವುದಿಲ್ಲ ಎಂಬ ಪ್ರಚೋದನಕಾರಿ ಹೇಳಿಕೆ ನೀಡಿದ್ದಾರೆ.ಅಂತ್ಯಕ್ರಿಯೆಯ ನಂತರ, ಹಾದಿ ಅವರ ಪಕ್ಷವಾದ ಇಂಕಿಲಾಬ್ ಮಂಚಾ, ಮಧ್ಯಂತರ ಸರ್ಕಾರಕ್ಕೆ 24 ಗಂಟೆಗಳ ಗಡುವು ನೀಡಿ, ಅವರ ಹತ್ಯೆಗೆ ಕಾರಣರಾದವರನ್ನು ಬಂಧಿಸಬೇಕೆಂದು ಒತ್ತಾಯಿಸಿದರು.

# ಪಲ್ಸ್ ಪೋಲಿಯೊ, ಕಾರ್ಯಕ್ರಮದಲ್ಲಿ ಪಾಲ್ಗೊಂಡ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್

**ಹೊಸಪೇಟೆ:** ವಿಜಯನಗರ ಸಾಮ್ರಾಜ್ಯ ಒಂದು ಕಾಲಕ್ಕೆ ಇಡೀ ಜಗತ್ತನ್ನೇ ಸೆಳೆಯುವ ರೀತಿಯಲ್ಲಿ ಸಂಪದ್ಭರಿತವಾಗಿತ್ತು, ಅದರ ಪ್ರೇರಣೆಯಲ್ಲೇ ದೇಶ ಇಂದು ಅಭಿವೃದ್ಧಿಯತ್ತ ದಾಪುಗಾಲು ಇಡುತ್ತಿದೆ ಎಂದು ಕೇಂದ್ರದ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರ ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು.

ಕಮಲಾಪುರದ ಹಂಪಿ ವಿಶ್ವಪಾರಂಪರಿಕ ತಾಣ ನಿರ್ವಹಣಾ ಪ್ರಾಧಿಕಾರದ (ಹವಾಮ) ಆವರಣದಲ್ಲಿ ಭಾನುವಾರ ಗಿಡ ನೆಟ್ಟು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಮಕ್ಕಳಿಗೆ ಪೋಲಿಯೊ ಲಸಿಕೆ ಹಾಕಿದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ 2047ರ ವೇಳೆಗೆ ದೇಶವು ಜಗತ್ತಿನಲ್ಲೇ ಸಂಪದ್ಭರಿತ ಮತ್ತು ಮುಂದುವರಿದ ದೇಶವಾಗಿ ಹೊರಹೊಮ್ಮುವ ನಿಟ್ಟಿನಲ್ಲಿ ಶ್ರಮಿಸುತ್ತಿದೆ, ಅದಕ್ಕೆ ಪ್ರೇರಣೆ ವಿಜಯನಗರ ಎಂಬುದರಲ್ಲಿ ಎರಡು ಮಾತಿಲ್ಲ ಎಂದರು.



'ಎಲ್ಲರ ಅಭಿವೃದ್ಧಿ ವಿಜಯನಗರ ಕಾಲದ ರಾಜರ ಗುರಿಯಾಗಿತ್ತು. ಸಾಮ್ರಾಜ್ಯ ಸಂಪದ್ಭರಿತವಾಗಿದ್ದರೆ ಜನರೂ ಖುಷಿಯಿಂದ ಇರುತ್ತಾರೆ ಎಂಬುದು ವಿಜಯನಗರ ಅರಸರ ಕಾಳಜಿಯಾಗಿತ್ತು. ಇದೇ ಹಾದಿಯನ್ನು ಪ್ರಧಾನಿ ಮೋದಿ ಅವರೂ ತುಳಿದಿದ್ದಾರೆ. ಇದಕ್ಕಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದಾರೆ ಮತ್ತು ಅದನ್ನು ಸಮರ್ಪಕವಾಗಿ ಅನುಷ್ಠಾನಕ್ಕೆ ತರಲು ಶ್ರಮಿಸುತ್ತಿದ್ದಾರೆ. ಸಂಪದ್ಭರಿತ ದೇಶವನ್ನಾಗಿ ರೂಪಿಸಿ ಜನರು ಖುಷಿಯಿಂದ, ನೆಮ್ಮದಿಯಿಂದ ಬದುಕುವಂತೆ ಮಾಡುವ ಸಲುವಾಗಿಯೇ ಈ ಎಲ್ಲ ಕೆಲಸಗಳು ನಡೆಯುತ್ತಿವೆ' ಎಂದು ಸಚಿವೆ ನಿರ್ಮಲಾ ಹೇಳಿದರು.

'ಬಜೆಟ್ ಕುರಿತಂತೆ ಹಾಗೂ ದೇಶದ ಆರ್ಥಿಕ ಸ್ಥಿತಿಗತಿ ಕುರಿತಂತೆ ಎರಡು ವರ್ಷಗಳಿಗೆ ಒಮ್ಮೆ ಚಿಂತನ ಶಿಬಿರ ನಡೆಯುತ್ತದೆ, ಈ ಬಾರಿ ಅದನ್ನು ಹಂಪಿಯಲ್ಲಿ ನಡೆಸಿರುವುದಕ್ಕೆ ನಮಗೆ ಬಹಳ ಖುಷಿಯಾಗಿದೆ. ನನ್ನ ಜತೆಗೆ ಇಲಾಖೆಯ 120ಕ್ಕೂ ಅಧಿಕ ಅಧಿಕಾರಿಗಳು ಬಂದಿದ್ದಾರೆ. ಕಾರ್ಪೊರೇಟ್ ವ್ಯವಹಾರ ಖಾತೆ ರಾಜ್ಯ ಸಚಿವ ಹರ್ಷ ಮಲ್ಹೋತ್ರಾ ಸಹಿತ ಇಲ್ಲಿದ್ದಾರೆ. ಎಲ್ಲರೂ ವಿಶ್ವ ಪಾರಂಪರಿಕ ತಾಣ ಹಂಪಿಯನ್ನು ನೋಡಿ ಬಹಳ ಪ್ರೇರಿತರಾಗಿದ್ದಾರೆ' ಎಂದರು.

'ನೀವು ಚಿಂತನ ಶಿಬಿರದಲ್ಲಿ ಪಾಲ್ಗೊಂಡರಷ್ಟೇ ಸಾಲದು, ಇಲ್ಲಿ ನಿಮ್ಮ ಹೆಜ್ಜೆಗುರುತನ್ನು ಬಲವಾಗಿ ಊರಬೇಕು ಎಂದು ನಾನು ಅಧಿಕಾರಿಗಳಿಗೆ ಹೇಳಿದೆ, ಅದೇ ಕಾರಣಕ್ಕೆ ಅವರೆಲ್ಲರೂ ಇಲ್ಲಿಗೆ ಗಿಡ ನೆಡುವ ಕಾರ್ಯಕ್ರಮಕ್ಕೆ ಬಂದಿದ್ದಾರೆ ಹಾಗೂ ಅವರೆಲ್ಲರೂ ತಮ್ಮ ಹೆಸರಲ್ಲಿ ಒಂದೊಂದು ಗಿಡವನ್ನು ಇಲ್ಲಿ ನೆಟ್ಟಿದ್ದಾರೆ. ದೇಶದ ಭವಿಷ್ಯ ಇರುವುದು ಹಸಿರಿನಲ್ಲಿ, ಹಸಿರನ್ನು ಉಳಿಸುವ ಕೆಲಸ ಆಗಬೇಕು ಎಂಬ ಸಂದೇಶ ಈ ವಿಶ್ವಪಾರಂಪರಿಕ ತಾಣದಿಂದ ರವಾನೆಯಾಗಬೇಕಾಗಿದೆ' ಎಂದು ಸಚಿವರು ಹೇಳಿದರು.

# ಒಂದು ಕಂತು ಗೃಹಲಕ್ಷ್ಮಿ ನಾಳೆ ಬಿಡುಗಡೆ: ಲಕ್ಷ್ಮಿ ಹಬ್ಬಾಳ್ಕರ್

**ಬೆಂಗಳೂರು:** ಪ್ರತಿಯೊಂದು ಮನೆಯ ಗೃಹಲಕ್ಷ್ಮಿಯರ ಖಾತೆಗಳಿಗೆ ಒಂದು ಕಂತಿನ ಹಣ ಬಿಡುಗಡೆ ಮಾಡುವುದಾಗಿ ಮಹಿಳೆ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ.

ಬೆಳಗಾವಿಯಲ್ಲಿ ನಡೆದ ವಿಧಾನ ಮಂಡಲ ಅಧಿವೇಶನದಲ್ಲಿ ಗೃಹಲಕ್ಷ್ಮಿ ಹಣ ಬಿಡುಗ-'ಡೆ ವಿಚಾರಕ್ಕೆ ಸಂಬಂಧಿಸಿದಂತೆ ಸದನಕ್ಕೆ ಹೆಬ್ಬಾಳ್ಕರ್ ಅವರು ತಪ್ಪು ಮಾಹಿತಿ ನೀಡಿ-ದ್ದಾರೆ. ಈ ಬಗ್ಗೆ ಸಚಿವರು ಕ್ಷಮೆಯಾಚನೆಗೆ ಒತ್ತಾಯಿಸಿ, ಪ್ರತಿಪಕ್ಷಗಳು ಬಿಗಿಪಟ್ಟು ಹಿಡಿದು ಗದ್ದಲ ಕೋಲಾಹಲವೆಬ್ಬಿಸಿದವು.

ಇದರ ಬೆನ್ನಲ್ಲೇ ಸಚಿವರಿಂದ ಈ ಹೇಳಿಕೆ ಹೊರಬಿದ್ದಿದೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಹೆಬ್ಬಾಳ್ಕರ್ ತಾವು ಯಾವಾಗಲೂ ಕಂತು ಬಿಡುಗಡೆ ಮಾಡುವುದಾಗಿ ಹೇಳುತ್ತೇನೆ.



ತಿಂಗಳ ಹೆಸರು ಹೇಳುವುದಿಲ್ಲ. ಈಗಾಗಲೇ ಆರ್ಥಿಕ ಇಲಾಖೆಯವರು ಗೃಹಲಕ್ಷ್ಮಿ ಯೋಜನೆ 24ನೇ ಕಂತಿನ ಹಣ ಬಿಡುಗ-'ಡೆ ಮಾಡಿದ್ದಾರೆ. ನಾಳೆಯಿಂದ ಮುಂದಿನ ಶನಿವಾರದೊಳಗೆ 24ನೇ ಕಂತಿನ ಹಣ ಬಿಡುಗಡೆಯಾಗಲಿದೆ ಎಂದರು.

1.26 ಕೋಟಿ ಗೃಹಲಕ್ಷ್ಮಿಯ ಖಾತೆಗೆ ನಾಳೆಯಿಂದ ಹಣ ಬಿಡುಗಡೆಯಾಗಿದೆ. ಆದರೆ ಫೆಬ್ರವರಿ, ಮಾರ್ಚ್ ಹಣ ಬಿಡುಗ-'ಡೆ ಮಾಡುವ ಕುರಿತು ಸಚಿವರಿಂದ ಸ್ಪಷ್ಟೀಕರಣ ಹೊರಬಿದ್ದಿಲ್ಲ.

ಸತ್ತವರ ಖಾತೆಗೂ ಗೃಹಲಕ್ಷ್ಮಿ ಯೋಜನೆ ಹಣ ಪಾವತಿಸುವ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಈ ಬಗ್ಗೆ ಮುಖ್ಯ ಕಾಯದರ್ಶಿ ನೇತೃತ್ವದಲ್ಲಿ ಎರಡು ಬಾರಿ ಸಭೆ ನಡೆಸಲಾಗಿದೆ. ಸತ್ತವರ ಖಾತೆಗೆ ಹಣ ಸಂದಾಯವಾದರೆ ಗೊತ್ತಾಗುವುದಿಲ್ಲ. ಈಗ ಸಾಫ್ಟ್ ವೇರ್ ಅಭಿವೃದ್ಧಿ ಪಡಿಸಿದ್ದೇವೆ.

ಮರಣ ಪ್ರಮಾಣ ಪತ್ರಗಳನ್ನು ಅಂಗನವಾಡಿ ಕಾರ್ಯಕರ್ತರು ಪರಿಶೀಲನೆ ಮಾಡುತ್ತಾರೆ. ಹೀಗಾಗಿ ಅದನ್ನು ಸದ್ಯಕ್ಕೆ ತಡೆಹಿಡಿದಿದ್ದೇವೆ. ತಪ್ಪಾಗಿ ಖಾತೆಗೆ ಜಮೆಯಾಗಿರುವ ಹಣವನ್ನು ವಾಪಸ್ ಪಡೆಯುವ ಜವಾಬ್ದಾರಿಯನ್ನು ಕೆಲವು ಬ್ಯಾಂಕಿಗೆ ಕೊಟ್ಟಿದ್ದೇವೆ ಎಂದರು.

ಬೆಳಗಾವಿ ಜಿಲ್ಲೆ ವಿಭಜನೆ ಮಾಡುವ ಕುರಿತು ಪ್ರತಿಕ್ರಿಯಿಸಿದ ಅವರು, ಮುಖ್ಯಮಂತ್ರಿಗಳ ಮನಸ್ಸಿನಲ್ಲಿ ಬೆಳಗಾವಿ ಜಿಲ್ಲೆಯನ್ನು ವಿಭಜನೆ ಮಾಡುವ ಪ್ರಸ್ತಾಪವಿದೆ. ಆಡಳತ್ಮಾಕ, ಅಭಿವೃದ್ಧಿ ದೃಷ್ಟಿಯಿಂದ ಜಿಲ್ಲೆ ವಿಭಜನೆ ಆಗಬೇಕಾಗಿದೆ. ಬೆಳಗಾವಿ ತಾಲ್ಲೂಕಿನಲ್ಲಿ 11ವರೆ ಲಕ್ಷ ಜನಸಂಖ್ಯೆಯಿದೆ. ಎಷ್ಟೊಂದು ಜನಸಂಖ್ಯೆಗೆ ಓರ್ವ ತಹಸೀಲ್ದಾರ್ ಇದ್ದಾರೆ.


ಇದರಿಂದ ತೊಂದರೆಯಾಗುತ್ತದೆ ಎಂದರು.

ಬೆಳಗಾವಿ ಜಿಲ್ಲೆಯಲ್ಲಿ 19 ತಾಲ್ಲೂಕುಗಳು ಆಗುವ ಸಾಧ್ಯತೆಯಿದೆ. ಜಿಲ್ಲೆ ವಿಭಜನೆ ಘೋಷಣೆ ಮಾಡುವ ಮನಸ್ಸಿನಿಂದಲೇ ಮುಖ್ಯಮಂತ್ರಿಗಳು ಬಂದಿದ್ದರು. ಆದರೆ ಬಹಳಷ್ಟು ಜನರು ನಿಯೋಗ ಬಂದಿದ್ದರಿಂದ ಚಿಂತನೆ ಮಾಡಿಲ್ಲ ಎಂದಿದ್ದಾರೆ.

# ಅಕ್ರಮ ಬೆಟ್ಟಿಂಗ್ ಆಪ್: ಯುವರಾಜ್ ಸಿಂಗ್ ಸೇರಿ ಖ್ಯಾತ ಸೆಲೆಬ್ರಿಟಿಗಳ ಆಸ್ತಿ ಇಡಿ ವಶಕ್ಕೆ!

**ಹೊಸದಿಲ್ಲಿ:** ಇತ್ತೀಚೆಗೆ ಆನ್‌ಲೈನ್ ಬೆಟ್ಟಿಂಗ್ ಆಪ್‌ಗಳಿಗೆ ಸಂಬಂಧಿಸಿದ ಪ್ರಕರಣಗಳು ಹೆಚ್ಚಾಗುತ್ತಿದೆ.. ಈಗಾಗಲೇ ಕೆಲವೊಂದಿಷ್ಟು ಸೆಲೆಬ್ರಿಟಿಗಳು ಈ ಜಾಲಕ್ಕೆ ಸಿಲುಕಿ ಸಮಸ್ಯೆ ಎದುರಿಸಿದ್ದರು. ಇದೀಗ ಇದೇ ವಿಚಾರವಾಗಿ ಮಾಜಿ ಕ್ರಿಕೆಟಿಗರಾದ ಯುವರಾಜ್ ಸಿಂಗ್, ರಾಬಿನ್ ಉತ್ತಪ್ಪ ಹಾಗೂ ನಟ ಸೋನು ಸೂದ್ ಸೇರಿದಂತೆ ಖ್ಯಾತ ಸೆಲೆಬ್ರಿಟಿಗಳಿಗೆ ಜಾರಿ ನಿರ್ದೇಶನಾಲಯ ಸಮನ್ಸ್ ಜಾರಿ ಮಾಡಿದೆ.

ಬೆಟ್ಟಿಂಗ್ ಆಪ್ ಗಳನ್ನು ಪ್ರಮೋಟ್ ಮಾಡಿದ್ದ ಕಾರಣ ಬೆಟ್ಟಿಂಗ್ ಜಾಲದ ವಿರುದ್ಧ ಸಮರ ಸಾರಿರುವ ಜಾರಿ ನಿರ್ದೇಶನಾಲಯ ಇದೀಗ ದೊಡ್ಡ ಮಟ್ಟದ ಕ್ರಮ ಕೈಗೊಂಡಿ-ದೆ. ನಿಷೇಧಿತ ಆಫ್‌ಶೋರ್ ಬೆಟ್ಟಿಂಗ್ ಪ್ಲಾಟ್‌ಫಾರ್ಮ್ ಆದ '1ಥಃಜಣ' ಮತ್ತು ಅದರ ಅಂಗಸಂಸ್ಥೆಗಳನ್ನು ಪ್ರಚಾರ ಮಾಡಿದ ಕಾರಣ ಸೆ.22ಕ್ಕೆ ರಾಬಿನ್ ಉತ್ತಪ್ಪ ಸೆ.23ಕ್ಕೆ ಯುವ ರಾಜ್ ಸಿಂಗ್ ಹಾಗೂ ಸೆ. 24ಕ್ಕೆ ನಟ ಸೋನು ಸೂದ್ ಅವರನ್ನು ವಿಚಾರಣೆಗೆ ಹಾಜರಾಗುವಂತೆ ಸೂಚನೆ ನೀಡಲಾಗಿದೆ.



ಇದೀಗ ಯುವರಾಜ್ ಸಿಂಗ್ ಸುಮಾರು 2.5 ಕೋಟಿ ರೂ., ರಾಬಿನ್ ಉತ್ತಪ್ಪದ್ದು 8.26 ಲಕ್ಷ ರೂ., ಮಿಮಿ ಚಕ್ರವರ್ತಿ ಅವರ 59 ಲಕ್ಷ ರೂ., ಸೋನು ಸೂದ್ ಅವರ 1 ಕೋಟಿ ರೂ., ನೇಹಾ ಶರ್ಮಾ ಅವರ 1.26 ಕೋಟಿ ರೂ., ಬಂಗಾಳಿ ನಟ ಅಂಕುಶ್ ಹಜ್ರಾ ಅವರ 47 ಲಕ್ಷ ರೂ. ಮತ್ತು ಮಾಡೆಲ್ ಊರ್ವಶಿ ರೌಟೇಲಾ ಅವರ 2.02 ಕೋಟಿ ರೂ. ಆಸ್ತಿಗಳನ್ನು ಜಪ್ತಿ ಮಾಡಲಾಗಿದೆ. ಹಣ ವರ್ಗಾವಣೆ ತಡೆ ಕಾಯ್ದೆ, 2002ರ ಅಡಿಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಇಡಿ ಅಧಿಕಾರಿಗಳು ತಿಳಿಸಿದ್ದಾರೆ.

**ತನಿಖೆಯಲ್ಲಿ ಬಯಲಾದ ವಿಚಾರವೇನು?**

ಅಕ್ರಮ ಆಫ್‌ಶೋರ್ ಬೆಟ್ಟಿಂಗ್ ಪ್ಲಾಟ್‌ಫಾರ್ಮ್ 1ಥಃಜಣ ನ ನಿರ್ವಾಹಕರ ವಿರುದ್ಧ ವಿವಿಧ ರಾಜ್ಯ ಪೊಲೀಸ್ ಸಂಸ್ಥೆಗಳು ಕೈಗೊಂಡ ಎಫ್‌ಐಆರ್‌ಗಳ ಆಧಾರದ ಮೇಲೆ ಈ ಕ್ರಮ ಕೈಗೊಳ್ಳಲಾಗಿದೆ. ಇಡಿ ಪ್ರಕಾರ '1xBet' ಪ್ಲಾಟ್‌ಫಾರ್ಮ್ ಕಾನೂನುಬಾಹಿರವಾಗಿ ಕಾರ್ಯನಿರ್ವಹಿಸುತ್ತಿದೆ.

ಈ ನಿಟ್ಟಿ ನಲ್ಲಿ ಖ್ಯಾತ ಸೆಲೆಬ್ರಿಟಿಗಳು ಈ ಬ್ರ್ಯಾಂಡ್‌ಗಳ ಹೆಸರಿನಲ್ಲಿ ಸೋಷಿಯಲ್ ಮೀಡಿಯಾ ಮತ್ತು ಜಾಹೀರಾತುಗಳ ಮೂಲಕ ಪ್ರಚಾರ ಮಾಡಿದ್ದರು. ಇದರಲ್ಲಿ ಬೆಟ್ಟಿಂಗ್ ದಂಧೆಯ ಮೂಲಕ ಸಂಗ್ರಹವಾದ ಹಣವನ್ನೇ ಸಂಭಾವನೆಯಾಗಿ ನೀಡಲಾಗಿದೆ.

ಈ ಹಣವನ್ನು ವಿದೇಶಿ ಮಧ್ಯವರ್ತಿಗಳ ಮೂಲಕ ವರ್ಗಾವಣೆ ಮಾಡುವ ಮೂಲಕ ಇದರ ಮೂಲವನ್ನು ಮರೆಮಾಚಲು ಪ್ರಯತ್ನ ಕೂಡ ಮಾಡಲಾಗಿತ್ತು ಎಂದು ಆರೋಪಿಸಲಾಗಿದೆ. ಇದೀಗ ಅಕ್ರಮ ಬೆಟ್ಟಿಂಗ್ ಅಪ್ಲಿಕೇಶನ್‌ಗಳನ್ನು ಪ್ರಚಾರ ಮಾಡುವ ಸೆಲೆಬ್ರಿಟಿಗಳಿಗೆ ಇಡಿ ಕಟ್ಟು ನಿಟ್ಟಿನ ಎಚ್ಚರಿಕೆ ನೀಡಿದೆ

ಇದಕ್ಕೂ ಮುನ್ನ ಇಡಿ ಅಧಿಕಾರಿಗಳು ಕ್ರಿಕೆಟಿಗರಾದ ಸುರೇಶ್ ರೈನಾ ಮತ್ತು ಶಿಖರ್ ಧವನ್ ಅವರಿಗೆ ಸೇರಿದ ಆಸ್ತಿಯನ್ನು ಜಪ್ತಿ ಮಾಡಿದ್ದರು.

ಈಗಾಗಲೇ ಬೆಟ್ಟಿಂಗ್ ಆಪ್‌ಗಳ ಪ್ರಚಾರದಲ್ಲಿದ್ದ ಹಲ ವಾರು ಬಾಲಿವುಡ್ ನಟ ನಟಿಯರು ಹಾಗೂ ಕ್ರಿಕೆಟಿಗರಿಗೂ ನೋಟಿಸ್ ನೀಡಿ ವಿಚಾರಣೆ ನಡೆಸುತ್ತಿದೆ.

# ರಾಜಧಾನಿ ಎಕ್ಸ್‌ಪ್ರೆಸ್ ರೈಲು ಡಿಕ್ಕಿ 8 ಆನೆಗಳ ಸಾವು

**ನವದೆಹಲಿ:** ಅಸ್ಸಾಂನ ಸೈರಾಂಗ್-ನವದೆಹಲಿ ರಾಜಧಾನಿ ಎಕ್ಸ್‌ಪ್ರೆಸ್ ರೈಲು ಆನೆಗಳ ಹಿಂಡಿಗೆ ಡಿಕ್ಕಿ ಹೊಡೆದ ಪರಿಣಾಮ ಎಂಟು ಕಾಡಾನೆಗಳು ಸಾವನ್ನಪ್ಪಿವೆ. 5 ಬೋಗಿಗಳು ಹೊಜೈ ಜಿಲ್ಲೆಯಲ್ಲಿ ರೈಲು ಹಳಿತಪ್ಪಿರುವ ಘಟನೆ ನಡೆದಿದೆ.

ರೈಲು ಹಳಿ ದಾಟುತ್ತಿದ್ದ ವೇಳೆ ಆನೆಗಳ ಹಿಂಡಿಗೆ ರಾಜಧಾನಿ ಎಕ್ಸ್ ಪ್ರೆಸ್ ರೈಲು ಡಿಕ್ಕಿ ಹೊಡೆದು ಈ ಅವಘಡ ಸಂಭವಿಸಿದೆ.

ಡಿಕ್ಕಿಯ ರಭಸಕ್ಕೆ ಐದು ಬೋಗಿಗಳು ಹಳಿ ತಪ್ಪಿವೆ. ಆದರೆ ರೈಲಿನಲ್ಲದ್ದ ಪ್ರಯಾಣಿಕರಿಗೆ ಯಾವುದೇ ಪ್ರಾಣಾಪಾಯವಾಗಿಲ್ಲ ಎಂದು ಈಶಾನ್ಯ ಫ್ರಂಟಿಯರ್ ರೈಲ್ವೆ ವಕ್ತಾರರು ಮಾಹಿತಿ ನೀಡಿದ್ದಾರೆ.

ಇಂದು ನಸುಕಿನ ಜಾವ 2.17ರಲ್ಲಿ ಹೋಜಾಯಿ ಜಿಲ್ಲೆಯ ಚಾಂಗ್‌ಜುರಾಯಿ ಬಳಿ ಅವಘಡ ನಡೆದಿದೆ ಎಂದು ನಾಗೌನ್



ವಲಯ ಅರಣ್ಯಾಧಿಕಾರಿ ಸುಹಾಸ್ ಕದಂ ಮಾಧ್ಯಮಗಳಿಗೆ ಮಾಹಿತಿ ನೀಡಿದ್ದಾರೆ.ನಾಗಾಂವ್ ವಿಭಾಗದ ಹಲವು ಅರಣ್ಯ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿದ್ದು ರಕ್ಷಣಾ ಕಾರ್ಯದಲ್ಲಿ ನಿರತರಾಗಿದ್ದಾರೆ ರೈಲ್ವೆ ಸಂಚಾರದಲ್ಲಿ ಅಡಚಣೆ ಉಂಟಾಗಿದ್ದು, ಜಮುನಾಮುಖ್-ಕಂಪುರ ವಿಭಾಗದಲ್ಲಿ ನಿಗದಿತ ರೈಲುಗಳನ್ನು ಮತ್ತೊಂದು ಮಾರ್ಗದ ಮೂಲಕ ಮಾರ್ಗ ಬದಲಾಯಿಸಲಾಗಿದೆ.

ಬೆಳಗಿನ ಜಾವ ಎರಡು ಸುಮಾರಿಗೆ ಅಪಘಾತ ಸಂಭವಿಸಿದೆ. ಘಟನೆಯ ನಂತರ, ರಾಜ್ಯದ ನಾಗಾಂವ್ ವಿಭಾಗದ ಹಲವಾರು ಅರಣ್ಯ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿದರು. ರೈಲ್ವೆ ಸಂಚಾರದಲ್ಲಿ ಅಡಚಣೆ ಉಂಟಾಗಿದೆ.

ಜಮುನಾಮುಖ್-ಕಂಪುರ ವಿಭಾಗದಲ್ಲಿ ನಿಗದಿತ ರೈಲುಗಳನ್ನು ಯುಪಿ ಮಾರ್ಗದ ಮೂಲಕ ತಿರುಗಿಸಲಾಗುವುದು ಎಂದು ಅರಣ್ಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಅಪಘಾತದ ಹಿಂದಿನ ನಿಜವಾದ ಕಾರಣ ಇನ್ನೂ ತಿಳಿದುಬಂದಿಲ್ಲ. ಅಧಿಕಾರಿಗಳು ಘಟನೆಯ ಬಗ್ಗೆ ಸಮಗ್ರ ತನಿಖೆ ನಡೆಸಿ ಆನೆಗಳು ಇದ್ದಕ್ಕಿದ್ದಂತೆ ರೈಲಿನ ಮುಂದೆ ಬಂದಿವೆಯೇ ಎಂದು ಪರಿಶೀಲನೆ ನಡೆಸಿದ್ದಾರೆ.

## ಲಂಚ ಸ್ವೀಕಾರದ ಆರೋಪ, ಲೆಫ್ಟಿನೆಂಟ್ ಕರ್ನಲ್ ಬಂಧನ




**ಬೆಂಗಳೂರು:** ರಕ್ಷಣಾ ಸಚಿವಾಲಯದ ರಕ್ಷಣಾ ಉತ್ಪಾದನಾ ಇಲಾಖೆಗೆ ನಿಯೋಜನೆಗೊಂಡಿದ್ದ ಅಧಿಕಾರಿ ಲೆಫ್ಟಿನೆಂಟ್ ಕರ್ನಲ್ ದೀಪಕ್ ಕುಮಾರ್ ಶರ್ಮಾ ಹಾಗೂ ವಿನೋದ್ ಕುಮಾರ್ ಎಂಬುವರನ್ನು ಭ್ರಷ್ಟಾಚಾರದ ಆರೋಪದಡಿ ಕೇಂದ್ರೀಯ ತನಿಖಾ ದಳ (ಸಿಬಿಐ) ಬಂಧಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಬೆಂಗಳೂರು ಮೂಲದ ಕಂಪನಿಯೊಂದರಿಂದ 3 ಲಕ್ಷ ರೂಪಾಯಿ ಲಂಚ ಸ್ವೀಕರಿಸಿದ ಆರೋಪದಡಿ ದೀಪಕ್ ಕುಮಾರ್ ಶರ್ಮಾ ಅವರನ್ನು ಬಂಧಿಸಲಾಗಿದೆ. ಶನಿವಾರ ಶರ್ಮಾ ಅವರ ದೆಹಲಿ ನಿವಾಸದಲ್ಲಿ ಶೋಧ ಕಾರ್ಯಾಚರಣೆ ಕೈಗೊಂಡಿದ್ದ ಸಿಬಿಐ ಅಧಿಕಾರಿಗಳು, 2.23 ಕೋಟಿ ರೂಪಾಯಿ ನಗದು ವಶಪಡಿಸಿಕೊಂಡಿರುವುದಾಗಿ ತಿಳಿಸಿದ್ದಾರೆ.

ರಕ್ಷಣಾ ಸಚಿವಾಲಯದ ಉತ್ಪಾದನಾ ಇಲಾಖೆಯ ಸಹಾಯಕ ಯೋಜನಾ ಅಧಿಕಾರಿಯಾಗಿ (ಅಂತಾರಾಷ್ಟ್ರೀಯ ಸಹಕಾರ ಮತ್ತು ರಫ್ತು) ದೀಪಕ್ ಕುಮಾರ್ ಶರ್ಮಾ ಕಾರ್ಯನಿರ್ವಹಿಸುತ್ತಿದ್ದರು. ಅವರ ಪತ್ನಿ ಕರ್ನಲ್ ಕಾಜಲ್ ಬಾಲಿ ರಾಜಸ್ಥಾನದ ಶ್ರೀಗಂಗಾನಗರದಲ್ಲಿ 16ನೇ ಪದಾತಿ ದಳದ ಅಧಿಕಾರಿಯಾಗಿದ್ದಾರೆ. ಇಬ್ಬರ ವಿರುದ್ಧವೂ ಸಿಬಿಐ ಪ್ರಕರಣ ದಾಖಲಿಸಿದೆ.

ಶರ್ಮಾ ಅವರು ರಕ್ಷಣಾ ಉತ್ಪನ್ನಗಳ ಉತ್ಪಾದನೆ ರಫ್ತು ಸೇರಿ ಇನ್ನಿತರ ವ್ಯವಹಾರಗಳಲ್ಲಿ ಖಾಸಗಿ ಕಂಪನಿ ಅಧಿಕಾರಿಗಳಿಗೆ ಅನುಕೂಲ ಮಾಡಿಕೊಡಲು ಲಂಚ ಪಡೆಯುತ್ತಿದ್ದಾರೆ ಎನ್ನುವ ಆರೋಪ ಕೇಳಿ ಬಂದಿತ್ತು. ಇದರ ಬೆನ್ನಲ್ಲೇ ಶರ್ಮಾ ಮತ್ತು ಅವರ ಪತ್ನಿ ಕರ್ನಲ್ ಕಾಜಲ್ ಬಾಲಿ ವಿರುದ್ಧ ಪ್ರಕರಣ ದಾಖಲಿಸಲಾಗಿತ್ತು ಎಂದು ಸಿಬಿಐ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಬೆಂಗಳೂರು ಮೂಲದ ಕಂಪನಿಯಿಂದ ಶರ್ಮಾ ಅವರು ಲಂಚ ಸ್ವಿಕರಿಸಿರುವುದರ ಕುರಿತು ಸಿಬಿಐ ಮಾಹಿತಿ ಕಲೆ ಹಾಕಿತ್ತು. ಈ ಕಂಪನಿಯ ವ್ಯವಹಾರಗಳನ್ನು ನೋಡಿಕೊಳ್ಳುತ್ತಿದ್ದ ರಾಜೀವ್ ಯಾದವ್ ಮತ್ತು ರವಜಿತ್ ಸಿಂಗ್ ಜೊತೆ ಶರ್ಮಾ ನಿರಂತರ ಸಂಪರ್ಕದಲ್ಲಿದ್ದರು. ಅವರ ಜತೆಗೂಡಿ, ವಿವಿಧ ಸರ್ಕಾರಿ ಇಲಾಖೆಗಳು ಮತ್ತು ಸಚಿವಾಲಯಗಳಿಂದ ಕಾನೂನುಬಾಹಿರ ವಿಧಾನಗಳ ಮೂಲಕ ಲಂಚ ಪಡೆಯುತ್ತಿದ್ದರು. ಈ ಕಂಪನಿಯ ಸೂಚನೆಯ ಮೇರೆಗೆ ವಿನೋದ್ ಕುಮಾರ್, ಶರ್ಮಾರಿಗೆ 3 ಲಕ್ಷ ರೂಪಾಯಿ ಹಣವನ್ನು ಡಿಸೆಂಬರ್ 18ರಂದು ನೀಡಿದ್ದರು ಎಂದು ಸಿಬಿಐ ಪ್ರಕಟಣೆಯಲ್ಲಿ ತಿಳಿಸಿದೆ.

## ಎನ್‌ಐಎಯಿಂದ ಸಲಾವುದ್ದೀನ್ ವಿರುದ್ಧ ಜಾಮೀನು ರಹಿತ ವಾರೆಂಟ್

**ಜಮ್ಮು-ಕಾಶ್ಮೀರ:** ಜಮ್ಮು ಮತ್ತು ಕಾಶ್ಮೀರದ ಬುಡ್ಗಾಮ್ ಜಿಲ್ಲೆಯ ರಾಷ್ಟ್ರೀಯ



ತನಿಖಾ ಸಂಸ್ಥೆ (ಎನ್‌ಐಎ) ವಿಶೇಷ ನ್ಯಾಯಾಲಯವು ಭಯೋತ್ಪಾದನೆಯ ವಿರುದ್ಧ ಮಹತ್ವದ ತೀರ್ಪು ನೀಡಿದೆ. ಪಾಕಿಸ್ತಾನದಲ್ಲಿ ವಾಸಿಸುತ್ತಿರುವ ಹಿಜ್ಬುಲ್ ಮುಜಾಹಿದ್ದೀನ್ ಮುಖ್ಯಸ್ಥ ಮೊಹಮ್ಮದ್ ಯೂಸುಫ್ ಶಾ ಅಲಿಯಾಸ್ ಸೈಯದ್ ಸಲಾಹುದ್ದೀನ್ ವಿರುದ್ಧ ನ್ಯಾಯಾಲಯವು ಜಾಮೀನು ರಹಿತ ವಾರೆಂಟ್ ಹೊರಡಿಸಿದೆ. ಇದರೊಂದಿಗೆ, ಜಮ್ಮು ಮತ್ತು ಕಾಶ್ಮೀರ ಪೊಲೀಸರಿಗೆ ಆತನನ್ನು ಬಂಧಿಸಲು ಆದೇಶಿಸಲಾಗಿದೆ. ಈ ನಿರ್ಧಾರವನ್ನು ದೀರ್ಘಕಾಲದಿಂದ ನಡೆಯುತ್ತಿರುವ ಭಯೋತ್ಪಾದನಾ ಪ್ರಕರಣಗಳಲ್ಲಿ ಮಹತ್ವದ ತಿರುವು ಎಂದು ಪರಿಗಣಿಸಲಾಗುತ್ತಿದೆ.

ಸೈಯದ್ ಸಲಾವುದ್ದೀನ್ ಕಳೆದ ಹಲವು ದಶಕಗಳಿಂದ ಪಾಕಿಸ್ತಾನದಲ್ಲಿ ವಾಸಿಸುತ್ತಿದ್ದು ಭದ್ರತಾ ಸಂಸ್ಥೆಗಳ ಪ್ರಕಾರ, ಅವನು ಅಲ್ಲಿಂದ ಕಾಶ್ಮೀರ ಕಣಿವೆಯಲ್ಲಿ ಭಯೋತ್ಪಾದಕ ಚಟುವಟಿಕೆಗಳನ್ನು ನಡೆಸುತ್ತಿದ್ದು ಆರೋಪಿ ಬಂಧನದಿಂದ ತಪ್ಪಿಸಿಕೊಳ್ಳುತ್ತಿದ್ದಾನೆ ಮತ್ತು ಭಾರತದ ಸಾರ್ವಭೌಮತ್ವಕ್ಕೆ ಗಂಭೀರ ಬೆದರಿಕೆಯನ್ನು ಒಡ್ಡುತ್ತಿದ್ದಾನೆ ಎಂದು ನ್ಯಾಯಾಲಯವು ತನ್ನ ಆದೇಶದಲ್ಲಿ ಸ್ಪಷ್ಟವಾಗಿ ಹೇಳಿದೆ. ಈ ಆಧಾರದ ಮೇಲೆ, ಅವರ ವಿರುದ್ಧ ಜಾಮೀನು ರಹಿತ ವಾರಂಟ್ ಹೊರಡಿಸುವುದು ಅಗತ್ಯವಾಗಿತ್ತು ಎನ್ನಲಾಗಿದೆ.

ಈ ಜಾಮೀನು ರಹಿತ ವಾರೆಂಟ್ 2012 ರಲ್ಲಿ ದಾಖಲಾಗಿದ್ದ ಭಯೋತ್ಪಾದನಾ ಪ್ರಕರಣಕ್ಕೆ ಸಂಬಂಧಿಸಿದೆ. ಸಲಾವುದ್ದೀನ್ ವಿರುದ್ಧ ಪಿತೂರಿ, ಹಿಂಸಾಚಾರಕ್ಕೆ ಪ್ರಚೋದನೆ ಮತ್ತು ಭಯೋತ್ಪಾದಕ ಸಂಘಟನೆಗಳಿಗೆ ಬೆಂಬಲ ನೀಡಿದ ಗಂಭೀರ ಆರೋಪಗಳಿವೆ. ತನಿಖೆಯ ಸಮಯದಲ್ಲಿ ಸಂಗ್ರಹಿಸಿದ ಪುರಾವೆಗಳು ಆರೋಪಿಯು ಭಯೋತ್ಪಾದಕ ಚಟುವಟಿಕೆಗಳಲ್ಲಿ ನೇರ ಭಾಗಿಯಾಗಿರುವುದನ್ನು ಪ್ರಾಥಮಿಕವಾಗಿ ಕಂಡು ಬಂದಿದೆ ಎಂದು ನ್ಯಾಯಾಲಯ ಹೇಳಿದೆ.

## ಚೆನಾಬ್ ನದಿ ನೀರು ಹರಿವಿನ ದಿಕ್ಕು ಬದಲು, ಪಾಕ್ ಕಳವಳ

**ಇಸ್ಲಾಮಾಬಾದ್:** ಸಿಂಧೂ ನದಿ ನೀರು ಒಪ್ಪಂದವನ್ನು ಸ್ಥಗಿತಗೊಳಿಸಿದ ನಂತರ, ಪಾಕಿಸ್ತಾನ ಮತ್ತೊಮ್ಮೆ ಕಳವಳ ವ್ಯಕ್ತಪಡಿಸಿದೆ. ಈ ಬಾರಿ, ಚೆನಾಬ್ ನದಿಯ ನೀರಿನ ಹರಿವಿನಲ್ಲಿನ ಬದಲಾವಣೆಯ ಬಗ್ಗೆ ತನ್ನ ಆತಂಕ ವ್ಯಕ್ತಪಡಿಸಿದೆ. ಭಾರತವು ಚೆನಾಬ್ ನದಿಯ ನೀರಿನ ಹರಿವನ್ನು ಹಠಾತ್ತನೆ ಬದಲಾಯಿಸಿದೆ, ಇದು ತನ್ನ ಕೃಷಿ, ಆಹಾರ ಭದ್ರತೆ ಮತ್ತು ಆರ್ಥಿಕ ಪರಿಸ್ಥಿತಿಗೆ ಗಂಭೀರ ಅಪಾಯವನ್ನುಂಟು ಮಾಡಿದೆ ಎಂದು ಪಾಕಿಸ್ತಾನ ಆರೋಪಿಸಿದೆ.

ಈ ವಿಷಯದ ಬಗ್ಗೆ ಸ್ಪಷ್ಟೀಕರಣವನ್ನು ಕೋರಿ ಪಾಕಿಸ್ತಾನದ ಸಿಂಧೂ ಜಲ ಆಯುಕ್ತರು ಭಾರತಕ್ಕೆ ಪತ್ರ ಬರೆದಿದ್ದಾರೆ. ಇಸ್ಲಾಮಾಬಾದ್‌ನ ವಿದೇಶಾಂಗ ಕಚೇರಿಯ ವಕ್ತಾರ ತಾಹಿರ್ ಹುಸೇನ್ ಅಂದ್ರಾಬಿ, ಚೆನಾಬ್ ನದಿ ನೀರಿನ ಹರಿವಿನಲ್ಲಿ ಕಡಿತವು ಪಾಕಿಸ್ತಾನದ ಕೃಷಿ ಚಕ್ರದಲ್ಲಿ ನಿರ್ಣಾಯಕ ಸಮಯದಲ್ಲಿ ಕಾಣಿಸುತ್ತದೆ ಎಂದು ಹೇಳಿದ್ದಾರೆ. ಭಾರತವು ಏಕಪಕ್ಷೀಯ ನೀರಿನ ನಿರ್ವಹಣೆಯಿಂದ ದೂರವಿರಬೇಕು ಮತ್ತು ಸಿಂಧೂ ಜಲ ಒಪ್ಪಂದದ ನಿಯಮಗಳನ್ನು ಪಾಲಿಸಬೇಕೆಂದು ಅವರು ಒತ್ತಾಯಿಸಿದ್ದಾರೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**